ಬೀದರ * ಕಲಬುರಗಿ * ಯಾದಗಿರಿ * ರಾಯಚೂರು * ಕೊಪ್ಪಳ * ಬಳ್ಳಾರಿ * ಬಾಗಲಕೋಟೆ * ವಿಜಯಪೂರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Registration No. BDR/054/2026-2027 EMAIL ID:mallammanudi@gmail.com E- Paper WWW.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

Mallammanudi Regional NewsPaper ಸಂಪಾದಕರು: ರಮೇಶರೆಡ್ಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆ ಮೊ.9448604450

VOLUME-ಸಂಪುಟ:12 | ISSUE- ಸಂಚಿಕೆ: 340 | PAGE- ಪುಟ 8 | ಶುಕ್ರವಾರ 10.01.2025 ಬೀದರ | RNI NO:KARKAN/2011/48371 | RS.ಬೆಲೆ 2/-

# ಪ್ರಿಯಾಂಕ ಸಿಎಂ, ಮಲ್ಲಿಕಾರ್ಜುನ ಖರ್ಗೆ ಪಿಎಂ:ಚಿಂಚನಸೂರ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜ.09:ಭೂಮಿಯ ಮೇಲೆ ಸೂರ್ಯ, ಚಂದ್ರರು ಇರುವುದುಎಷ್ಟುಸತ್ಯವಾಗಿದೆಯೋ ಅಷ್ಟೇ ಸತ್ಯವಾಗಿ ದೇಶಕ್ಕೆ ಮಲ್ಲಿಕಾರ್ಜುನ ಖರ್ಗೆ ಪ್ರಧಾನಮಂತ್ರಿ ಆಗುವುದು ಹಾಗೂ ರಾಜ್ಯಕ್ಕೆ ಅವರ ಪುತ್ರ ಪ್ರಿಯಾಂಕ ಖರ್ಗೆ ಮುಖ್ಯಮಂತ್ರಿಆಗುವುದು ಅಷ್ಟೇ ಸತ್ಯಎಂದು ಮಾಜಿ ಸಚಿವರೂ ಆಗಿರುವ ಹಾಲಿ ಅಂಬಿಗರ ಚೌಡಯ್ಯ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಭವಿಷ್ಯ ನುಡಿದಿದ್ದಾರೆ.

ಯಾದಗಿರಿ ಜಿಲ್ಲೆಯ ಗುರುಮಠಕಲ್ ಪಟ್ಟಣದಲ್ಲಿ ಮಾಧ್ಯಮಗಳೊಂದಿಗೆಮಾತನಾಡಿದ ಮಾಜಿ ಸಚಿವ, ಅಂಬಿಗರ ಚೌಡಯ್ಯ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು,ಇದೇ ಸರ್ಕಾರದ ಅವಧಿಯಲ್ಲಿ ದೇಶಕ್ಕೆ ಮಲ್ಲಿಕಾರ್ಜುನ ಖರ್ಗೆ ಪಿಎಂ, ರಾಜ್ಯಕ್ಕೆ ಪ್ರಿಯಾಂಕ ಖರ್ಗೆ ಸಿಎಂ ಆಗೇ ಆಗ್ತಾರೆ ಎಂದು ವಿಶ್ವಾಸದಿಂದ ಹೇಳಿದರು.

ಕಲಬುರಗಿಯಲ್ಲಿಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಿಯಾಂಕ್ ಖರ್ಗೆ ಯಾವುದೇತಪ್ಪುಮಾಡಿಲ್ಲ ಎನ್ನೋದು ಬಿಜೆಪಿಯವರಿಗೂ ಗೊತ್ತಿದೆ. ಹುಲಿ ಹೊಟ್ಟೆಯಲ್ಲಿ ಹುಲಿಯಾಗಿಯೇ ಪ್ರಿಯಾಂಕ ಹುಟ್ಟಿರೋದು. ಬಿಜೆಪಿಯವರು ಪ್ರಿಯಾಂಕ್ ಖರ್ಗೆ ಮೇಲೆ ಕಪ್ಪು ಚುಕ್ಕೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ. ಇನ್ನುರಾಜ್ಯದಲ್ಲಿ ಬಿಜೆಪಿ ಮುಳಗುವ ಹಡಗು ಆಗಿದೆ. ರಾಜ್ಯದ ಮಹಾನ್ ನಾಯಕ ಪ್ರಿಯಾಂಕ್ ಖರ್ಗೆ ಅಭಿವೃದ್ಧಿಯ ಹರಿಕಾರ ಆಗಿದ್ದಾರೆ. ಬಿಜೆಪಿಯವರು ಮಾಡುವ ಪ್ರತಿಭಟನೆಯನ್ನ ಖಂಡಿಸುತ್ತೇವೆಎಂದುಬಾಬುರಾವ್ ಚಿಂಚನಸೂರ್ ಹೇಳಿದ್ದಾರೆ.

ರಾಜ್ಯದಲ್ಲಿಇದೀಗಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರದಲ್ಲಿಇರುವಾಗಲೇಸಿಎಂ ಬದಲಾವಣೆಯ ಚರ್ಚೆ ಭಾರೀ ದೊಡ್ಡಮಟ್ಟದಲ್ಲಿನಡೆಯುತ್ತಿದೆ. ಇನ್ನು ತನಗೆ ಮುಖ್ಯಮಂತ್ರಿ ಖುರ್ಚಿ ಬೇಕೇ ಬೇಕು ಎಂಬ ನಿಟ್ಟನಲ್ಲಿ ಸ್ವತಃ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ದೆಹಲಿ ಹೈಕಮಾಂಡ್ ಭೇಟಿ ಮಾಡಿದ್ದು, ಇದೇ ಉದ್ದೇಶಕ್ಕಾಗಿ ದೇಶದ ಶಕ್ತಿಶಾಲಿ ದೇವಾಲಯಗಳಿಗೆ ಹೋಗಿ ಪೂಜೆ, ಪುನಸ್ಕಾರ, ಹೋಮ, ಹವನ, ಯಜ್ಞ, ಯಾಗಗಗಳನ್ನುಮಾಡಿಸುತ್ತಿದ್ದಾರೆ ಎಂದು ಹೇಳಲಾಗುತ್ತಿದೆ. ಜೊತೆಗೆ, ರಾಜ್ಯದಲ್ಲಿ ದಲಿತ ನಾಯಕರಾದ ಗೃಹ ಸಚಿವ ಪರಮೇಶ್ವರ ಅವರ ನೇತೃತ್ವದಲ್ಲಿ ಮತ್ತೊಂದು ತಂಡ ಡಿನ್ನರ್ ಮೀಟಿಂಗ್ ಮಾಡುತ್ತಿದೆ. ಹೀಗಿರುವಾಗ ಯಾದಗಿರಿಯಲ್ಲಿ ಬಾಬುರಾವ್ ಚಿಂಚನಸೂರು ಅವರು ಪ್ರಿಯಾಂಕ ಖರ್ಗೆ ಮುಖ್ಯಮಂತ್ರಿ ಆಗಲಿದ್ದಾರೆ ಎಂದು ನೀಡಿರುವ ಹೇಳಿಕೆ ಭಾರಿ ಚರ್ಚೆಗೆ ಕಾರಣವಾಗಿದೆ.

# ಜ. 25 ರಾಷ್ಟ್ರೀಯ ಮತದಾರರ ದಿನಾಚರಣೆ

## ಮತಗಟ್ಟೆ ಕೇಂದ್ರಗಳಲ್ಲಿ ಆಚರಿಸಲು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.09: ಮತಗಟ್ಟೆ ಕೇಂದ್ರಗಳಲ್ಲಿ ಮತದಾರರ ದಿನಾಚರಣೆ ಆಚರಿಸಲು ಸಂಬಂಧಪಟ್ಟಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಅವರು ಸೂಚನೆ ನೀಡಿದರು.ಗುರುವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜ.25ರಂದು ನಡೆವ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮಕ್ಕೆ ಆಹ್ವಾನ ಪತ್ರ, ಪ್ರಮಾಣ ಪತ್ರಗಳನ್ನು ತಯಾರಿಸಲು ಕ್ರಮವಹಿಸಬೇಕೆಂದರು.

ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್‌ಗಳಲ್ಲಿದಿನಾಚರಣೆಯನ್ನು ತಪ್ಪದೇ ಆಚರಣೆ ಮಾಡಲು ಅಧಿಕಾರಿಗಳಿಗೆ ಸೂಚಿಸಿದರು. ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಖಚಿತವಾಗಿ ಮತದಾನ ಮಾಡುವೆ ಎಂಬ ವಿಷಯದ ಮೇಲೆ ಶಾಲಾ ಕಾಲೇಜು ಹಾಗೂ

(2ನೇ ಪುಟ ನೋಡಿ)

# ಶಾ ರಾಜೀನಾಮೆಗೆ ಆಗ್ರಹಿಸಿ ಬೀದರ್ ಸಂಪೂರ್ಣ ಬಂದ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 09 : ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ರಾಜೀನಾಮೆ ಆಗ್ರಹಿಸಿ ಇಂದು ಬೀದರ್ ಬಂದ್ ಮಾಡುವುದರ ಜೊತೆಗೆ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟಪತಿ ಮತ್ತು ಪ್ರಧಾನ ಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಅಮಿತ್ ಶಾ ಅವರು ಸಂಸತ್ತಿನಲ್ಲಿ ಮಾತನಾಡುತ್ತಾ ಅಂಬೇಡ್ಕರ್‌ಅವರನ್ನುಅವಮಾನ ಮಾಡಿದ್ದ ಹಿನ್ನಲೆಯಲ್ಲಿ ಅವರ ರಾಜೀನಾಮೆಆಗ್ರಹಿಸಿಗುರುವಾರ ದಲಿತ ಸಂಘಟನೆಗಳು ಬೀದರ್ ಬಂದ್ ಗೆ ಕರೆ ನೀಡಿದ್ದವು.

ಬೀದರ್ ಬಂದ್ ಬೆಂಬಲಿಸಿ ಭಾಲ್ಕಿ,ಹುಮನಾಬಾದ್ ಸೇರಿದಂತೆ ಎಲ್ಲ ತಾಲ್ಲೂಕಿನ ಜನ ನಗರದ ಅಂಬೇಡ್ಕರ್ ವೃತ್ತದ ಹತ್ತಿರ ಬಂದು ಜಮಾವಣೆಗೊಂಡಿತ್ತು. ನಗರದಲ್ಲಿರುವವಸತಿನಿಲಯಗಳ ವಿದ್ಯಾರ್ಥಿಗಳು ಪ್ರತಿಭಟನಾ ಮೆರವಣಿಗೆಮೂಲಕಅಂಬೇಡ್ಕರ್ ವೃತ್ತದ ಹತ್ತಿರ ಬಂದಿದ್ದರು. ಸಾವಿರಾರು ಸಂಖ್ಯೆಯಲ್ಲಿ ಜಮಾವಣೆಗೊಂಡಿದ್ದ ಜನ ಅಮಿತ್ ಶಾ ಮತ್ತು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಾ ಆಕ್ರೋಶ ವ್ಯಕ್ತಪಡಿಸಿದರು.

ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ದಲಿತರಿಗೆ ಮಾತ್ರನಾಯಕರಲ್ಲ. ಅವರು ಭಾರತದ ಎಲ್ಲ ಶೋಷಿತರ, ಮಹಿಳೆಯರ ಕೊರಳ ಧ್ವನಿಯಾಗಿದ್ದಾರೆ. ಅವರು ಜಾತಿ, ಧರ್ಮಗಳನ್ನು ಪರಿಗಣಿಸದೇ ಸಮಸ್ತ ಭಾರತೀಯರಿಗಾಗಿ

(2ನೇ ಪುಟ ನೋಡಿ)

# ಜ.12 ರಿಂದ ಕೂಡಲ ಸಂಗಮದಲ್ಲಿ 38 ನೇ ಶರಣಮೇಳ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.9:ಜಿಲ್ಲೆಯ ಹುನಗುಂದ ತಾಲೂಕಿನ ಸುಕ್ಷೇತ್ರ ಕೂಡಲ ಸಂಗಮದಲ್ಲಿ ಜ.12 ರಿಂದ 14 ರವರೆಗೆ 38 ನೇ ಶರಣಮೇಳ ನಡೆಯಲಿದೆ.

ಬಸವಧರ್ಮ ಪೀಠದ ಪೀಠಾಧ್ಯಕ್ಷೆ ಪೂಜ್ಯ ಮಾತೆ ಡಾ.ಗಂಗಾದೇವಿ ನಗರದಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ಪ್ರಕಟಿಸಿ, ಜ.13 ರಂದುನಡೆಯುವಶರಣಮೇಳದ ಉದ್ಘಾಟನೆಯನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

ಶರಣಮೇಳದ ಮೊದಲ ದಿನ ಜ.12 ರಂದು ಬೆಳಿಗ್ಗೆ 10.30 ಕ್ಕೆ ರಾಷ್ಟ್ರೀಯ ಬಸವ ದಳದ 34ನೇ ಅಧಿವೇಶನ ನಡೆಯಲಿದ್ದು, ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಉದ್ಘಾಟಿಸುವರು. ಸಾನ್ನಿಧ್ಯವನ್ನು ಇಳಕಲ್ ವಿಜಯಮಹಾಂತೇಶ ಮಠದ ಗುರುಮಹಾಂತ ಸ್ವಾಮೀಜಿ, ರಬಕವಿಯ ಗುರುಸಿದ್ದೇಶ್ವರ ಸ್ವಾಮೀಜಿ ವಹಿಸುವರು.

ಅಂದೇ ಸಂಜೆ 6.30ಕ್ಕೆ ಮಹಿಳಾಗೋಷ್ಠಿನಡೆಯಲಿದ್ದು, ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ಉದ್ಘಾಟಿಸುವರು. ಸಾನ್ನಿಧ್ಯವನ್ನು ಕೂಡಲಸಂಗಮ ಲಿಂಗಾಯತ ಪಂಚಮಸಾಲಿಪೀಠದಬಸವಜಯ ಮೃತ್ಯುಂಜಯ ಸ್ವಾಮೀಜಿ, ಹುಬ್ಬಳ್ಳಿಯ ಚಂದ್ರಶೇಖರ ಶಿವಯೋಗಿ ರಾಜೇಂದ್ರ ಸ್ವಾಮೀಜಿ, ಬಸವಕಲ್ಯಾಣದ ಡಾ.ಗಂಗಾಂಬಿಕೆ ವಹಿಸುವರು ಎಂದು ತಿಳಿಸಿದರು.

ಜ.13 ಬೆಳಿಗ್ಗೆ 10.30 ಕ್ಕೆ ನಡೆಯುವ 38 ನೇ ಶರಣಮೇಳವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸುವರು. ಶಾಸಕ ವಿಜಯಾನಂದ

(2ನೇ ಪುಟ ನೋಡಿ)

# ರಾಜ್ಯಗಳಿಂದ ತೆರಿಗೆ ಹಕ್ಕಿಗೆ ಹೋರಾಟ



ಮಲ್ಲಮ್ಮ ನುಡಿ ವಾರ್ತೆ

ಕುಂಭಕೋಣಂ, ಜ.9: ಬಿಜೆಪಿಯೇತರಸರ್ಕಾರಗಳಿರುವ ರಾಜ್ಯಗಳಿಗೆ ಕೇಂದ್ರ ಸರ್ಕಾರ ಅನುದಾನ ನೀಡದೆ ಅನ್ಯಾಯ ಮಾಡುತ್ತಿದ್ದು, ಈ ಕಾರಣಕ್ಕೆ ರಾಜ್ಯಗಳು ನಮ್ಮ ತೆರಿಗೆ ನಮ್ಮ ಹಕ್ಕು ಹೋರಾಟ ಮಾಡುತ್ತಿವೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಇಲ್ಲಿನ ಶ್ರೀ ಮಹಾ ಪ್ರತ್ಯಂಗಿರಾ ದೇವಿ ದೇಗುಲದಲ್ಲಿ ದರ್ಶನ ಪಡೆದನಂತರಡಿ.ಕೆ.ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗೆ

(2ನೇ ಪುಟ ನೋಡಿ)

# ಇಂದು ಶ್ರೀ ವೀರಭದ್ರೇಶ್ವರ ದೇವರಿಗೆ

## ಎಣ್ಣೆ ಹಚ್ಚುವ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಜ.09 ಪ್ರತಿ ವರ್ಷದಂತೆ ಈ ವರ್ಷವೂ ಈ ಭಾಗದ ಐತಿಹಾಸಿಕ ದೇವರು ಹುಮನಾಬಾದ್ ಗ್ರಾಮ ದೇವರಾದ ಶ್ರೀ ವೀರಭದ್ರೇಶ್ವರ ದೇವರಿಗೆ ಇಂದು ಶುಕ್ರವಾರ ಎಣ್ಣೆಹಚ್ಚುವ ಕಾರ್ಯಕ್ರಮ ನಡೆಯಲಿದೆ. ಈ ಕಾರ್ಯಕ್ರಮಕ್ಕೆ ಊರಿನ ಮುತ್ತೈದೆಯರು ಪಾಲ್ಗೊಳ್ಳಲಿದ್ದು. ಮುತ್ತೈದೆಯರಿಂದ ದೇವರಿಗೆ ಸಂಪ್ರದಾಯದಂತೆ ಎಣ್ಣೆಹಚ್ಚುವ ಕಾರ್ಯಕ್ರಮ ಜರುಗಲಿದೆ.

# ನೀರಾವರಿ ಯೋಜನೆ

## ಕಾಲಮಿತಿಯಲ್ಲಿ ಮುಗಿಸಿ :ಸಚಿವ ತಂಗಡಗಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.9: ಜಿಲ್ಲೆಯಲ್ಲಿ ನಡೆಯುತ್ತಿರುವ ನೀರಾವರಿ ಯೋಜನೆಯನ್ನುಕಾಲಮಿತಿಯಲ್ಲಿ ಮುಗಿಸಬೇಕು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು.

ಅವರು ಮಂಗಳವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನೀರಾವರಿ ಇಲಾಖೆಯ ಅಧಿಕಾರಿಗಳಿಗೆ ಕರೆದ ಕೊಪ್ಪಳ ಜಿಲ್ಲೆಯ ವಿವಿಧ ನೀರಾವರಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಕಾಲಮಿತಿಯಲ್ಲಿ ನೀರಾವರಿ ಯೋಜನೆಗಳು ಆಗದಿದ್ದರೆ ರೈತರಿಗೆ ನೀರು ಕೊಡಲು ಹೇಗೆ ಸಾಧ್ಯ ಕೆಲವೊಂದು ಯೋಜನೆಗಳು ಸುಮಾರು ವರ್ಷಗಳಿಂದ ಹಾಗೆ ನಡೆಯುತ್ತಲೆ ಇವೆ. ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಿದಾಗ ಅವುಗಳು ಕಾಲಮಿತಿಯಲ್ಲಿ ಮುಗಿಯುತ್ತವೆ. ಅಳವಂಡಿ ಬೆಟಗೇರಿ ಏತ ನೀರಾವರಿ ಯೋಜನೆಯ ಜನವರಿ 30ರ ಒಳಗಡೆ ಮುಗಿಯಬೇಕು. ಸಿಂಗಟಾಲೂರು

(2ನೇ ಪುಟ ನೋಡಿ)

# ಮಾನವ ಹಕ್ಕುಗಳ ಆಯೋಗದಿಂದ

## 8 ಸಾ. ಪ್ರಕರಣ ಇತ್ಯರ್ಥ, 3 ಸಾ. ಬಾಕಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.09:ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದಲ್ಲಿ ತಾವು ಅಧ್ಯಕ್ಷರಾಗಿ ನೇಮಕಗೊಂಡ ಬಳಿಕ, ಆಯೋಗದಲ್ಲಿ ಬಾಕಿ ಉಳಿದಿದ್ದ ಹಾಗೂ ಹೊಸದಾಗಿ ಸಲ್ಲಿಕೆಯಾದ ಪ್ರಕರಣಗಳೂ ಸೇರಿದಂತೆ ಒಟ್ಟು 11,200 ಪ್ರಕರಣಗಳ ಪೈಕಿ ಕಳೆದ 2024ರ ಡಿಸೆಂಬರ್ ಅಂತ್ಯವರೆಗೆ 8,061 ಪ್ರಕರಣಗಳನ್ನು ವಿಲೇ ಮಾಡಲಾಗಿದ್ದು, 3,139 ಪ್ರಕರಣಗಳು ವಿವಿಧ ಹಂತದಲ್ಲಿ ಬಾಕಿ ಇವೆ ಎಂದು ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಟಿ.ಶ್ಯಾಮ್ ಭಟ್ ಅವರು ಹೇಳಿದರು.

ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದ ಅವರು, ತಾವು ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬಳಿಕ ಆಯೋಗದಲ್ಲಿ ದಾಖಲಾದ

(2ನೇ ಪುಟ ನೋಡಿ)

# 68.30 ಕೋಟಿ ರೂ. ಬಂಡವಾಳ ಹೂಡಿಕೆಯ ಹೊಸ

## ಯೋಜನೆಗಳ ಮಂಜೂರಾತಿಗೆ ಅನುಮೋದನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜ.09 : ಜಿಲ್ಲಾಮಟ್ಟದ ಏಕಗವಾಂಕ್ಷಿ ಸಮಿತಿ ಸಭೆಯು ಜಿಲ್ಲಾಮಟ್ಟದ ಏಕಗವಾಕ್ಷಿಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 9ರಂದ ನಡೆಯಿತು.

100 ಲಕ್ಷ ರೂ ವೆಚ್ಚದಲ್ಲಿ ಕ್ಯಾಟಲ್ ಫೀಡ್ ಹೆಚ್ಚುವರಿಯಾಗಿ ಕ್ಯಾಟಲ್ ಫೀಡ್ ಹಾಗೂ ಆಯಿಲ್ ಮಿಲ್ಲಿಂಗ್ ಚಟುವಟಿಕೆ, 55 ಲಕ್ಷ ರೂ ವೆಚ್ಚದಲ್ಲಿ ವೇರ್‌ಹೌಸ್ ಹೆಚ್ಚುವರಿಯಾಗಿ ಪ್ಲೈಯಾಸ್ ಬ್ರಿಕ್ಸ್ ತಯಾರಿಕೆ ಚಟುವಟಿಕೆ, 540 ಲಕ್ಷ ರೂ. ವೆಚ್ಚದಲ್ಲಿ ಕಾಟನ್ ಜಿನ್ನಿಂಗ್ ಅಂಡ್ ಸೀಡ್ಸ್ ಪ್ರೊಸೆಸ್ಸಿಂಗ್ ಚಟುವಟಿಕೆ, 1446 ಲಕ್ಷ ರೂ ವೆಚ್ಚದಲ್ಲಿ ರೈಸ್ ಮಿಲ್ಲಿಂಗ್ ಚಟುವಟಿಕೆ, 1481 ಲಕ್ಷ ರೂ. ವೆಚ್ಚದಲ್ಲಿ ಆಯಿಲ್ ರಿಫೈನರಿ ಚಟುವಟಿಕೆ, 1050 ಲಕ್ಷ ರೂ ವೆಚ್ಚದಲ್ಲಿ ರೈಸ್ ಮಿಲ್ಲಿಂಗ್ ಚಟುವಟಿಕೆ, 303 ಲಕ್ಷ ರೂ ವೆಚ್ಚದಲ್ಲಿ ವೇಸ್ಟ್ ಆಯಿಲ್ ರಿಸೈಕ್ಲಿಂಗ್ ಚಟುವಟಿಕೆ, 400 ಲಕ್ಷರೂ ವೆಚ್ಚದಲ್ಲಿ ಗ್ರೌನ್ ನೆಟ್ ಡಿಕಾರ್ಟಿಕೇಟಿಂಗ್ ಚಟುವಟಿಕೆ, 1455 ಲಕ್ಷ ರೂ ವೆಚ್ಚದಲ್ಲಿ ರೈಸ್ ಮಿಲ್ಲಿಂಗ್ ಚಟುವಟಿಕೆ ಸೇರಿದಂತೆ ಹೊಸ ಯೋಜನೆಯ ಮಂಜೂರಾತಿಯ ಬಗ್ಗೆ ಜಿಲ್ಲಾಮಟ್ಟದ ಏಕಗವಾಕ್ಷಿ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಆಗಿರುವ ಜಿಲ್ಲಾ ಕೈಗಾರಿಕಾ ಕೇಂದ್ರದ

(2ನೇ ಪುಟ ನೋಡಿ)

# ಒಂದನೇ ಪುಟದಿಂದ

## ಕಾಲಮಿತಿಯಲ್ಲಿ ಮುಗಿಸಿ :ಸಚಿವ ತಂಗಡಗಿ

ಏತ ನೀರಾವರಿ ಯೋಜನೆ ನಮ್ಮ ಜಿಲ್ಲೆಯಲ್ಲಿ ಏನಾಗಿದೆ ಯಾವ ಹಂತದಲ್ಲಿದೆ ಎಂದು ಸಚಿವರು ನೀರಾವರಿ ಇಲಾಖೆಯ ಅಧಿಕಾರಿಗಳಿಂದ ಮಾಹಿತಿ ಪಡೆದು, ಈ ಯೋಜನೆಯ ಕಾಮಗಾರಿಯನ್ನು ವಿಳಂಭ ಮಾಡದೇ ಪೂರ್ಣಗೊಳಿಸಬೇಕೆಂದರು.

ಮತ್ತೆ ಸಭೆ ಕರೆಯುತ್ತೇನೆ ಆಗ ಗುತ್ತಿಗೆದಾರರಿಗೂ ಸಭೆಗೆ ಕರೆಯಬೇಕು. ಕಾಲಮಿತಿಯಲ್ಲಿ ಕೆಲಸ ಮುಗಿಸದ ಗುತ್ತಿಗೆದಾರರಿಗೆ ನೋಟೀಸ್ ನೀಡಿ ಬ್ಲ್ಯಾಕ್ ಲಿಸ್ಟಗೆ ಸೇರಿಸಬೇಕು. ಕೆರೆಗಳ ವೀಕ್ಷಣೆಗೂ ಬರುತ್ತೇನೆ. ಕಾಟಾಪುರ. ಶಿರವಾರ. ಕರಡೋಣ ಕೆರೆಗಳಿಗೆ ನೀರು ಬಿಡಬೇಕು. ಈಗ ಕೆರೆಗಳು ತುಂಬಿದರೆ ಬೇಸಿಗೆಯಲ್ಲಿ ನೀರಿನ ಸಮಸ್ಯೆಗಳಾಗುವುದಿಲ್ಲ. ಸಭೆಯಲ್ಲಿ ಚರ್ಚೆಯಾದ ಎಲ್ಲಾ ವಿಷಯಗಳನ್ನು ಅಧಿಕಾರಿಗಳು ಪಾಲನೆ ಮಾಡಬೇಕು ಎಂದು ಹೇಳಿದರು.

ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಮಾತನಾಡಿ ನೀರಾವರಿ ಯೋಜನೆಯ ಯಾವುದೇ ಕೆಲಸ ಮತ್ತು ಕಾಮಗಾರಿಗಳ ಕುರಿತು ಮೂರು ತಿಂಗಳಿಗೊಮ್ಮೆ ಆದರು ಸಭೆ ನಡೆಯಬೇಕು. 18 ತಿಂಗಳಲ್ಲಿ ಮುಗಿಯುವ ಕೆಲಸಗಳು ಹಲವಾರು ವರ್ಷಗಳು ತೆಗೆದುಕೊಳ್ಳುತ್ತವೆ. ಆಗಾಗ ನೀರಾವರಿ ಯೋಜನೆಗಳ ಸಭೆ ನಡೆಸಿದರೆ ಅವುಗಳ ಸಮಸ್ಯೆಗಳನ್ನು ಬಗೆಹರಿಸಲು ಅನುಕೂಲವಾಗುತ್ತದೆ ಎಂದು ಹೇಳಿದರು.

ಈ ಸಭೆಯಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ. ಜಿಲ್ಲಾಧಿಕಾರಿ ನಲಿನ್ ಅತುಲ್. ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ. ಸಹಾಯಕ ಆಯುಕ್ತರಾದ ಮಹೇಶ್ ಮಾಲಗಿತ್ತಿ ಸೇರಿದಂತೆ ಕೃಷ್ಣ ಭಾಗ್ಯ ಜಲ ನಿಗಮ. ಕರ್ನಾಟಕ ನೀರಾವರಿ ನಿಗಮ ನಿಯಮಿತ. ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ೩೮ ನೇ ಶರಣಮೇಳ

ಅಧ್ಯಕ್ಷತೆ ವಹಿಸಲಿದ್ದಾರೆ. ಸಾನ್ನಿಧ್ಯವನ್ನು ಸಾಣೇಹಳ್ಳಿಯ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ವಹಿಸುವರು. ಮುಖ್ಯ ಅತಿಥಿಗಳಾಗಿ ಸಚಿವರಾದ ಸತೀಶ ಜಾರಕಿಹೊಳಿ, ಸಂತೋಷ ಲಾಡ್, ಆರ್.ಬಿ.ತಿಮ್ಮಾಪೂರ, ಸಂಸದ ಸಾಗರ ಖಂಡ್ರೆ ಆಗಮಿಸುವರು ಎಂದು ಡಾ.ಗಂಗಾದೇವಿ ಹೇಳಿದರು. ಅಂದೇ ಸಂಜೆ 6 ಕ್ಕೆ ಬಸವಧರ್ಮ ಪೀಠಾರೋಹಣ ಸಮಾರಂಭ ನಡೆಯಲಿದ್ದು ಲೋಕಾಯುಕ್ತ ಬಿ.ಎಸ್.ಪಾಟೀಲ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಆಗಮಿಸುವರು.

ಜ.14 ರ ಬೆಳಿಗ್ಗೆ 10.30 ಕ್ಕೆ ಜರುಗುವ ಸಮುದಾಯ ಪ್ರಾರ್ಥನೆ ಮತ್ತು ವಚನ ಪಠಣ ಸಮಾರಂಭದವನ್ನು ಸಂಸದ ಜಗದೀಶ ಶೆಟ್ಟರ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ದೊಡ್ಡನಗೌಡ ಪಾಟೀಲ, ಸಂಸದ ಪಿ.ಸಿ.ಗದ್ದಿ ಗೌಡರ, ಶಾಸಕ ಮಹೇಶ ಟೆಂಗಿನಕಾಯಿ ಮುಂತಾದವರು ಆಗಮಿಸುವರು. ಮೂರು ದಿನ ನಡೆಯುವ ಸಮಾರಂಭದ ಸಾನ್ನಿಧ್ಯವನ್ನು ಬಸವಧರ್ಮ ಪೀಠದ ಪೀಠಾಧ್ಯಕ್ಷೆ ಮಾತೆ ಗಂಗಾದೇವಿ ವಹಿಸುವರು.

ಜ.14 ರ ಸಮಾರಂಭದಲ್ಲಿ 2025 ನೇ ಸಾಲಿನ ರಾಜ್ಯ ಮಟ್ಟದ 'ಕಾಯಕ ರತ್ನ' ಪ್ರಶಸ್ತಿಯನ್ನು ಮಾಜಿ ಸಚಿವ ಎಸ್. ಆರ್.ಪಾಟೀಲ ಹಾಗೂ 'ವೈದ್ಯ ರತ್ನ' ಪ್ರಶಸ್ತಿಯನ್ನು ಇಳಕಲ್‌ದ ಹೃದಯರೋಗ ತಜ್ಞ ಡಾ.ಮಹಾಂತೇಶ ಕಡಪಟ್ಟಿಯವರಿಗೆ ನೀಡಿ ಗೌರವಿಸಲಾಗುವುದು ಎಂದು ಮಾತಾಜಿ ತಿಳಿಸಿದರು.

2025 ರ ಬಸವಾತ್ಮಜೆ ರಾಷ್ಟ್ರೀಯ ಪ್ರಶಸ್ತಿಯನ್ನು ಕಲಬುರ್ಗಿಯ ಕ್ಯಾನ್ಸರ್ ವೈದ್ಯೆ ಡಾ.ವಿಜಯಲಕ್ಷ್ಮೀ ದೇಶಮಾನೆ ಅವರಿಗೆ ನೀಡಲಾಗುತ್ತಿದೆ. ಪ್ರವಚನ ಪಿತಾಮಹ ಲಿಂಗಾನಂದ ಸ್ವಾಮೀಜಿಯವರ ಸ್ಮರಣಾರ್ಥ ನೀಡುವ ರಾಷ್ಟ್ರ ಮಟ್ಟದ ಸ್ವಾಮಿ ಲಿಂಗಾನಂದ ಶ್ರೀ ಪ್ರಶಸ್ತಿಯನ್ನು ಮೇಘಾಲಯದ ರಾಜ್ಯಪಾಲ ಸಿ.ಎಚ್.ವಿಜಯಶಂಕರ ಅವರಿಗೆ ನೀಡಿ ಗೌರ ವಿಸಲಾಗುವುದು.

2025 ರ ರಾಜ್ಯ ಮಟ್ಟದ ದಾಸೋಹ ರತ್ನ ಪ್ರಶಸ್ತಿಯನ್ನು ಕೂಡಲಸಂಗಮದ ಹಿರಿಯ ಸಹಕಾರಿ ಧುರೀಣ ಎಲ್. ಎಂ. ಪಾಟೀಲ, ಸೇವಾ ರತ್ನ ಪ್ರಶಸ್ತಿಯನ್ನು ಬೆಂಗಳೂರು ರಾಷ್ಟ್ರೀಯ ಬಸವದಳದ ದೇವಿಕಾ ಶರಣಪ್ಪ, ಶರಣ ರತ್ನ ಪ್ರಶಸ್ತಿಯನ್ನು ಗೋಕಾಕದ ಕಮಲಕ್ಕ ಚೌಧರಿ, ಸಂಸ್ಕಾರ ರತ್ನ ಪ್ರಶಸ್ತಿ ಬೀದರದ ಸುರೇಶಸ್ವಾಮಿ, ಸೇವಾ ರತ್ನ ಪ್ರಶಸ್ತಿ ಕೊಪ್ಪಳದ ಬಸವನಗೌಡ ಪಾಟೀಲ ಅವರಿಗೆ ನೀಡಿ ಸನ್ಮಾನಿಸಲಾಗುವುದು.

ಒಕ್ಕಲಿಗ ಮುದ್ದಣ್ಣನ ಸ್ಮರಣಾರ್ಥ ನೀಡಲಾಗುವ 2025 ರ ರಾಷ್ಟ್ರ ಮಟ್ಟದ ಪ್ರಮುಖ ಪ್ರಜೆ ಪ್ರಶಸ್ತಿ ಚಿತ್ರ ದುರ್ಗದ ರೈತ ಮುಖಂಡ ಬಸವರಡ್ಡಿ ಅವರಿಗೆ ಹಾಗೂ ಕಾಯಕ ಕಲಿ ಪ್ರಶಸ್ತಿಯನ್ನು ಬಸವಯೋಗೇಶ ಅವರಿಗೆ ನೀಡಲಾಗುವುದು ಎಂದು ಮಾತೆ ಡಾ.ಗಂಗಾದೇವಿ ಹೇಳಿದರು.

ಸಕಲ ಸಿದ್ದತೆ : 38 ನೇ ಶರಣ ಮೇಳದ ತಯಾರಿ ಕಾರ್ಯ ಭರದಿಂದ ನಡೆದಿದ್ದು, 12 ಎಕರೆ ಪ್ರದೇಶದಲ್ಲಿ ನಡೆಯುವ ಸಮ್ಮೇಳನಕ್ಕೆ ಸಕಲ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ. ಬರುವ ಭಕ್ತರಿಗೆ ಊಟಕ್ಕಾಗಿ 5 ಲಕ್ಷ ಬಿಳಿಜೋಳದ ರೊಟ್ಟಿ, 5 ಲಕ್ಷ ಸಜ್ಜಿರೊಟ್ಟಿ ತಯಾರಿ ಕಾರ್ಯ ನಡೆದಿದೆ.

ಶರಣ ಮೇಳಕ್ಕೆ ಕರ್ನಾಟಕವಲ್ಲದೇ ನೆರೆಯ ಮಹಾರಾಷ್ಟ್ರ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಗೋವಾ, ಕೇರಳ ರಾಜ್ಯಗಳಿಂದಲೂ ಸುಮಾರು ಮೂರು ಲಕ್ಷಕ್ಕೂ ಅಧಿಕ ಭಕ್ತರು ಬರುವ ನಿರೀಕ್ಷೆ ಇದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಪೂಜ್ಯರಾದ ಮಹಾದೇಶ್ವರ ಸ್ವಾಮೀಜಿ, ಬಸವಯೋಗಿ ಸ್ವಾಮೀಜಿ, ಪ್ರಭುಲಿಂಗ ಸ್ವಾಮೀಜಿ, ಅನಿಶಾನಂದ ಸ್ವಾಮೀಜಿ ಇದ್ದರು.

## ಯೋಜನೆಗಳ ಮಂಜೂರಾತಿಗೆ ಅನುಮೋದನೆ

ಜಂಟಿ ನಿರ್ದೇಶಕರು ಸಭೆಗೆ ವಿವರಿಸಿದರು. ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ ಒಟ್ಟು 68.30 ಕೋಟಿ ರೂ.ಗಳ ಬಂಡವಾಳ ಹೂಡಿಕೆಯ ಹೊಸ ಯೋಜನೆಗಳ ಮಂಜೂರಾತಿಗೆ ಸಭೆಯಲ್ಲಿ ಅನುಮೋದಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಶಿಕಾಂತ್ ಶಿವಪೂರೆ, ರಾಯಚೂರು ಜಿಲ್ಲಾ ವಾಣಿಜ್ಯೋದ್ಯಮ ಸಂಘದ ಅಧ್ಯಕ್ಷರು, ರಾಯಚೂರು ಜಿಲ್ಲಾ ಕಾಟನ್ ಜಿನ್ಸ್ ಅಸೋಸಿಯೇಶನ್ ಅಧ್ಯಕ್ಷರು, ರೈಸ್ ಮಿಲ್ಸ್ ಜಿನ್ಸ್ ಅಸೋಶಿಯೇಶನ್ ಅಧ್ಯಕ್ಷರು, ಕೆಐಎಡಿಬಿಯ ಬಳ್ಳಾರಿ ಮತ್ತು ರಾಯಚೂರು ಕಾರ್ಯನಿರ್ವಾಹಕ ಅಭಿಯಂತರರು,

ಕೆಎಸ್‌ಎಸ್‌ಐಡಿಸಿಯ ಸಹಾಯಕ ಪ್ರಧಾನ ವ್ಯವಸ್ಥಾಪಕರು, ರಾಯಚೂರು ಜಿಲ್ಲಾ ಕೆಎಸ್‌ಪಿಸಿಬಿಯ ಪರಿಸರ ಅಭಿಯಂತರರು, ರಾಯಚೂರು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು, ತೋಟಗಾರಿಕಾ ಇಲಾಖೆಯ ಉಪ ನಿರ್ದೇಶಕರು, ಕೆಎಸ್‌ಎಫ್‌ಸಿಯ ಸಹಾಯಕ ಪ್ರಧಾನ ವ್ಯವಸ್ಥಾಪಕರು, ಕೃಷಿ ಇಲಾಖೆಯ ಜಂಟಿ ನಿರ್ದೇಶಕರು, ಕಾರ್ಖಾನೆಯ ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರು,

ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಜಿಲ್ಲಾ ಅಧಿಕಾರಿಗಳು, ಕೆಯುಡಬ್ಲೂ ಎಸ್‌ಎಸ್‌ಬಿಯ ಕಾರ್ಯನಿರ್ವಾಹಕ ಅಭಿಯಂತರರು, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಿರಿಯ ಭೂವಿಜ್ಞಾನಿ ಸೇರಿದಂತೆ ಇತರರು ಇದ್ದರು

## ೮ ಸಾ. ಪ್ರಕರಣ ಇತ್ಯರ್ಥ, ೩ ಸಾ. ಬಾಕಿ

ಪ್ರಕರಣಗಳ ವಿಚಾರಣೆಗೆ ಅಧಿಕಾರಿಗಳು ಹಾಗೂ ಸಾರ್ವಜನಿಕರು ಬೆಂಗಳೂರಿಗೆ ಅಲೆಯುವುದನ್ನು ತಪ್ಪಿಸಲು ಆಯೋಗವೇ ಜಿಲ್ಲೆಗಳಿಗೆ ಭೇಟಿ ನೀಡುತ್ತಿದ್ದು, ಈಗಾಗಲೆ 16 ಜಿಲ್ಲೆಗಳಿಗೆ ಭೇಟಿ ನೀಡಲಾಗಿದೆ. ಜಿಲ್ಲಾ ಹಂತದಲ್ಲಿಯೇ ಪ್ರಕರಣಗಳ ವಿಚಾರಣೆ ಹಾಗೂ ವಿಲೇವಾರಿ

ಕಾರ್ಯ ಮಾಡಲಾಗುತ್ತಿದೆ. ಆಯೋಗಕ್ಕೆ ಹೆಚ್ಚಿನ ಸೌಕರ್ಯ ನೀಡುವಲ್ಲಿ ಸರ್ಕಾರ-ಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದರು.ದೂರುಗಳನ್ನು ಆನ್‌ಲೈನ್ ಅಥವಾ ಅಂಚೆ ಮೂಲಕವೂ ಸಲ್ಲಿಸಬಹುದಾಗಿದೆ. ದೂರುದಾರರು ಇಲ್ಲದಿದ್ದರೂ ಅವರ ಪರವಾಗಿ ಬೇರೆ ಯಾರಾದರೂ ದೂರು ನೀಡಬಹುದು ಎಂದು ಅವರು ತಿಳಿಸಿದರು.ಜಿಲ್ಲೆಯಲ್ಲಿ 20 ಪ್ರಕರಣ ಇತ್ಯರ್ಥ, 7 ಪ್ರಕರಣ ಬಾಕಿ:ಬಳ್ಳಾರಿ ಜಿಲ್ಲೆಗೆ ಸಂಬಂಧಿಸಿದಂತೆ ಮಾನವ ಹಕ್ಕುಗಳ ಆಯೋಗಕ್ಕೆ ಸಲ್ಲಿಕೆಯಾಗಿದ್ದ ಒಟ್ಟು 27 ಪ್ರಕರಣಗಳಲ್ಲಿ 20 ಪ್ರಕರಣ ಇತ್ಯರ್ಥ

ಪಡಿಸಲಾಗಿದ್ದು, 07 ಪ್ರಕರಣ ಬಾಕಿ ಇವೆ ಎಂದು ಅಧ್ಯಕ್ಷರು ತಿಳಿಸಿದರು.ಇದಕ್ಕೂ ಮುನ್ನ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದ ಅವರು, ಜಿಲ್ಲಾ ಮಟ್ಟದಲ್ಲಿ ಪ್ರಕರಣಗಳ ವಿಚಾರಣೆ ದೂರು ಸ್ವೀಕಾರ ಮಾಡುವುದರಿಂದ ಸಾರ್ವಜನಿಕರ ಸ್ಪಂದನೆ ಉತ್ತಮವಾಗಿದೆ ಎಂದು ಹೇಳಿದರು.ಆಯೋಗದ ನ್ಯಾಯಾಂಗದ ಸದಸ್ಯರಾದ ಎಸ್.ಕೆ.ವಂಟಿಗೋಡಿ ಅವರು ಮಾತನಾಡಿ ಆಯೋಗದಿಂದ ಮಾನವ ಹಕ್ಕುಗಳ ಉಲ್ಲಂಘನೆ ನಿಯಂತ್ರಣಕ್ಕೆ ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗುತ್ತಿದೆ ಎಂದು ಹೇಳಿದರು.

ಮಾನವ ಹಕ್ಕುಗಳ ಆಯೋಗದ ಹೆಸರು ಹೇಳಿಕೊಂಡು ವಿವಿಧ ಇಲಾಖೆಗಳ

ಅಧಿಕಾರಿಗಳಿಗೆ ಬೆದರಿಕೆ ಒಡ್ಡುವುದು, ಹಣ ವಸೂಲಿ ಮಾಡಲು ಪ್ರಯತ್ನಿಸುವುದು ಕಂಡುಬಂದಲ್ಲಿ ಆಯೋಗಕ್ಕೆ ತಿಳಿಸಿದರೆ ಅಂತವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.ಈ ಸಂದರ್ಭದಲ್ಲಿ ಆಯೋಗದ ಆಪ್ತ ಕಾರ್ಯದರ್ಶಿ ಅರುಣ್ ಪೂಜಾರ್ ಹಾಗೂ ಇತರರು ಇದ್ದರು.

## ಶಾ ರಾಜೀನಾಮೆಗೆ ಆಗ್ರಹಿಸಿ ಬೀದರ್ ಸಂಪೂರ್ಣ ಬಂದ್

ತಮ್ಮ ಬದುಕು ಪಣಕಿಟ್ಟಿದ್ದಾರೆ. ಅಂತಹ ಮಹಾನ ನಾಯಕನನ್ನು ಸಂವಿಧಾನದ ಹುದ್ದೆಯಲ್ಲಿರುವ ಅಮಿತ್ ಶಾ ಅವರು ವ್ಯಂಗ್ಯ ಮತ್ತು ಹಾಸ್ಯದ ರೂಪದಲ್ಲಿ ಅಪಮಾನ ಮಾಡಿದ್ದಾರೆ ಎಂದು ಮನವಿ ಪತ್ರದಲ್ಲಿ ದೂರಿದ್ದಾರೆ.

ಅಮಿತ್ ಶಾ ಅವರು ಅಂಬೇಡ್ಕರ್ ಅವರನ್ನು ಪ್ರಜ್ಞಾಪೂರ್ವಕವಾಗಿಯೇ ಅವಮಾನ ಮಾಡಿದ್ದಾರೆ. ಅವರನ್ನು ಮುನ್ನಡೆಸುವ ಆರ್ ಎಸ್ ಎಸ್ ಮತ್ತು ಸಂಘ ಪರಿವಾರದ ಮನಸ್ಥಿತಿ ಎದೆಯಲ್ಲಿ ಅದುಮಿಟ್ಟುಕೊಂಡ ಅಂತರಾಳದ ಮಾತು ಹೊರಗಡೆ ಬಂದಿವೆ. ಇದು ಅಂಬೇಡ್ಕರ್ ಮತ್ತು ಸಂವಿಧಾನದ ಮೇಲಿನ ಆಕ್ರಮಣವಾಗಿದೆ. ಇದರಿಂದಾಗಿ ಕೋಟ್ಯಾಂತರ ಭಾರತೀಯರಿಗೆ ನೋವುಂಟಾಗಿದೆ. ಇದರ ವಿರುದ್ಧ ದೇಶದಾದ್ಯಂತ ಪ್ರತಿಭಟನೆಗಳಾಗುತ್ತಿದ್ದರೂ ಸಹ ಅವರು ರಾಜೀನಾಮೆ ಸಲ್ಲಿಸುತ್ತಿಲ್ಲ. ಹಾಗಾಗಿ ರಾಷ್ಟ್ರಪತಿಗಳು ತಕ್ಷಣವೇ ಅವರ ರಾಜೀನಾಮೆ ಪಡೆದು, ಅವರನ್ನು ಬಂಧಿಸಬೇಕು ಎಂದು ಆಗ್ರಹಿಸಿದ್ದಾರೆ.

ಬೀದರ್ ಬಂದ್ ಗೆ ಸ್ಪಂದಿಸಿ ನಗರದ ಎಲ್ಲ ಅಂಗಡಿಗಳ ಮಾಲೀಕರು ಮುಂಜಾನೆಯಿಂದ ತಮ್ಮ ಅಂಗಡಿಗಳು ಸ್ವ ಇಚ್ಛೆಯಿಂದ ಬಂದ್ ಮಾಡಿದ್ದರು. ದಿನಾಲೂ ಜನಗಳಿಂದ ಗಿಜಿಗೂಡುತಿದ್ದ ಪ್ರಮುಖ ರಸ್ತೆಗಳು ಖಾಲಿ ಖಾಲಿ ಕಾಣಿಸುತಿದ್ದವು. ಸರಕಾರಿ ಬಸ್ಸುಗಳು ಸಂಪೂರ್ಣವಾಗಿ ಬಂದ್ ಆಗಿದ್ದರಿಂದ ಬಸ್ಸು ನಿಲ್ದಾಣ ಜನಗಳಿಲ್ಲದೆ ಬಿಕೋ ಎನ್ನುತಿತ್ತು.

ಈ ಸಂದರ್ಭದಲ್ಲಿ ಸ್ವಾಭಿಮಾನಿ ಡಾ. ಬಿ. ಆರ್ ಅಂಬೇಡ್ಕರ್ ವಾದಿಗಳ ಹೋರಾಟ ಸಮಿತಿಯ ಅಧ್ಯಕ್ಷ ಉಮೇಶಕುಮಾರ್ ಸ್ವಾರಳ್ಳಿಕರ್, ಗೌರವಾಧ್ಯಕ್ಷರಾದ ರಾಜಕುಮಾರ್ ಮೂಲಭಾರತಿ, ಚಂದ್ರಕಾಂತ್ ನಿರಾಟೆ, ಕಲ್ಯಾಣರಾವ್ ಭೋಸ್ಲೆ, ಉಪಾಧ್ಯಕ್ಷ ಅಂಬರೀಷ್ ಕುದರೆ, ಪ್ರಧಾನ ಕಾರ್ಯದರ್ಶಿ ಮಹೇಶ್ ಗೊರನಾಳಕರ್, ಹಿರಿಯ ದಲಿತ ಮುಖಂಡ ವಿಠಲದಾಸ್ ಪ್ಯಾಗೆ, ವಿಷ್ಣುವರ್ಧನ್ ವಾಲ್ದೊಡ್ಡಿ, ಅಭಿ ಕಾಂಬ್ಳೆ, ವೇಲಫೇರ್ ಪಾರ್ಟಿ ಆಫ್ ಇಂಡಿಯಾ ಜಿಲ್ಲಾಧ್ಯಕ್ಷ ಮುಬಶೀರ್ ಶಿಂಧೆ, ಮುಸ್ಲಿಂ ಹ್ಯೂಮನ್ ರೈಟ್ಸ್ ಅಸೋಷಿಯಷನ್ ಜಿಲ್ಲಾಧ್ಯಕ್ಷ ಸೈಯದ್ ವಹೀದ್ ಲಖನ್, ಮೂಮೆಂಟ್ ಆಫ್ ಜಸ್ಟಿಸ್ ಜಿಲ್ಲಾಧ್ಯಕ್ಷ ಸಾರಫರಾಜ್ ಹಾಸ್ಮಿ, ರಾಜಕುಮಾರ್ ಡೊಂಗರೆ, ಸಂಜುಕುಮಾರ್ ಮೇತ್ರೆ, ಪವನ್ ಮಿಠಾರೆ, ಪ್ರಕಾಶ್ ರಾವಣ, ಹರ್ಷಿತ್ ದಾಂಡೇಕರ್ ಹಾಗೂ ರಾಹುಲ್ ಡಾಂಗೆ ಸೇರಿದಂತೆ ಸಾವಿರಾರು ಜನ ಭಾಗವಹಿಸಿದ್ದರು.

## ಮತಗಟ್ಟೆ ಕೇಂದ್ರ್ರಗಳಲ್ಲಿ ಆಚರಿಸಲು ಸೂಚನೆ

ಶಿಕ್ಷಣ ಸಂಸ್ಥೆಗಳಲ್ಲಿ ಪ್ರಬಂಧ ಸ್ಪರ್ಧೆ, ಚರ್ಚೆ, ಚಿತ್ರಕಲೆ, ರಸಪ್ರಶ್ನೆ, ಹಾಡು ಸ್ಕಿಟ್ ಇತ-ರೆ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತರಿಗೆ ಬಹುಮಾನ ಪ್ರಮಾಣ ಪತ್ರಗಳನ್ನು ನೀಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.15ನೇ ರಾಷ್ಟ್ರೀಯ ಮತದಾರರ ದಿನಾಚರಣೆ -2025 ರ ಕಾರ್ಯಕ್ರಮವನ್ನು ತಾಲ್ಲೂಕು ಮಟ್ಟದಲ್ಲಿ ಹಾಗೂ ಎಲ್ಲ ಮತದಾನ ಕೇಂದ್ರಗಳಲ್ಲಿ ಹಮ್ಮಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.ಹೊಸದಾಗಿ ಸೇರ್ಪಡೆಯದ ಯುವ ಮತದಾರರಿಗೆ, ಪಿ.ಡಬ್ಲ್ಯೂ.ಡಿ. ಮತದಾರರಿಗೆ Transgender ಮತದಾರರಿಗೆ ಭಾವಚಿತ್ರವಿರುವ ಮತದಾರರ ಗುರುತಿನ ಚೀಟಿಯನ್ನು ಎಪಿಕ್(ಇಕಖಅ) ಕಾರ್ಡುಗಳನ್ನು ವಿತರಿಸುವ ಬಗ್ಗೆ ಅಧಿಕಾರಿಗಳಿಗೆ ಮಾಹಿತಿ ನೀಡಿದರು.9 ವಿಧಾನಸಭಾ ಕ್ಷೇತ್ರಗಳ ತಲಾ 3 ರಂತೆ ಅತ್ಯುತ್ತಮ ಮತಗಟ್ಟೆ ಅಧಿಕಾರಿಗಳನ್ನು ಗುರುತಿಸಿ ಪ್ರಮಾಣ ಪತ್ರಗಳನ್ನು ನೀಡಲು ತಿಳಿಸಿದರು.15ನೇ ರಾಷ್ಟ್ರೀಯ ಮತದಾರರ ದಿನಾಚರಣೆ-2025 ಮತ್ತು ವಿಶೇಷ ಧ್ಯೇಯವಾಕ್ಯ ಹಾಗೂ ಚಿಹ್ನೆಯನ್ನು ಕಛೇರಿಯ ಅಧಿಕೃತ ಸಾಮಗ್ರಿಗಳ ಮೇಲೆ ವೆಬ್ ಸೈಟ್ಗಳಲ್ಲಿ, ಚುನಾವಣಾ ಸಂಬಂಧಿತ ಪ್ರಸ್ತುತಿಗಳಲ್ಲಿ ಬಳಕೆ ಮಾಡಿಕೊಳ್ಳುವುದರ ಬಗ್ಗೆ ತಿಳಿಸಿದರು..ಪ್ರತಿಜ್ಞಾ ವಿಧಿ ಭೋದಿಸುವ/ಸ್ವೀಕರಿಸುವ ಮೂಲಕ 15ನೇ "ರಾಷ್ಟೀಯ ಮತದಾರರ ದಿನಾಚರಣೆ-2025ರ ಕಾರ್ಯಕ್ರಮವನ್ನು ಆಚರಿಸಲು ಎಲ್ಲಾ ಭಾಗೀದಾರರಿಗೂ ನಿರ್ದೇಶನ ನೀಡುವುದು ಹಾಗೂ ವಾಟ್ಸ್ಯಾಪ್ ಗ್ರೂಪ್ಗಳಲ್ಲಿ ಹಂಚಿಕೊಳ್ಳಬೇಕೆಂದರು.ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭಂವರ ಸಿಂಗ್ ಮೀನಾ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀನಿವಾಸ ಅಡ್ಡೂರು, ಡಿಸಿಪಿ ಕನಿಕಾ ಸಿಕ್ರಿವಾಲ್, ಮಹಾನಗರ ಪಾಲಿಕೆ ಉಪ-ಆಯುಕ್ತ ಅವಿನಾಶ ಸಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಹಕ್ಕಿಗೆ ಹೋರಾಟ

ಗುರುವಾರ ಪ್ರತಿಕ್ರಿಯೆ ನೀಡಿದರು.

ಕೇಂದ್ರ ಸರ್ಕಾರ ರಾಜ್ಯಕ್ಕೆ ಸರಿಯಾಗಿ ಅನುದಾನ ಬಿಡುಗಡೆ ಮಾಡುತ್ತಿಲ್ಲ ಎಂದು ಕೇಳಿದಾಗ, ಬಿಜೆಪಿ ಸರ್ಕಾರ ಇಲ್ಲದ ರಾಜ್ಯಗಳ ವಿಚಾರದಲ್ಲಿ ಕೇಂದ್ರ ಸರ್ಕಾರ ರಾಜಕೀಯ ಮಾಡುತ್ತಿದೆ. ಕೇಂದ್ರ ಸರ್ಕಾರಕ್ಕೆ ನಾವು ನೀಡುವ ತೆರಿಗೆಗೆ ತಕ್ಕನಾಗಿ ನಮಗೆ ಅನುದಾನ ಬರುತ್ತಿಲ್ಲ. ಈ ವಿಚಾರದಲ್ಲಿ ನಾವೆಲ್ಲರೂ ಒಟ್ಟಿಗೆ ಹೋರಾಟ ಮಾಡಬೇಕಿದೆ ಎಂದು ಉತ್ತರಿಸಿದರು.

## ಜನ್ಮದಿನದ ಅಂಗವಾಗಿ ಬ್ಯಾನರ್, ಕಟೌಟ್ ಕಟ್ಟದಂತೆ ಈಶ್ವರ ಖಂಡ್ರೆ ಮನವಿ



ಮಲ್ಲಮ ನುಡಿ ವಾರ್ತೆ

ಬೆಂಗಳೂರು, ಜ.9: ಈ ವರ್ಷ ಸಾರ್ವಜನಿಕವಾಗಿ ತಮ್ಮ ಹುಟ್ಟು ಹಬ್ಬ ಆಚರಣೆ ಮಾಡದಿರಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತೀರ್ಮಾನಿಸಿದ್ದು, ಯಾರೂ ಬ್ಯಾನರ್, ಕಟೌಟ್ ಕಟ್ಟದಂತೆ ಮನವಿ ಮಾಡಿದ್ದಾರೆ.

ತತ್ಸಂಬಂಧವಾಗಿ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಇತ್ತೀಚೆಗಷ್ಟೇ ತಮ್ಮ ಪುತ್ರ ಸಂಸದರಾದ ಸಾಗರ್ ಖಂಡ್ರೆ ಅವರ ಜನ್ಮ ದಿನವನ್ನು ಭಾಲ್ಕಿಯ ಜನತೆ ಮತ್ತು ಅಭಿಮಾನಿಗಳೆಲ್ಲಾ ಅದ್ದೂರಿಯಿಂದ ಆಚರಿಸಿದ್ದಾರೆ. ಈಗ ಪ್ರಸಕ್ತ ಸನ್ನಿವೇಶದಲ್ಲಿ ತಮ್ಮ ಜನ್ಮ ದಿನವನ್ನು ಸಾರ್ವಜನಿಕವಾಗಿ ಆಚರಿಸುವುದು ಸೂಕ್ತವಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಮಿಗಿಲಾಗಿ ಜ.14ರಿಂದ 16ರವರೆಗೆ ತಾವು ಬೀದರ್ ಜಿಲ್ಲೆಯಿಂದ ಹೊರಗೆ ಇರುವುದಾಗಿಯೂ ತಿಳಿಸಿದ್ದು, ಫ್ಲೆಕ್ಸ್, ಬ್ಯಾನರ್ ಕಟ್ಟದಂತೆ ಕಾಂಗ್ರೆಸ್ ಕಾರ್ಯಕರ್ತರು, ಭಾಲ್ಕಿ ಮತ್ತು ಬೀದರ್ ಜಿಲ್ಲೆಯ ತಮ್ಮ ಅಭಿಮಾನಿಗಳಿಗೆ ಮನವಿ ಮಾಡಿದ್ದಾರೆ.

## ಮುಗಳೊಳ್ಳಿ ಗ್ರಾಪಂಗೆ ಜ್ಯೋತಿ ಲಮಾಣಿ ಅಧ್ಯಕ್ಷೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.9:ಮುಗಳೊಳ್ಳಿ ಗ್ರಾಮ ಪಂಚಾಯತಿಯ ಎರಡನೇ ಅವಧಿಗೆ ನೂತನ ಅಧ್ಯಕ್ಷರಾಗಿ ಜ್ಯೋತಿ ಚಂದ್ರಶೇಖರ ಲಮಾಣಿ, ಉಪಾಧ್ಯಕ್ಷರಾಗಿ ಗಣೇಶ ತಾವರಪ್ಪ ಲಮಾಣಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಬುಧವಾರ ನಡೆದ ಸಾಮಾನ್ಯ ಮಹಿಳೆಗೆ ಮೀಸಲಾದ ಅಧ್ಯಕ್ಷ ಸ್ಥಾನ ಹಾಗೂ ಸಾಮಾನ್ಯ ವರ್ಗಕ್ಕೆ ಮೀಸಲಾದ ಉಪಾಧ್ಯಕ್ಷ ಸ್ಥಾನಗಳ ಆಯ್ಕೆ ಚುನಾವಣೆಯಲ್ಲಿ ಎರಡೂ ಸ್ಥಾನಗಳಿಗೆ ತಲಾ ಒಬ್ಬೊಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದಾಗಿ ಅವಿರೋಧ ಆಯ್ಕೆ ನಡೆಯಿತು ಎಂದು ಚುನಾವಣಾಧಿಕಾರಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಸುಭಾಸ ಸಂಪಗಾವಿ ತಿಳಿಸಿದ್ದಾರೆ.ಒಟ್ಟು 15 ಜನ ಸದಸ್ಯರಲ್ಲಿ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ ಚುನಾವಣಾ ಸಭೆಯಲ್ಲಿ ಸದಸ್ಯರಾದ ರೇಣವ್ವ ಭಜಣ್ಣವರ, ರಂಗಪ್ಪ ಮಾದರ, ಬ್ರಹ್ಮಲಿಂಗಪ್ಪ ತಳವಾರ, ಸಂಗಪ್ಪ ಕಟಗೇರಿ, ಲಲಿತಾ ತಳವಾರ, ರಾಮವ್ವ ವಾಲೀಕಾರ, ರೇಣುಕಾ ಖ್ಯಾಡದ, ಮಳಿಯಪ್ಪ ಮೇಟಿ ಪಾಲ್ಗೊಂಡಿದ್ದರು. 5 ಸದಸ್ಯರು ಗೈರಾಗಿದ್ದರು ಎಂದು ಸಹಾಯಕ ಚುನಾವಣಾಧಿಕಾರಿ ಗುರುರಾಜ ಗೌಡರ, ಪಿಡಿಓ ಆರ್.ಎಚ್.ನದಾಫ ತಿಳಿಸಿದ್ದಾರೆ.

## ಸರ್ಕಾರಿ ನೌಕರರಿಗೆ ಕ್ಯಾಸ್‌ಲೆಸ್ ವೈದ್ಯಕೀಯ ಸೇವೆ ಅತ್ಯಗತ್ಯ:ರಾಜೆಪ್ಪ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.9: ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಕ್ಯಾಸ್‌ಲೆಸ್ ವೈದ್ಯಕೀಯ ಸೇವೆ ಅತ್ಯಗತ್ಯವಾಗಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಕಾರ್ಯದರ್ಶಿ ರಾಜೆಪ್ಪ ಪಾಟೀಲ ಅಭಿಪ್ರಾಯಪಟ್ಟರು.

ಪಟ್ಟಣದ ಗಜಾನನ ಸಹಕಾರ ಸಂಘದ ಬ್ಯಾಂಕ್‌ನಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ವತಿಯಿಂದ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ಶೀಘ್ರದಲ್ಲಿಯೇ ಅಧಿಕಾರ ಹಸ್ತಾಂತರ ಕಾರ್ಯಕ್ರಮ ನಡೆಸಲಾಗುವುದು. ನಮ್ಮ ರಾಜಾಧ್ಯಕ್ಷ ಷಡಕ್ಷರಿಯವರ ಆಶಯದಂತೆ ಮೊದಲು ಎಲ್ಲಾ ಸರ್ಕಾರಿ ನೌಕರರಿಗೂ ಕ್ಯಾಸ್‌ಲೆಸ್ ವೈದ್ಯಕೀಯ ಸೇವೆ ಲಭಿಸುವಂತೆ ಪ್ರಯತ್ನಿಸಲಾಗುವುದು.ಎನ್‌ಪಿಎಸ್ ಬದಲಾಗಿ ಓಪಿಎಸ್ ಪಿಂಚಣಿ ಯೋಜನೆಗೆ ಎಲ್ಲರೂ ನಿರಂತರ ಪ್ರಯತ್ನಮಾಡಿ, ಸರ್ಕಾರದ ಜೊತೆಗೆ ಹೋರಾಡಿ ಓಪಿಎಸ್ ಜಾರಿಗಾಗಿ ಶ್ರಮಿಸಬೇಕಿದೆ. ಚುನಾವಣೆಯ ಸಂದಭದಲ್ಲಿದ್ದ ನಮ್ಮಲ್ಲಿರುವ ಎಲ್ಲಾ ವೈಮನಸ್ಸುಗಳನ್ನು ಮರೆತು ಎಲ್ಲರೂ ಒಗ್ಗಟ್ಟಾಗಿ ಕಾರ್ಯನಿರ್ವಹಿಸಬೇಕಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ದತ್ತು ಕಾಟಕರ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸೂರ್ಯಕಾಂತ ಸುಂಟೆ ಸಂಘಟನೆಯ ಕುರಿತು ಮಾತನಾಡಿದರು. ಗಜಾನನ ಸಹಕಾರ ಸಂಘದ ವಿಜಯಕುಮಾರ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇವೇಳೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನೂತನ ಪದಾಧಿಕಾರಿಗಳಾಗಿ ಆಯ್ಕೆಯಾದ ಸಂಘದ ಪ್ರಧಾನ ಕಾರ್ಯದರ್ಶಿ ರಾಜೆಪ್ಪ ಪಾಟೀಲ, ಸಂಘದ ಕೋಶಾಧ್ಯಕ್ಷ ಸುನೀಲ ಬಿರಾದಾರ, ಸಂಘದ ರಾಜ್ಯ ಪರಿಷತ್ ಸದಸ್ಯ ಬಸವರಾಜ ಬಂಗಾರೆ ಯವರೊಂದಿಗೆ ನಿವೃತ್ತಿಯಾದ ಉಪನ್ಯಾಸಕ ಶಿವಾಜಿ ಜಗತಾಪ, ಮುಖ್ಯಗುರುಗಳಾಗಿ ಪದೋನ್ನತಿ ಹೊಂದಿರುವ ಸಂಜೀವಕುಮಾರ ಬಿರಾದಾರ ಮತ್ತು ವಿಜಯಕುಮಾರ ಬಿರಾದಾರ ರವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನೌಕರರ ಸಂಘದ ನಿರ್ದೇಶಕರಾದ ದಿಲೀಪಕುಮಾರ ಬಿರಾದಾರ, ಸುಖದೇವ ಬಿರಾದಾರ, ಕಿರಣಕುಮಾರ ಭಾಟಸಾಂಗಾವೆ, ಸಹದೇವ ಗೌಡಗಾವೆ, ಹಣಮಂತ ಕಾರಾಮುಂಗೆ, ಸಂತೋಶ ಮುದಾಳೆ, ಜಯರಾಜ ದಾಬಶೆಟ್ಟಿ, ವಿಠಲರಾವ ಬಿರಾದಾರ, ನಿವೃತ್ತ ಶಿಕ್ಷಕ ಶಿವಕುಮಾರ ಘಂಟೆ, ಜೈದೀಪ ಶೇರಿಕಾರ, ಸಂತೋಷ ಬಿರಾದಾರ, ಮಾರುತಿ ಸಗರ ಉಪಸ್ಥಿತರಿದ್ದರು.

ವಿಜಯಕುಮಾರ ಸ್ವಾಗತಿಸಿದರು. ಹಣಮಂತ.ಕೆ ನಿರೂಪಿಸಿದರು.

## ಸಮಾಜದ ಅನಿಷ್ಟ ಪದ್ದತಿಗಳ ವಿರುದ್ಧ ಮೊದಲು ಧ್ವನಿ ಎತ್ತಿದವರು ಸಾವಿತ್ರಿಬಾಯಿ ಪುಲೆ



ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ:ಜ.5: ಪಟ್ಟಣದ ಮಹಾನಾಯಕ ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಯ ಆವರಣದಲ್ಲಿ ಸಾಮೂಹಿಕ ದಲಿತ ಸಂಘಟನೆಯಿಂದ ಶುಕ್ರವಾರ ಸಾವಿತ್ರಿಬಾಯಿ ಪುಲೆ ಅವರ 193ನೇ ಜಯಂತಿ ಆಚರಣೆ ಮಾಡಲಾಯಿತು.

ಶರಣಪ್ಪ ಗಾಯಕವಾಡ ಮಾತನಾಡಿ ಸಾವಿತ್ರಿಬಾಯಿ ಪುಲೆಯವರು ಬಾಲ್ಯವಿವಾಹ, ಸತಿಸಹಗಮನ ಪದ್ದತಿ ಸೇರಿದಂತೆ ಹಲವಾರು ಸಮಾಜದ ಅನಿಷ್ಟ ಪದ್ದತಿಗಳ ವಿರುದ್ಧ ಹೋರಾಟ ಮಾಡಿ ಮಹಿಳೆಯರಿಗೋಷ್ಕರ ಪ್ರಪ್ರಥಮವಾಗಿ ಶಾಲೆಗಳನ್ನು ತೆರೆದ ಕೀರ್ತಿ ಇವರಿಗೆ ಸಲ್ಲುತ್ತದೆ. ಇವರ ಸಾಧನೆಗೆ ಅಂದಿನ ಬ್ರಿಟಿಷ್ ಸರಕಾರ ಇಂಡಿಯಾಸ್ ಫಸ್ಟ್ ಲೇಡಿ ಟೀಚರ್ ಎಂದು ಬಿರುದು ನೀಡಿತ್ತು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಲಕ್ಷ್ಮೀನಾರಾಯಣ ನಾಗವಾರ ಅವರಗೆ ಸಾಮೂಹಿಕ ನುಡಿನಮನ ಸಲ್ಲಿಸಿ ನಾಗವಾರ ರವರ ಸಾಮಾಜಿಕ ಹೋರಾಟದ ದಿನಗಳನ್ನು ಸ್ಮರಿಸಿಕೊಂಡರು.

ಮಡಿವಾಳಪ್ಪ ಕಟ್ಟಿಮನಿ, ದರ್ಮಣ್ಣ ಪತ್ತೆಪೂರ, ಗೋಪಾಲ ಬಡಿಗೇರ್, ಬಸವಣ್ಣಪ್ಪ ಆರ್ ಮಾಳಳ್ಳಿಕರ್, ಮರೆಪ್ಪ ಮಲ್ಲಾ, ಭೀಮಶಂಕರ್ ಸೋಮನಾಹಳಕರ್, ಯಲ್ಲಪ್ಪ ಭಾವಿಮನಿ, ರಾಯಪ್ಪ ಬಡಿಗೇರ್, ಮಲ್ಲಿಕಾರ್ಜುನ ಕಟ್ಟಿಮನಿ, ಮುದಕಪ್ಪ ಕಿರದಳಿ, ಚಂದ್ರಪ್ಪ ಯಾಳಿಗಿ, ಮಾಂತೇಶ ಯಾಳಿಗಿ, ಚನ್ನಪ್ಪ ಮಾಳಳ್ಳಿಕರ್, ಮಾನಪ್ಪ ಬಮ್ಮನಹಳ್ಳಿ ಸೇರಿದಂತೆ ಇತರರಿದ್ದರು.

## ಶಿವಾನಂದ ಜಯಂತ್ಯುತ್ಸವ ಸಮಿತಿ ಅಧ್ಯಕ್ಷ 21 ರಂದು ಅಂಬಿಗರ ಚೌಡಯ್ಯ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.9–ಹನ್ನೆರಡನೇ ಶತಮಾನದ ಪ್ರಥಮ ಬಂಡಾಯ ವಚನಕಾರ, ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿಯನ್ನು ದಿ.21 ರಂದು ಅದ್ದೂರಿಯಾಗಿ ಆಚರಿಸಲಾಗುತ್ತಿದೆ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಿಜಶರಣ ಅಂಬಿಗರ ಚೌಡಯ್ಯ ಜಯಂತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಂದು ಮಧ್ಯಾಹ್ನ 2 ಗಂಟೆಗೆ ಡಾ. ಎಸ್.ಎಂ. ಪಂಡಿತ ರಂಗಮಂದಿರದಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಶಿಷ್ಟಾಚಾರದಂತೆ ಅತಿಥಿ ಗಣ್ಯರ ಆಹ್ವಾನ, ಆಮಂತ್ರಣ ಪತ್ರಿಕೆ ಸೇರಿ ಇನ್ನಿತರ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತದೆ ಎಂದರು. ಕುಡಿಯುವ ನೀರಿನ ಸಭಾಂಗಣ ಸುತ್ತಮುತ್ತಲ್ಲಿನ ಸ್ವಚತೆ ಕುರಿತು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬೆಳಿಗ್ಗೆ 9 ಗಂಟೆಗೆ ಜಿಲ್ಲೆಯ ಎಲ್ಲ ಸರ್ಕಾರಿ ಅರೆ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಕಚೇರಿಗಳಲ್ಲಿ ಜಯಂತಿಯನ್ನು ಆಚರಿಸಬೇಕೆಂದರು. ಜ. 21 ರಂದು ಆಚರಣೆಗೆ ಸಕಲ ಕ್ರಮಕೈಗೊಳ್ಳಬೇಕು. ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಸೂಚಿಸಿದರು.

ಜಯಂತ್ಯುತ್ಸವ ಸಮಿತಿಯ ಅಧ್ಯಕ್ಷರಾಗಿ ಶಿವಾನಂದ ಹೊನಗುಂಟಿ ಅವರನ್ನು ನೇಮಿಸಲಾಯಿತು. ನುರಿತ ಉಪನ್ಯಾಸಕರಿಂದ ವಿಶೇಷ ಉಪನ್ಯಾಸ ನೀಡಲು ಸಮ್ಮತಿಸಲಾಯಿತು. ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸೇರಿದಂತೆ ವಿವಿಧ ಶಾಲೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಬೇಕು. ಸಿಬ್ಬಂದಿಗಳು ಆಯಾ ಸಮಾಜದ ಮುಖಂಡರು ಸಂಘ ಸಂಸ್ಥೆಗಳವರು ತಪ್ಪದೇ ಜಯಂತಿಯನ್ನು ಯಶಸ್ವಿಗೊಳಿಸುವಂತೆ ಸಲಹೆ ಸೂಚನೆ ನೀಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ, ಮುಖಂಡರಾದ ಶಾಂತಪ್ಪ ಕೂಡಿ, ಬಸವರಾಜ ಬೂದಿಹಾಳ, ಜಯಪ್ರಕಾಶ ಕಮಕನೂರ, ಅಣ್ಣಪ್ಪ ಜಮಾದಾರ್, ಅವಣ್ಣಗೌಡ ಪಾಟೀಲ್, ನಟರಾಜ ಕಟ್ಟಿ, ಸಂತೋಷ ತಳವಾರ, ರಮೇಶ ಫೀರೋಜಾಬಾದ, ಸಂತೋಷ ಬೆಣ್ಣೂರ, ಬಸವರಾಜ ಹರವಾಳ, ನಿಂಗಪ್ಪ ದೇವಣಗಾಂವ ಮತ್ತಿತರರಿದ್ದರು.

## ಮಡಿವಾಳಪ್ಪನವರ ತತ್ವಪದ ಉಳಿದಿದ್ದು ಭಜನಾ ಸಂಘಗಳ ಮೂಲಕ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.9–ಕಡಕೋಳದ ಮಡಿವಾಳಪ್ಪನವರ ತತ್ವಪದ ಉಳಿದಿದ್ದು ಭಜನಾ ಸಂಘಗಳ ಮೂಲಕ ಎಂದು ಕಡಕೋಳ ಮಹಾಮಠದ ಒಡೆಯರಾದ ಡಾ.ರುದ್ರಮುನಿ ಶಿವಾಚಾರ್ಯರು ಹೇಳಿದರು.

ಶಹಾಪುರ ತಾಲೂಕಿನ ಮುಡಬೂಳ ಗ್ರಾಮದ ಮಡಿವಾಳೇಶ್ವರ ಮಹಾಮಠದ ಆವರಣದಲ್ಲಿ ಅಬ್ಬೆತುಮಕೂರಿನ ವಿಶ್ವಜ್ಯೋತಿ ಪುಟ್ಟರಾಜ ಕಲಾ ಸಂಸ್ಥೆ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ರಾಜ್ಯಮಟ್ಟದ ಸಂಗೀತೋತ್ಸವ ಸಂಭ್ರಮ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪಂ.ಪುಟ್ಟರಾಜ ಕವಿ ಗವಾಯಿಗಳು ಕಲಿಸಿದ ಸಂಗೀತ ಮಡಿವಾಳಪ್ಪನವರ ತತ್ವಪಗಳು ಕಲಾ ಲೋಕದ ಸೂರ್ಯ ಚಂದ್ರರಿದ್ದಂತೆ, ನಮ್ಮ ಜನಪದ ಲೋಕದ ಸಿರಿಕಂಠಗಳು ಈ ಪದಗಳನ್ನು ಜತನವಾಗಿಟ್ಟು ಕೊಂಡಿವೆ. ಏಕತಾರಿ ನುಡಿಸಿ ಹಾಡುತ್ತಾ ಬಂದಿರುವ ಗಾಯನ ಪರಂಪರೆ ಮತ್ತು ತಮ್ಮ ಗೋಚರಿ–ಕೆಯ ಅರ್ಥಗ್ರಹಿಕೆಗಳೊಂದಿಗೆ ಬದುಕುತ್ತಿದ್ದಾರೆ. ಈ ಕಲೆ ಕಲಾವಿದರಿಗೆ ಮಾನ ಸನ್ಮಾನಗಳನ್ನು ಸರಕಾರ ನೀಡುವ ಕೆಲಸವಾಗಬೇಕು, ಇಂಥ ಕಾರ್ಯಕ್ರಮಗಳ ಮೂಲಕ ಇಂದಿನ ಪೀಳಿಗೆಗೆ ಸಂಗೀತ ಸಾಹಿತ್ಯದ ಬಗ್ಗೆ ಅರಿವು ಮೂಡಿಸುವ ಕೆಲಸವಾಗುತ್ತಿರುವುದು ಸ್ವಾಗತಾರ್ಹ ಎಂದರು.

ಹೋತಪೇಟ ಕೈಲಾಸ ಆಶ್ರಮದ ಶಿವಲಿಂಗ ಶರಣರ ಸಮ್ಮುಖದಲ್ಲಿ ನಡೆದ ಕಾರ್ಯಕ್ರಮದಲ್ಲಿ ನಾಗರೆಡ್ಡಿ ರೆಡ್ಡರ, ಶರಣಪ್ಪ ಬಬಲಾದಿ, ಮಲ್ಲಿಕಾರ್ಜುನ್ ಬಸ್ಸಾ, ಸಂಗಣ್ಣ ಬೆಣಕಲ, ಮಹಾದೇವ ಬಬಲಾದಿ, ಶಹಾಪುರ ಕನ್ನಡ ಪರ ಸಂಘಟನೆ ಒಕ್ಕೂಟ ಅಧ್ಯಕ್ಷ ಮಲ್ಲಯ್ಯ ಸ್ವಾಮಿ ಇಟಗಿ, ರಾಜಶೇಖರ ಮಾಲಿ ಪಾಟೀಲ, ಶ್ರೀಶೈಲ್ ಸಾಹು ಬುಕ್ ಬುಕ್ಕಿಷ್ಟಗಾರ, ಚಂದ್ರಕಾಂತ ಗುಳಗಿ ಅತಿಥಿಗಳಾಗಿ ಭಾಗವಸಿದ್ದರು.

ಗುರುಶಾಂತಯ್ಯ ಸ್ಥಾವರಮಠ ಬೂಸನೂರ, ದತ್ತರಾಜ ಕಲಶೆಟ್ಟಿ, ರಾಚಯ್ಯ ಶಾಸ್ತ್ರಿಗಳು ರಟಕಲ, ಬಂಡಯ್ಯ ಶಾಸ್ತ್ರಿಗಳು ಸುಂಟನೂರ, ನಾಗಲಿಂಗಯ್ಯ ಶಾಸ್ತ್ರಿಗಳು, ಬಸಯ್ಯ ಗುತ್ತೇದಾರ ತೆಲ್ಲೂರು, ಸೈದಪ್ಪ ಗವಾಯಿಗಳು ಸಪ್ಪನ ಗೋಳ, ಶಿವಶರಣಯ್ಯ ಸ್ವಾಮಿ ನಿಂಗದಳ್ಳಿ, ಸೋಮಯ್ಯ ಸಿಧನೂರ, ಶಿವಕುಮಾರ್ ಪಾಟೀಲ ಬೇಡಜೂರ್ಗಿ, ರೇವಣಯ್ಯ ಸ್ವಾಮಿ ಸುಂಟನೂರ, ಶ್ರೀಶೈಲ್ ವಗ್ಗಾಲಿ, ಶಿವಾನಂದ ಮಂದೇವಾಲ, ಸೂರ್ಯಕಾಂತ ಗೊಬ್ಬುರವಾಡಿ, ಶರಣಬಸಪ್ಪ ಹಾವನೂರು, ಸಂಗಮೇಶ ನೀಲಾ ಸೊಂತ, ಚೇತನ ಬಿದಿಮನಿ ಇವರ ಕೀರ್ತನ ಸಂಗೀತಕ್ಕೆ ಜಗದೀಶ ಹೂಗಾರ, ವೀರಭದ್ರಯ್ಯ ಸ್ಥಾವರಮಠ, ರವಿಸ್ವಾಮಿ ಗೋಟೂರ ಅಡಿವೇಶ್ ಅಂಕಲಗಿ ತಬಲಾ ಸಾಥಿಯಂದಿಗೆ ರಾಜಮಟ್ಟದ ಸಂಗೀತೋತ್ಸವ ಸಾಂಸ್ಕೃತಿಕ ಕಾರ್ಯಕ್ರಮ ನೀಡಿದರು.

ಸಂಸ್ಥೆ ಅಧ್ಯಕ್ಷರಾದ ತೋಟಯ್ಯ ಅಬ್ಬೆತುಮಕೂರು ಪ್ರಸ್ತಾವಿಕವಾಗಿ ಮಾತನಾಡಿದರು. ಬಂಡಯ್ಯ ಸ್ವಾಮಿ ಸುಂಟನೂರ ಸ್ವಾಗತಿಸಿದರು. ಗುರುಲಿಂಗಯ್ಯ ಸಾಥಖೇಡ ನಿರೂಪಿಸಿದರು.

## ಉತ್ತಮ ಸಾಧನೆ ನಿಮ್ಮದಾಗಲಿ:ಬೆಳಗುಂದಿ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಜ.2:2025ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಉತ್ತಮ ಸಾಧನೆ ಮಾಡುವ ಪ್ರಯತ್ನ ನಿಮ್ಮದಾಗಲಿ ಎಂದು ಸಂಸ್ಥೆಯ ಅಧ್ಯಕ್ಷ ಸಣ್ಣಸಿದ್ರಾಮಪ್ಪಗೌಡ ಬೆಳಗುಂದಿ ಅಭಿಪ್ರಾಯಪಟ್ಟರು.

ಪಟ್ಟಣದ ವಿದ್ಯಾ ವರ್ಧಕ ಕಲಾ ಹಾಗೂ ವಾಣಿಜ್ಯ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡ ನೂತನ ವರ್ಷಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಪದವಿ ಹಂತದ ಶಿಕ್ಷಣ ಅಂತ್ಯಂತ ಮಹತ್ವದ್ದಾಗಿದೆ. ವಿವಿಧ ಸ್ಪರ್ಧಾತ್ಮಾಕ ಪರೀಕ್ಷೆಗಳಲ್ಲಿ ಭಾಗವಹಿಸಿ ಉತ್ತಮ ಸಾಧನೆ ಮಾಡಿದರೆ ಒಳ್ಳೆಯ ಉದ್ಯೋಗದೊಂದಿಗೆ ಸಾಮಾಜಿಕ, ಆರ್ಥಿಕವಾಗಿ ಅಭಿವೃದ್ಧಿ ಹೊಂದಬಹುದು. ಈ ದಿಸೆಯಲ್ಲಿ ಗ್ರಾಮೀಣ ಭಾಗದಲ್ಲಿ ಸಂಸ್ಥೆ ಪದವಿ ಕಾಲೇಜುನ್ನು ಪ್ರಾರಂಭ ಮಾಡಿದೆ. ಇದರ ಸರಿಯಾದ ಸದುಪಯೋಗ ಪಡೆದುಕೊಂಡರೆ ಸಂಸ್ಥೆಯ ಮಹತ್ವ ಹೆಚ್ಚಾಗುತ್ತದೆ. ಹೊಸ ವರ್ಷದ ಆಚರಣೆಯಲ್ಲಿ ಕೆಲ ಮಹತ್ವದ ಗುರಿ ಉದ್ದೇಶಗಳನ್ನು ರೂಪಿಸಿಕೊಳ್ಳಬೇಕು ಎಂದು ಕಿವಿ ಮಾತುಗಳನ್ನು ಹೇಳಿದರು.

ಸಹಕಾರ್ಯದರ್ಶಿ ಕೆ.ಬಿ.ಗೋವರ್ಧನ, ಕೋಶಾಧ್ಯಕ್ಷ ಮುಕುಂದಕುಮಾರ ಅಲಿಝಾರ, ಆಡಳಿತ ಮಂಡಳಿಯ ಸದಸ್ಯರಾದ ಸಿದ್ರಾಮಪ್ಪಗೌಡ ಗೊಂದಡಗಿ, ಸುರೇಶ ಆನಂಪಲ್ಲಿ, ಪ್ರೌಢ ಶಾಲಾ ಮುಖ್ಯಗುರು ಲಿಂಗಾರಡ್ಡಿನಾಯಕ, ಪ್ರಾಂಶುಪಾಲರಾದ ಹಂಪಣ್ಣ ಸಜ್ಜನಶೆಟ್ಟಿ, ಜಿ.ಎಂ.ಗುರುಪ್ರಸಾದ, ಕರಬಸಯ್ಯ ದಂಡಿಗಿಮಠ, ಶಿಕ್ಷಕರು, ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಸೇರಿದಂತೆ ಇತರರಿದ್ದರು.

## ಘತ್ತರಗಾ ಭಾಗ್ಯವಂತಿ ದೇವಾಲಯ ಹುಂಡಿ ಎಣಿಕೆ ಪೂರ್ಣ 70 ಲಕ್ಷ ನಗದು, 200 ಗ್ರಾಂ ಚಿನ್ನಾಭರಣ ಸಂಗ್ರಹ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.9: ಜಿಲ್ಲೆಯ ಅಫಜಲಪುರ ತಾಲೂಕಿನ ಸು–ಕ್ಷೇತ್ರ ಘತ್ತರಗಾ ಭಾಗ್ಯವಂತಿ ದೇವಾಲಯದ ಐದು ಹುಂಡಿಗಳಲ್ಲಿ ಸಂಗ್ರಹ ಆಗಿರುವ ಭಕ್ತರ ಕಾಣಿಕೆ ಬುಧವಾರ ಎಣಿಕೆ ಮಾಡಲಾಗಿದ್ದು, ರೂ.70,66,145 ನಗದು ಹಾಗೂ ಸುಮಾರು 200 ಗ್ರಾಂ ಚಿನ್ನಾಭರಣ ಮತ್ತು ಒಂದು ಕಿಲೋ ಬೆಳ್ಳಿ ಸಂಗ್ರಹಗೊಂಡಿರುವುದಾಗಿ ದೇವಾಲಯದ ಮುಖ್ಯಾಧಿಕಾರಿ ಪ್ರಕಾಶ ಕುದರಿ ತಿಳಿಸಿದ್ದಾರೆ.


ಅಫಜಲಪುರ ಎಪಿಎಂಸಿ ಎಸ್ ಬಿ ಐ ಶಾಖೆಯ ಅಧಿಕಾರಿಗಳು ಹಾಗೂ ಪೊಲೀಸ್ ಬಂದೋಬಸ್ತ್ ಮಧ್ಯೆ ನಡೆದ ಎಣಿಕೆ ಕಾರ್ಯದ ವೇಳೆ ಒಂದು ಅಮೆರಿಕ ಡಾಲರ್ ಸಹ ಹುಂಡಿಯಲ್ಲಿ ಪತ್ತೆಯಾಗಿದೆ ಎಂದಿದ್ದಾರೆ.

ನಗದು ಕಾಣಿಕೆಯಾಗಿ ಭಕ್ತರು ಸಲ್ಲಿಸಿರುವ ರೂ.1ರಿಂದ 500 ಮುಖಬೆಲೆಯ ನೋಟುಗಳ ಎಣಿಕೆ ನಡೆದಿದ್ದು, ಜೊತೆಗೆ 30 ಚೀಲಗಳಷ್ಟು ನಾಣ್ಯಗಳು ಸಹ ಸಂಗ್ರಹಗೊಂಡಿವೆ. ಈ ನಾಣ್ಯಗಳ ಎಣಿಕೆ ಕಾರ್ಯ ಸಂಕ್ರಾಂತಿ ಹಬ್ಬದ ಬಳಿಕ ಕೈಗೊಳ್ಳಲಾಗುವುದು. ಅಲ್ಲಿಯವರೆಗೆ, ನಾಣ್ಯಗಳನ್ನು ಲಾಕರ್‌ನಲ್ಲಿ ಭದ್ರವಾಗಿ ಇರಿಸುವಂತೆ ನಿರ್ದೇಶನ ನೀಡಲಾಗಿದೆ ಎಂದು ಕುದರಿ ಮಾಹಿತಿ ನೀಡಿದ್ದಾರೆ.

ಇನ್ನುಳಿದಂತೆ ಒಂದು ರೂ.200 ನೋಟಿನ ಮೇಲೆ ಮಹಿಳಾ ಭಕ್ತೆಯೊಬ್ಬರು ತಮ್ಮನ್ನು ಪೊಲೀಸ್ ಅಧಿಕಾರಿ ಮಾಡುವಂತೆ ದೇವಿಗೆ ಲಿಖಿತ ಹರಕೆ ಸಲಿಸಿದ್ದರೆ, ಕೆಲವರು ನೋಟುಗಳ ಮೇಲೆ ತಮಗೆ ಆದಷ್ಟು ಬೇಗ ಮದುವೆ, ಸರಕಾರಿ ಉದ್ಯೋಗ ಕರುಣಿಸುವಂತೆ ಲಿಖಿತ ಹರಕೆ ಸಲಿಸಿದ್ದಾರೆ ಎಂದು ಹೇಳಿದ್ದಾರೆ.

ಅಫಜಲಪುರ ಗ್ರೇಡ್–2 ತಹಸೀಲ್ದಾರ್ ಶರಣಬಸಪ್ಪ, ಎಸ್.ಬಿ.ಐ ಮ್ಯಾನೇಜರ್ ರಾಕೇಶ್ ಶರ್ಮಾ, ದೇವಾಲಯದ ಕಾರ್ಯದರ್ಶಿ ಮಂಜುನಾಥ ಎಚ್.ನಾವಿ ಹಾಗೂ ತಹಸೀಲ್ದಾರ್ ಕಚೇರಿಯ ಮುಜರಾಯಿ ವಿಭಾಗದ ಸಿಬ್ಬಂದಿ ಇದ್ದರು.

## ಇಂದು ಮೂರು ದಿನಗಳ ಕಾಲ ಸಿಂಧನೂರಿನಲ್ಲಿ ಕಾಲೇಜು ರಂಗೋತ್ಸವ–ಡಾ.ಸುಜಾತಾ ಜಂಗಮಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.8 –ಕಾಲೇಜು ವಿದ್ಯಾರ್ಥಿಗಳಲ್ಲಿ ರಂಗಭೂಮಿ ಕುರಿತು ಆಸಕ್ತಿ ಮೂಡಿಸುವುದರ ಜೊತೆಗೆ ವಿದ್ಯಾರ್ಥಿಗಳ ಮನೋವಿಕಾಸ ಮತ್ತು ಶೈಕ್ಷಣಿಕ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸುವ ಉದ್ದೇಶದಿಂದ ಇದೇ ಜನವರಿ 10 ರಿಂದ 12ರ ವರೆಗೆ ಮೂರು ದಿನಗಳ ಕಾಲ ರಾಯಚೂರು ಜಿಲ್ಲೆಯ ಸಿಂಧನೂರಿನ ಟೌನ್ ಹಾಲ್ ರಂಗಮಂದಿರದಲ್ಲಿ ವಿಭಾಗ ಮಟ್ಟದ "ಕಾಲೇಜು ರಂಗೋತ್ಸವ" ಕಾರ್ಯಕ್ರಮ ಆಯೋಜಿಸಿದೆ ಎಂದು ಕಲಬುರಗಿ ರಂಗಾಯಣದ ನಿರ್ದೇಶಕಿ ಡಾ.ಸುಜಾತಾ ಜಂಗಮಶೆಟ್ಟಿ ತಿಳಿಸಿದ್ದಾರೆ.

ಟಿ.ವಿ, ಸಿನಿಮಾ, ಕಂಪ್ಯೂಟರ್, ಸಾಮಾಜಿಕ ಜಾಲತಾಣಗಳ ಪ್ರಭಾವದಲ್ಲಿ ರಂಗಭೂಮಿ ಮರೆಯಾಗಿ ಹೋಯಿತು ಎನ್ನುವದರ ನಡುವೆ ಕಾಲೇಜು ಮಟ್ಟದಲ್ಲಿ ರಂಗಭೂಮಿಯತ್ತ ವಿದ್ಯಾರ್ಥಿಗಳು ವಾಲುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ. ಇಂತಹ ಯುವ ಪೀಳಿಗೆಯನ್ನು ಮತ್ತಷ್ಟು ರಂಗಭೂಮಿಯತ್ತ ಸೆಳೆಯುವ ಉದ್ದೇಶದಿಂದ ಕಾಲೇಜು ರಂಗೋತ್ಸವ ಕಾರ್ಯಕ್ರಮ ವಿನೂತನವಾಗಿ ಆಯೋಜಿಸಲಾಗಿದೆ.

ಕಲಬುರಗಿ ಕೇಂದ್ರವಾಗಿ ಕಾರ್ಯಕ್ರಮರೂಪಿತವಾಗಬಾರದೆಂಬ ಉದ್ದೇಶದಿಂದ ಪ್ರದೇಶದ 7 ಜಿಲ್ಲೆಗಳಲ್ಲಿ ತಲಾ ಒಂದು ಕಾಲೇಜು ಆಯ್ಕೆಮಾಡಿಕೊಂಡು 20 ದಿನಗಳ ಸತತವಾಗಿ ನಿರ್ದೇಶಕರಿಂದ ನಾಟಕದ ಕುರಿತು ತರಬೇತಿ ಪಡೆದ ಕಾಲೇಜು ವಿದ್ಯಾರ್ಥಿಗಳು ಮೂರು ದಿನಗಳ ಈ ಕಾಲೇಜು ರಂಗೋತ್ಸವದಲ್ಲಿ ತಮ್ಮಲ್ಲಿ ಅಡಗಿರುವ ಕಲಾ ಪ್ರದರ್ಶನ ಮಾಡಲಿದ್ದಾರೆ ಎಂದರು.

ಪದವಿ ಪೂರ್ವ, ಪದವಿ ಹಾಗೂ ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ನಾಟಕ ಅಭ್ಯಾಸ ರಂಗಭೂಮಿಯ ಹೊಸ ಅಲೆಗೆ ಕಾರಣವಾಗಿದೆ. ರಂಗಭೂಮಿ ಸದಾ ಜೀವಂತವಾದದ್ದು. ಶಾಲಾ ಕಾಲೇಜುಗಳು ಕಲಿಸಲಾರದ ಜೀವನ ಪಾಠವನ್ನು ರಂಗಭೂಮಿ ಕಲಿಸಿಕೊಡಲಿದೆ. ವಾಸ್ತವಗಳನ್ನು ರಂಗಭೂಮಿಯಷ್ಟು ಸಮರ್ಥವಾಗಿ ಕಲಿಸಬಲ್ಲ ಮಾಧ್ಯಮ ಮತ್ತೊಂದಿಲ್ಲ ಎಂದಿರುವ ಡಾ.ಸುಜಾತಾ ಜಂಗಮಶೆಟ್ಟಿ ಅವರು, ವಿದ್ಯಾರ್ಥಿಗಳಿಗೆ ಭಾಷಾ ಪ್ರಬುದ್ಧತೆ, ಶುದ್ಧತೆ, ಪ್ರೀತಿ, ಮಮತೆ, ಅನುಕಂಪ, ಇವೆಲ್ಲವೂ ರಂಗ ವೇದಿಕೆ ಹೇಳಿಕೊಡಲಿದೆ. ಯಾವುದೇ ಕಲೆ ಇರಲಿ ಹೊಸ ತಲೆಮಾರು ಬಾರದೆ ಇದ್ದರೆ, ಅದು ನಶಿಸಿ ಹೋಗುತ್ತದೆ. ರಂಗಭೂಮಿಯನ್ನು ಜೀಂತವಾಗಿಡುವ ನಿಟ್ಟಿನಲ್ಲಿ ವಿನೂತನ ಪ್ರಯತ್ನಕ್ಕೆ ಕಲಬುರಗಿ ರಂಗಾಯಣ ಮುಂದಾಗಿದೆ ಎಂದರು.

ಮೂರು ದಿನಗಳಲ್ಲಿ 7 ನಾಟಕ ಪ್ರದರ್ಶನ: ಸಿಂಧನೂರಿನ ಆಕ್ಸ್‌ಫರ್ಡ್ ಸಮೂಹ ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜಿಸಿರುವ ಮೂರು ದಿನಗಳ ಕಾಲೇಜು ರಂಗೋತ್ಸವವನ್ನು ಜ.10 ರಂದು ಬೆಳಿಗ್ಗೆ 11 ಗಂಟೆಗೆ ಬಂಗಾರಿ ಕ್ಯಾಂಪ್‌ನ ಪೂಜ್ಯ ಶ್ರೀ ಸಿದ್ದರಾಮೇಶ್ವರ ಶರಣರ ದಿವ್ಯ ಸಾನಿಧ್ಯದಲ್ಲಿ ನಡೆಯುವ ಈ ಕಾರ್ಯಕ್ರಮವನ್ನು ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ಉದ್ಘಾಟಿಸಲಿದ್ದು, ಅಧಿಕಾರಿಗಳು, ಕಲಾವಿದರು ಹಾಗೂ ಚುನಾಯಿತ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

ಜನವರಿ 10 ರಂದು ಮಧ್ಯಾಹ್ನ 12.30 ಗಂಟೆಗೆ ಶ್ರೀನಿವಾಸ ದೋರನಹಳ್ಳಿ ಅವರ ರಚನೆ ಮತು ನಿರ್ದೇಶನದ "ಶಪಥದ ಮಹಾಭಾರತ" ನಾಟಕವು ಯಾದಗಿರಿ ಜಿಲ್ಲೆಯ ಭೀಮರಾಯನಗುಡಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಮಧ್ಯಾಹ್ನ 2.30 ಗಂಟೆಗೆ ಮೈಸೂರಿನ ಎಸ್.ರಾಮನಾಥ ಅವರ ರಚನೆ ಮತು ಮಹೇಶ ಭೋವಿ ಅವರ ನಿರ್ದೇಶನದ "ಅಶ್ವ ಪರ್ವ" ನಾಟಕವನ್ನು ಸ್ಥಳೀಯ ಸಿಂಧನೂರಿನ ಆಕ್ಸ್‌ಫರ್ಡ್ ಸಮೂಹ ಸಂಸ್ಥೆಗಳ ಪಿ.ಯು. ಕಾಲೇಜಿನ ವಿದ್ಯಾರ್ಥಿಗಳು ಪ್ರದರ್ಶನ ಮಾಡಲಿದ್ದಾರೆ.

ಜನವರಿ 11 ರಂದು ಬೆಳಿಗ್ಗೆ 11 ಗಂಟೆಗೆ ದಲಿತ ಕವಿ ಡಾ.ಸಿದ್ದಲಿಂಗಯ್ಯ ಅವರ ರಚನೆಯ "ಒಂದಾನೊಂದು ಊರು (ನನ್ನ ಕತ್ತೆ ನಿಮ್ಮ ಧರ್ಮ)" ಎಂಬ ನಾಟಕವನ್ನು ಮಹೇಶ ವಿ. ಪಾಟೀಲ ಅವರ ನಿರ್ದೇಶನದಲ್ಲಿ ಬೀದರ ಜಿಲ್ಲೆಯ ಘೋಡಂಪಳ್ಳಿಯ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಪ್ರಸ್ತುತಪಡಿಸಲಿದ್ದಾರೆ. ಮಧ್ಯಾಹ್ನ 12.30 ಗಂಟೆಗೆ ಶಾಂತಲಿಂಗಯ್ಯ ಎಸ್.ಮಠಪತಿ ಅವರ ರಚನೆಯ "ಕರ್ಮ" ಎಂಬ ನಾಟಕವನು ಗಂಗೋತ್ರಿ ಎಸ್.ಮಠಪತಿ ನಿರ್ದೇಶನದಲ್ಲಿ ಕಲಬುರಗಿಯ ಎಂ.ಎ.ಟೆಂಗಳೀಕರ್ ಕಾಲೇಜಿನ ವಿದ್ಯಾರ್ಥಿಗಳು ತಮ್ಮ 20 ದಿನದ ನಾಟಕ ತರಬೇತಿಯ ಪ್ರದರ್ಶನ ನೀಡಲಿದ್ದಾರೆ. ಅದೇ ರೀತಿ ಮಧ್ಯಾಹ್ನ 2.30 ಗಂಟೆಗೆ ಡಾ.ಚನ್ನಣ್ಣ ವಾಲೀಕರ ರಚನೆಯ "ಬಾಲಿ" ನಾಟಕವನ್ನು ರೇಣುಶ್ರೀ ಅವರ ನಿರ್ದೇಶನದಲ್ಲಿ ಕೊಪ್ಪಳ ಜಿಲ್ಲೆಯ ಕಿನ್ನಾಳ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಪ್ರಸ್ತುತಪಡಿಸಲಿದ್ದಾರೆ.

ಜನವರಿ 12 ರಂದು ಬೆಳಿಗ್ಗೆ 11 ಗಂಟೆಗೆ ಡಾ.ಚಂದ್ರಶೇಖರ ಕಂಬಾರ ಅವರ "ಸಂಗ್ಯಾಬಾಳ್ಯಾ" ನಾಟಕವನ್ನು ಚಂದ್ರಶೇಖರ ಬಸಾಪುರ ಅವರ ನಿರ್ದೇಶನದಲ್ಲಿ ಬಳ್ಳಾ–ರಿಯ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಮಧ್ಯಾಹ್ನ 12.30 ಗಂಟೆಗೆ ಹನುಮಂತ ಹಾಲಿಗೇರಿ ರಚನೆ ಮತ್ತು ಡಾ.ಸಹನ ಪಿಂಜಾರ್ ಅವರ ನಿರ್ದೇಶನದ "ಊರು ಸುಟ್ಟರು ಹನುಮಪ್ಪ ಹೊರಗ್" ಎಂಬ ನಾಟಕವನ್ನು ವಿಜಯನಗರ ಜಿಲ್ಲೆಯ ಹೊಸಪೇಟೆಯ ಟಿ.ಎಂ.ಎ.ಇ.ಎಸ್. ಪಾಲಿಟೆಕ್ನಿಕ್ ಕಾಲೇಜಿನ ತಾಂತ್ರಿಕ ವಿದ್ಯಾರ್ಥಿಗಳೂ ತಮ್ಮ ಕಲಾ ಪ್ರದರ್ಶನ ಮಾಡಲಿದ್ದಾರೆ.

## ಮನವಿಗೆ ಸ್ಪಂದಿಸಿದ ಜೆಸ್ಕಾಂ ಅಧಿಕಾರಿ ರವಿ ಕಾರಬಾರಿ ಅವರಿಗೆ ಸನ್ಮಾನಿಸಿ ಕೃತಜ್ಞತೆ





ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮನವಿಗೆ ಸ್ಪಂದಿಸಿ ಹೊಸ ಪೋಲು ಮತ್ತು ತಂತಿ ಅಳವಡಿಸಿದ ಜೆಸ್ಕಾಂ ಅಧಿಕಾರ ರವಿ ಕಾರಬಾರಿ ಅವರಿಗೆ ಶುಭಾಶ ಚಂದ್ರಭೋಸ ಅಭಿವೃದ್ಧಿ ಸಂಘದ ಅಧ್ಯಕ್ಷ ಸಂಗಮನಾಥ ಬಿರಾದಾರ ಸನ್ಮಾನಿಸಿ ಕೃತಜ್ಞತೆ ಸಲ್ಲಿಸಿದರು.

ನಂತರ ಮಾತನಾಡಿ, ನಮ್ಮ ಗ್ರಾಮದಲ್ಲಿ ಪದೇ ಪದೇ ತಂತಿ ಕಟ್ಟಾಗಿ ಬೀಳುವುದು ಹಾಗೂ ಹಳೆ ಕಂಬಗಳನ್ನು ತೆಗೆದು ಹೊಸ ಕಂಬಗಳನ್ನು ಅಳವಡಿಸುವುದು ಹಾಗೂ ಗ್ರಾಮದಲ್ಲಿ ಸಿಟಿ ಕೇಬಲ್ ಅಳವಡಿಸುವುದು ಬಗ್ಗೆ ಅಧಿಕಾರಗಳಿಗೆ ಮನವಿ ಮಾಡಿದಾಗ ಅವರು ನಮ್ಮ ಮನವಿಗೆ ಸ್ಪಂದಿಸಿ ನಮ್ಮ ಡಿಗ್ಗಿ ಗ್ರಾಮದಲ್ಲಿ ಹೊಸ ಪೋಲು ಮತ್ತು ತಂತಿ ಸಿಟಿ ಕೇಬಲ ವ್ಯವಸ್ಥೆ

ಮಾಡಿದ್ದಾರೆ. ಇದರಿಂದ ಜನ ನಿರ್ಭಿತಿಯಿಂದ ತಿರುಗುವಂತೆ ಆಗಿದೆ.

ಅಧಿಕಾರಗಳ ಕಾರ್ಯಕ್ಕೆ ಅವರಿಗೆ ಗ್ರಾಮ ಸಂಚಾರ ಕಾರ್ಯಕ್ರಮಕ್ಕೆ ಊರಿಗೆ ಬಂದಾಗ ಸನ್ಮಾನಿಸಿ ಕೃತಜ್ಞತೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಂದೀಪ ಪಾಟೀಲ, ಸುನಿಲ ಚಾಂಡೇಶ್ವರೆ, ನಾಗರಾಜ ಸ್ವಾಮಿ,

ರಾಜಕುಮಾರ ಕುಂಬಾರಗಿರೆ, ಅಭಿಜಿತ ರಾಂಪುರೆ ಸೇರಿದಂತೆ ಅನೇಕರು ಇದ್ದರು.

## CITATION
## IN THE COURT OF THE CIVIL JUDGE AND JMFC., AT HUMNABAD
## CRL. MISC. No. 2140/2024

Petitioners:-

1) Babu rao S/o Late Maruti Jamadar Age 52 Year Occu Agriculture

2) Shivakanth S/o Lat Maruti Age 44 Yars Occu Agriculture

Both R/o Village Kanthalli Tq:Humnabad Dist: Bidar.

Respondent:-

The Registrar Of Birth and Death Through The Tahasildar Offic Humnabad

Sub:petition U/Sec 13(3) of Birth and Death Registration Act 1969

Whereas the above named Petitioners have filed the petition under section 13(3) of Birth and Death Registration Act 1969 Praying this Honorable Court to issue Death Certificat sons of petitioner No. 1 and 2 namely. Maruti S/o Tukaram who died on 15-03-1948 at Village Kathali Tq:Humnabad Dist:Bidar. The petitioners Claiming the death Certificate of said Maruti for transfer of property and other Official Purpose and home record.

Therefore it is herby proclaimed that if any persons have got any objection in this regard, may approach to this court on 11-02-2025 at 11-00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 06-01-2025

//By Ordr of the Court//
Chief Ministerial Officer,
Prl. Civil Judge and JMFC Court Humnabad

## ಚಿಂಚೋಳಿ: ಅಪ್ರಾಪ್ತ ವಿದ್ಯಾರ್ಥಿನಿಯ ಮೇಲೆ ಅತ್ಯಾಚಾರ



ಮಲ್ಲಮ್ಮ ನುಡಿ ವಾರ್ತೆ

ಚಿಂಚೋಳಿ,ಜ.9–ಹನ್ನೆರಡು ವರ್ಷ ವಯಸ್ಸಿನ ಅಪ್ರಾಪ್ತ ಬಾಲಕಿಯ ಮೇಲೆ ವ್ಯಕ್ತಿಯೊಬ್ಬ ಅತ್ಯಾಚಾರ ನಡೆಸಿರುವ ಘಟನೆ ಚಿಂಚೋಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಆರೋಪಿಯು ಬಾಲಕಿಯ ಶಾಲೆಗೆ ಹೋಗಿ ದ್ವಿಚಕ್ರ ವಾಹನದ ಮೇಲೆ ಅಪಹರಣ ಮಾಡಿ ಲೈಂಗಿಕ ಕಿರುಕುಳ ನೀಡಿದ್ದಲ್ಲದೆ, ಈ ಹಿಂದೆ ಕಳೆದ ಒಂದು ತಿಂಗಳಿನಿಂದ ಬಾಲಕಿ ಮೇಲೆ ಅತ್ಯಾಚಾರವೆಸಗಿದ್ದಾನೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಸದ್ಯ ಆರೋಪಿಯಾದ ಸೋಯಬ್ ಅಕ್ತರ್ ಮೇಲೆ ಪೊಕ್ಸೋ ಕಾಯ್ದೆ ಅಡಿ ಚಿಂಚೋಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಪಿಎಚ್ ಡಿ ಪದವಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.9: ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ, ಕನ್ನಡ ವಿಭಾಗದ ಸಂಶೋಧನಾ ವಿದ್ಯಾರ್ಥಿ ಹಾಗೂ ಸಿಯುಕೆ ಅಂಬೇಡ್ಕರ್ ವಿದ್ಯಾರ್ಥಿ ಒಕ್ಕೂಟದ ಅಧ್ಯಕ್ಷರಾದ ಪಿ. ನಂದಕುಮಾರ್ ಅವರು ಕನ್ನಡ ವಿಷಯದಲ್ಲಿ "ದಲಿತ ಚಳುವಳಿಯ ಅನುಭವ ಕಥನ" (ಗುಲ್ಬರ್ಗ ಜಿಲ್ಲೆಯನ್ನು ಅನುಲಕ್ಷಿಸಿ) ಎಂಬ ವಿಷಯದ ಕುರಿತು ಕನ್ನಡ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ.ಅಪ್ಪಗೆರೆ ಸೋಮಶೇಖರ್ ಅವರ ಮಾರ್ಗದರ್ಶನದಲ್ಲಿ ಸಂಶೋಧನಾ ಕಾರ್ಯ ಕೈಗೊಂಡಿದ್ದರು. ಈ ಹಿನ್ನೆಲೆಯಲ್ಲಿ ಪಿ. ನಂದಕುಮಾರ್ ಅವರ ಸಾದರಪಡಿಸಿದ ಸಂಶೋಧನಾ ಮಹಾಪ್ರಬಂಧವನ್ನು ಅಂಗೀಕರಿಸಿ ಇವರಿಗೆ ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲಯವು ಡಾಕ್ಟರೇಟ್ ಪದವಿಯನ್ನು ನೀಡಿದೆ.

# ಜ.12 ರಂದು ಬೈಕ್ ರ್‍ಯಾಲಿಯೊಂದಿಗೆ ಸಂಗೊಳ್ಳಿ ರಾಯಣ್ಣ ಪ್ರತಿಮೆ ಮೆರವಣಿಗೆ

ಮಲ್ಲಮ ನುಡಿ ವಾರ್ತೆ

ಬೀದರ. ಜ. 09 : ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ಯುವಕ ಸಂಘದ ಸಂಸ್ಥಾಪಕ ಜಿಲ್ಲಾಧ್ಯಕ್ಷರಾದ ಜಾಲೆಂದರ ಕಮಠಾಣೆ ಮಾಳೆಗಾಂವ ನೇತೃತ್ವದಲ್ಲಿ ಬೀದರ್ ತಾಲ್ಲೂಕಿನ ಮಾಳೆಗಾಂವ್ ಗ್ರಾಮದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಯುವಕ ಸಂಘದ ವತಿಯಿಂದ ಬೆಳಗಾವಿಯಿಂದ ರಾಯಣ್ಣನ ಪ್ರತಿಮೆಯನ್ನು, ದಕ್ಷಿಣ ಕಾಶಿ ಎಂದು ಖ್ಯಾತಿ ಪಡೆದಿರುವ ಶ್ರೀ ಮೈಲಾರ ಮಲ್ಲಣ್ಣದೇವಸ್ಥಾನಕ್ಕೆ ತಂದು, ಅಲ್ಲಿಂದ ಸುಮಾರು 100ಕ್ಕೂ



ಹೆಚ್ಚು ಬೈಕ್ ಗಳ ಮೂಲಕ ಬೃಹತ್ ಬೈಕ್ ರ್‍ಯಾಲಿಯೊಂದಿಗೆ ಬೀದರನ ಪ್ರಮುಖ ಬೀದಿಗಳ ಮುಖಾಂತರ ಮೆರವಣಿಗೆ ಕೈಗೊಂಡು ಬೀದರ್ ನಲ್ಲಿನ ಮಹಾತ್ಮರ ಮೂರ್ತಿಗಳಿಗೆ ಗೌರವ ಮಾಲಾರ್ಪಣೆ ಸಲ್ಲಿಸುತ್ತ, ವೀರಸೈನಾನಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಮೆಯನ್ನು ಮಾಳೆಗಾಂವ್ ಗ್ರಾಮದ ಬೊಮ್ಮಗೊಂಡೇಶ್ವರ ಸರ್ಕಲ್ ಗೆ ತಂದು, ಅಲ್ಲಿಂದ ಅದ್ದೂರಿ ಮೆರವಣಿಗೆ ಮುಖಾಂತರ ಸಂಗೊಳ್ಳಿರಾಯಣ್ಣನ ಸರ್ಕಲ್ ಗೆ ತರಲಾಗುವುದು ಎಂದು ಜಾಲೆಂದರ ಕಾಮಠಾಣೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೃಜನಶೀಲ ಸಾಹಿತ್ಯದಲ್ಲಿ ಸಮಾಜದ ಶುದ್ಧೀಕರಣ ಅಡಗಿದೆ: ಡಾ. ಬಸವರಾಜ ಕಲ್ಗುಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ಜ.9:ಸೃಜನಶೀಲ ಸಾಹಿತ್ಯಸಾಮಾಜಿಕಬದಲಾವಣೆಗೆ ಹಲವಾರು ಆಯಾಮಗಳನ್ನು ತೆರೆದುಕೊಂಡಿದೆ. ಸಮಾಜದ ಸರ್ವರಂಗಗಳು ದಾರಿತಪ್ಪಿದಾಗ ಅದಕ್ಕೆ ಮೊದಲು ಪ್ರತಿಕ್ರಿಯೆ ನೀಡುವುದೆ ಸೃಜನಶೀಲ ಸಾಹಿತ್ಯವೆಂದು ಕೇಂದ್ರ ಸಾಹಿತ್ಯ ಅಕಾಡೆಮಿಯ ಸಲಹಾ ಮಂಡಳಿಯ ಸಂಚಾಲಕರಾದ ಡಾ. ಬಸವರಾಜ ಕಲ್ಗುಡಿ ಅಭಿಪ್ರಾಯ ವ್ಯಕ್ತಪಡಿಸಿದರು.

ಬಸವೇಶ್ವರ ಕಲಾ ಮಹಾ ವಿದ್ಯಾಲಯದ ಕನ್ನಡ ಸ್ನಾತ-ಕೋತರ ಕೇಂದ್ರ ಹಾಗೂ ಸಂಸ್ಕೃತಿಕ ಚಟುವಟಿಕೆಗಳ ಸಹಯೋಗದಲ್ಲಿಜರುಗಿದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡುತ್ತ ಸಾಹಿತ್ಯ ಪ್ರಾಚೀನ ಕಾಲದಿಂದಲೂ ಸಾಮಾಜಿಕ ಸಮಸ್ಯೆಗಳಿಗೆ ಪ್ರತಿಸ್ಪಂದಿಸುತ್ತಾ ಬಂದಿದ್ದು ಇತಿಹಾಸದಲ್ಲಿ ಕಾಣುತ್ತೇವೆ. ವಚನ ಸಾಹಿತ್ಯ, ದಾಸ ಸಾಹಿತ್ಯ, ತತ್ವಪದಗಳು ಕಾಲಕ್ಕೆ ತಕ್ಕಂತೆ ಸಮಾಜಕ್ಕೆ ಪ್ರತಿಕ್ರಿಯೆಯನ್ನು ನೀಡುತ್ತಾ ಸಮಾಜ ಸುಧಾರಣೆಯ ಕಾರ್ಯವನ್ನು ಮಾಡಿದೆ. ಸಮಾಜದ ಓರೆ ಕೋರೆಗಳನ್ನು ತಿದ್ದಿ ಒಳ್ಳೆಯ ನಾಗರಿಕರನ್ನು ನಿರ್ಮಿಸುವಲ್ಲಿ ಸಾಹಿತ್ಯ ಅಂತರ್ಗಾಮಿನಿಯಂತೆ ಕೆಲಸ ಮಾಡುತ್ತದೆ. ಅಂತರಾತ್ಮದ ವಿಮರ್ಶೆ ಮಾಡಿಕೊಳ್ಳುತ್ತ ವ್ಯಕ್ತಿ, ಕುಟುಂಬ ಹಾಗೂ ಸಮಾಜಗಳ ನಡುವೆ ಸಮನ್ವಯತೆಯನ್ನು ಸೃಜನಶೀಲ ಸಾಹಿತ್ಯ ಸಾಧಿಸಿಕೊಂಡು ಬಂದಿದೆಯಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಗೌರವ ಉಪಸ್ಥಿತರಿದ್ದ ಅಭಿನಂದನಾ ಪರ ನುಡಿಗಳನ್ನು ಆಡಿದ ಡಾ. ವಿ. ಎಸ್ ಕಟಗಿಹಳ್ಳಿಮಠ ಸೃಜನಶೀಲ ಸಾಹಿತ್ಯದ ವೈಶಿಷ್ಟತೆಗಳ ಬಗ್ಗೆ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯರಾದ ಶ್ರೀ. ಎಸ್. ಆರ್. ಮೂಗನೂರಮಠ ವಹಿಸಿ ಮಾತನಾಡುತ್ತಾ ಸಾಹಿತ್ಯ ಮಾನಸಿಕ ತುಮುಲುಗಳಿಗೆ ಔಷಧ ನೀಡುವ ಸಾಮರ್ಥ್ಯ ಹೊಂದಿದೆ. ಓದುಗ ಎಂದೂ ಒಂಟಿಯಲ್ಲ ಬಹುಮುಖ ಆಯಾಮದ ಬಹುಮುಖ ವ್ಯಕ್ತಿತ್ವಕ್ಕೆ ಸಾಹಿತ್ಯ ಪೂರಕವಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿಯ ಸಲಹಾ ಮಂಡಳಿಯ ಸಂಚಾಲಕರಾಗಿ ಹಾಗೂ ಸದಸ್ಯರಾಗಿ ಆಯ್ಕೆಯಾದ ಡಾ. ಬಸವರಾಜ ಕಲ್ಗುಡಿ ಹಾಗೂ ಡಾ. ವಿ. ಎಸ್. ಕಟಗಿಹಳ್ಳಿಮಠ ಅವರನ್ನು ಮಹಾವಿದ್ಯಾಲಯದ ವತಿಯಿಂದ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಚಟುವಟಿಕೆಯ ಸಂಯೋಜ-ಕರಾದ ಡಾ. ಕೆ. ವಿ ಮಠ, ಐಕ್ಯೂಎಸಿ ಸಂಯೋಜಕರಾದ ಡಾ. ಎ. ಯು ರಾಥೋಡ ಡಾ. ಕೆ. ಕೆಂಪೇಗೌಡ, ಬೋಧಕ, ಬೋಧಕೇತರ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

# ಪಾರಮಾರ್ಥ ಸೇವೆಯಿಂದ ಪರಮಾತ್ಮನ ಪ್ರಾಪ್ತಿ: ತಮಲೂರು ಶ್ರೀಗಳು



ಮಲ್ಲಮ ನುಡಿ ವಾರ್ತೆ

ಬೀದರ.ಜ.09:ಪಾರಮಾರ್ಥ ಹಾಗೂ ನಿಸ್ವಾರ್ಥ ಸೇವೆಯಿಂದ ಪರಮಾತ್ಮನ ಸಾಕ್ಷಾತ್ಕಾರಕ್ಕೆ ಸಾಕ್ಷಿಯಾಗಲಿದೆ ಎಂದು ತಮಲೂರು ಶ್ರೀಮಠದ ಪೂಜ್ಯ ಷ.ಬ್ರ ಶಿವಾನಂದ ಶಿವಾಚಾರ್ಯರು ನುಡಿದರು.

ಗುರುವಾರ ನಗರದ ಹೊರವಲಯದಲ್ಲಿರುವ ಜಗದ್ಗುರು ಪಂಚಾಚಾರ್ಯ ಪುಣ್ಯಾಶ್ರಮದಲ್ಲಿ ತಮ್ಮ ತಪೋನುಷ್ಠಾನದ ಮಂಗಲ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ನಾವು ಪರಮಾತ್ಮನಿಗೆ ಹತ್ತಿರವಾಗಬೇಕಾದರೆ ಜಪ, ತಪ, ಪೂಜೆ ಜೊತೆಗೆ ಉದಾರ ದಾನ ಧರ್ಮ ಮಾಡಿದರೆ ಜೀವನ ಪಾವನವಾಗಲಿದೆ ಎಂದರು.

ಮನುಷ್ಯನಿಗೆ ಅನ್ನ, ನೀರು ಎಷ್ಟು ಮುಖ್ಯವೋ ಸಂತರ, ಮಠಾಧೀಶರ ವಾಣಿ ಆಲಿಸುವುದು ಅಷ್ಟೆ ಮುಖ್ಯವಾಗಿದೆ. ಆಲಿಸಿದ ವಾಣಿ ನಿಜ ಜೀವನದಲ್ಲಿ ಆಚಾರ ರೂಪದಲ್ಲಿ ಪಾಲನೆ ಮಾಡಿದಲ್ಲಿ ಪರಮಾತ್ಮನ ಕೃಪೆಗೆ ಪಾತ್ರನಾಗುವನು ಎಂದರು.

ಕೊಡುವವನು ದೇವಧೂತ, ಕಸಿದುಕೊಳ್ಳುವವನು ರಾಕ್ಷಸ. ಈ ಕೈಗೆ ಕೊಟ್ಟಿದ್ದನ್ನು ಮತ್ತೊಂದು ಕೈಗೆ ಗೊತ್ತಾಗಬಾರದು. ಕೊಟ್ಟಿದ್ದನ್ನು ಯಾವತ್ತೂ ಹೇಳಿಕೊಳ್ಳಬಾರದು. ದಾನ ಯಾವತ್ತೂ ಗುಪ್ತವಾಗಿರಬೇಕೆ ಹೊರತು ಬಹಿರಂಗಗೊಳಿಸುವುದಲ್ಲ, ಬಹಿರಂಗದ ದಾನ ಅದು ಶಿವನಿಗೆ ಅರ್ಪಣೆ ಆಗದು. ಶ್ರೇಷ್ಠ ದಾನಿಯಾಗಿ ಹೊರಹೊಮ್ಮಲು ಗುರುವಿಗೆ ಗುಲಾಮನಾಗಿ, ಸಮಾಜದ ಆಸ್ತಿಯಾಗಿ, ಭಗವಂತನಿಗೆ ನಿಸ್ವಾರ್ಥ ಭಕ್ತಿ ಸಮರ್ಪಿಸಿದರೆ ಸದ್ಗುರುವಿನ ಕೃಪಾಶೀರ್ವಾದ ಸದಾ ಇರಲಿದೆ ಎಂದರು.

ಇಂದು ಮನುಷ್ಯ ಎಷ್ಟೆ ಸಂಪಾದನೆ ಮಾಡಿದರೂ ಆತನಿಗೆ ಸಮಾಧಾನವಿಲ್ಲ, ನೆಮ್ಮದಿ ಇಲ್ಲ, ಗಳಿಸಿದರಲ್ಲಿ ಒಂದಿಷ್ಟು ಪಾಲು ಮಂದಿರ, ಮಠ ನಿರ್ಮಾಣಕ್ಕೆ ಖರ್ಚು ಮಾಡಿದರೆ ಜೀವನ ಸುಂದರವಾಗಲಿದೆ, ಸಂಪತ್ಭರಿತವಾಗಲಿದೆ, ಆಯುಷ್ಯ, ಆರೋಗ್ಯವೃದ್ಧಿಯಾಗಿ ಸುಖಿಯಾಗಿ ಬಾಳುವರು ಎಂದರು. ಎಲ್ಲ ಸೇವೆಗಳಲ್ಲಿ ಗುರುವಿನ ಸೇವೆ ಅದು ಶ್ರೇಷ್ಠ ಸೇವೆ. ಹಾಗಾಗಿ ವೇದಮೂರ್ತಿ ಷಣ್ಮುಖಯ್ಯ ಸ್ವಾಮಿಯವರು ಮೂರು ದಶಕಗಳಿಂದ ತನ್ನನ್ನು ತಾನು ತೊಡಗಿ ತನು, ಮನ ಹಾಗೂ ಧನವನ್ನು ಸಮರ್ಪಿಸಿದ್ದಾರೆ. ಅವರ ಈ ನಿಸ್ವಾರ್ಥ ಹಾಗೂ ಶ್ರೇಷ್ಠ ಕಾರ್ಯಕ್ಕೆ ಜಿಲ್ಲೆಯ ಸದ್ಭಕ್ತರು ಕೈಜೋಡಿಸಬೇಕೆಂದು ಹೇಳಿದರು

ಹೆಡಗಾಪುರ ಶ್ರೀಮಠದ ಹಿರಿಯ ಪೂಜ್ಯರಾದ ಷ.ಬ್ರ ಶಿವಲಿಂಗ ಶಿವಾಚಾರ್ಯರು ಆಶೀರ್ವಚನ ನೀಡಿ, ಮನುಷ್ಯನಿಗೆ ಅಹಂಕಾರ ಇದ್ದರೆ ಆತನ ಜೀವನ ಅಂತ್ಯವಾಗುತ್ತದೆ ಎಂಬುದಕ್ಕೆ ರಾವಣನೇ ಸಾಕ್ಷಿ. ನಾವು ಮಾಡುವ ಭಕ್ತಿ ನಿಸ್ವಾರ್ಥವಾಗಿರಬೇಕು, ಆಗ ಅದು ಪರಶಿವನಿಗೆ ತಲುಪಲು ಸಾಧ್ಯ. ಎಲ್ಲ ದಾನಗಳಲ್ಲಿ ಶ್ರೇಷ್ಠ ದಾನವೇ ಅನ್ನದಾನ. ವೇದಮೂರ್ತಿ ಷಣ್ಮುಖಯ್ಯ ಸ್ವಾಮಿಯವರು ಪುಣ್ಯಶ್ರಮದಲ್ಲಿ ದಿನದ 24 ಗಂಟೆಗಳ ಕಾಲ ಇಲ್ಲಿ ದಾಸೋಹ ಸೇವೆ ಕೈಗೊಂಡಿದ್ದು ಅವರ ಈ ಸತ್ಯ ಸಂಕಲ್ಪಕ್ಕೆ ಜಿಲ್ಲೆಯ ಸದ್ಭಕ್ತರು ಕೈಜೋಡಿಸಿ ಉದಾರದೇಣಿಗೆ ನೀಡಿ ಸದ್ಗುರುವಿನ ಕೃಪೆಗೆ ಪಾತ್ರರಾಗಬೇಕೆಂದು ಕರೆ ನೀಡಿದರು. ಜಗದ್ಗುರು ಪಂಚಾಚಾರ್ಯ ಪುಣ್ಯಶ್ರಮದ ಸಂಚಾಲಕರಾದ ವೇದಮೂರ್ತಿ ಷಣ್ಮುಖಯ್ಯ ಸ್ವಾಮಿ ನೇತೃತ್ವ ವಹಿಸಿದರು. ಕಾರ್ಯಕ್ರಮದಲ್ಲಿ ಪುಣ್ಯಶ್ರಮದ ಸದ್ಭಕ್ತರಾದ ಮಂಜುನಾಥ ಬಿರಾದಾರ, ಸಂಜೀವಕುಮಾರ ಹೈದರಾಬಾದ್, ಶ್ರೀಕಾಂತ ಪಾಟೀಲ್, ಶ್ರೀಮಂತ ಧಬಾಲೆ, ಕಾರ್ತಿಕ ಮಠಪತಿ ಹಾಗೂ ಇತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶ್ರೀ ರೇಣುಕಾಚಾರ್ಯ ಮಂದಿರ ಹಾಗೂ ಶ್ರೀ ಜಗದ್ಗುರು ಪಂಚಾಚಾರ್ಯ ಎಜುಕೇಶನ್ ಮತ್ತು ಚಾರಿಟೇಬಲ್ ಟ್ರಸ್ಟ್ ನ ಕಾರ್ಯದರ್ಶಿ ಶಿವಕುಮಾರಸ್ವಾಮಿ ಪ್ರಾಸ್ತಾವಿಕ ಮಾತನಾಡಿದರು. ಟ್ರಸ್ಟ್ ನ ಖಜಾಂಚಿ ಶ್ರೀಕಾಂತ ಸ್ವಾಮಿ ಸೋಲಪುರ ಕಾರ್ಯಕ್ರಮ ನಿರೂಪಿಸಿ ವಂದನೆ ಸಲ್ಲಿಸಿದರು.

ಶ್ರೀಮಠದ ನೂರಾರು ಸದ್ಭಕ್ತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೂ ಮುನ್ನ ಪೂಜ್ಯರು ಜಗದ್ಗುರು ರೇಣುಕಾಚಾರ್ಯರ ಮೂರ್ತಿಗೆ ಪೂಜೆ ಸಲ್ಲಿಸಿ ಆರತಿ ಬೆಳಗಿದರು.

ವೇದಮೂರ್ತಿ ನಾಗಯ್ಯ ಸ್ವಾಮಿ ಹಾಗೂ ಅವರ ಸಹೋದರಿಯರು ಗುರುವಿನ ಪಾದಪೂಜೆ ನಡೆಸಿಕೊಟ್ಟರು.

# ಸಾಂಪ್ರದಾಯಿಕ ಆಹಾರ ಸೇವನೆ ಸೂಕ್ತ : ಡಾ. ಎಚ್.ಬಿ.ಶಿವಲೀಲಾ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ಜ.9: ಸಾಂಪ್ರದಾಯಿಕ ಆಹಾರ ಸೇವನೆ ಮಾಡುವುದೆ ಸೂಕ್ತವಾಗಿದ್ದು, ಆಹಾರವೇ ಔಷಧವಾಗಬೇಕೆ ಹೊರತು ಔಷದ ಆಹಾರವಾಗಬಾರದು ಎಂದು ಬೆಂಗಳೂರಿನ ಪೋಷಣ ತಜ್ಞೆ ನಿವೃತ್ತ ಪ್ರಾಧ್ಯಾಪಕಿ ಡಾ.ಎಚ್.ಬಿ.ಶಿವಲೀಲಾ ಹೇಳಿದರು.ಅವರು ನಗರದ ಅಕ್ಕಮಹಾದೇವಿ ಮಹಿಳಾ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಬಾಗಲಕೋಟೆ ಐಕ್ಯೂ ಎಸಿ ಸಹಯೋಗದಲ್ಲಿ ಸ್ನಾತಕೋತ್ತರ ಸಸ್ಯಶಾಸ್ತ್ರ ವಿಭಾಗ ಹಾಗೂ ಗೃಹ ವಿಜ್ಞಾನ ವಿಭಾಗಗಳ ಅಡಿಯಲ್ಲಿ ಆರೋಗ್ಯಕರ ಜೀವನಕ್ಕೆ ಪೋಷಣೆ ಎಂಬ




ವಿಷಯದ ವಿಶೇಷ ಉಪನ್ಯಾಸದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ಮಾತನಾಡಿ ಅವರು, ಸ್ಥಳೀಯ ಉತ್ಪನ್ನಗಳನ್ನ ಬಳಸುವುದರಿಂದ ಆರೋಗ್ಯವನ್ನು ಸಮತೋಲನದಲ್ಲಿ ಇಡಲು ಸಹಾಯಕವಾಗುವುದು,.ಬೆಳಗಿನ ಉಪಹಾರದ ಸೇವನೆಯು ಹಣ್ಣು ತರಕಾರಿ ಸೊಪ್ಪು ಕಾಳುಗಳಿಂದ ಕೂಡಿರಲಿ ಇದರಿಂದ ಇಡೀ ದಿನ ಚೈತನ್ಯದಿಂದ ಕಾರ್ಯನಿರ್ವಹಿಸಲು ಸಾಂಪ್ರದಾಯಿಕ ಆಹಾರ ಸೇವನೆ ಮಾಡುವುದು ಸೂಕ್ತ.ಆಹಾರವೇ ಔಷಧವಾಗಬೇಕೆ ಹೊರತು ಔಷದ ಆಹಾರವಾಗಬಾರದು, ಸಿರಿಧಾನ್ಯದ ಸೇವನೆಯನ್ನು ಬೇರೆ ಬೇರೆ ರೂಪಗಳಲ್ಲಿ ಪ್ರತಿಯೊಬ್ಬರು ಸೇವನೆ ಮಾಡುವುದರಿಂದ ಹಲವಾರು ಕಾಯಿಲೆ ಗಳಿಗೆ ಕಡಿವಾಣ ಹಾಕಬಹುದು. ಅದರೊಂದಿಗೆ ಉತ್ತಮ ಜಲ ವಾಯು ಶಾಖ ಪೋಷಕಾಂಶಗಳ ಜೊತೆ-ಗೆ ಸಾವಯವ ಆಹಾರ ಸೇವಿಸುವುದರಿಂದ ನಮ್ಮ ದೇಹವನ್ನು ತುಷ್ಟಿದಾಯಕವಾಗಿಡುವುದಲ್ಲದೆ ಪರಿಸರ ಸ್ನೇಹಿ, ಆರೋಗ್ಯ ಸ್ನೇಹಿ, ದೇಶವನ್ನ ಹಸಿರಾಗಿಸುವುದರ ಜೊತೆಗೆ ಆರ್ಥಿಕ ಅಭಿವೃದ್ಧಿ ಸಾಧಿಸಲು ಸಾಧ್ಯವಾಗುವುದು ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾಯರಾದ ಎಸ್.ಜೆ. ಒಡೆಯರ ಅವರು ವಹಿಸಿದ್ದರು. ಪ್ರಾರ್ಥನೆ ಕುಮಾರಿ ವಿ.ಸಿ. ತಾಳಿಕೋಟಿ, ಆಯ್ ಕ್ಯೂಎಸಿ ಸಂಯೋಜಕರಾದ ಶ್ರೀಮತಿ ಪಿ.ಕೆ. ಚೌಗೂಲ ಸ್ವಾಗತಿಸಿದರು. ಪರಿಚಯ ಡಾ. ಎ.ಕೆ.ಮಾರಿಹಾಳ ಸಸ್ಯಶಾಸ್ತ್ರ ವಿಭಾಗದ ಮುಖ್ಯಸ್ಥರು, ಡಾ. ಅಶ್ವಿನಿಯಂಕಂಟಿ ವಂದಿಸಿದರು, ಶ್ರೀಮತಿ ವೀಣಾಶ್ರೀ ಪೊಲೀಸ್ ಪಾಟೀಲ್ ನಿರೂಪಿಸಿದರು.

# ಜಿಲ್ಲಾ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ರಚನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.9: ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಸಭಾಂಗಣದಲ್ಲಿ ಗುರುವಾರ ಕೊಪ್ಪಳ ಜಿಲ್ಲಾ ಕೃಷಿಕ ಸಮಾಜದ 2025-26 ರಿಂದ 2029-30ನೇ ಸಾಲಿನ ವರೆಗೆ 5 ವರ್ಷದ ಅವಧಿಗೆ ಚುನಾವಣೆ ನಡೆಸಲಾಗಿದ್ದು, ಜಿಲ್ಲಾ ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿ ರಚನೆಯಾಗಿದೆ. ಚುನಾವಣೆ ಅಧಿಕಾರಿಯಾಗಿ ಕೊಪ್ಪಳ ಜಂಟಿ ಕೃಷಿನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್ ಅವರು ಚುನಾವಣೆ ಪ್ರಕ್ರಿಯೆ ಕೈಗೊಂಡರು. ಈ ಚುನಾವಣೆಯಲ್ಲಿ ಜಿಲ್ಲಾ ಅಧ್ಯಕ್ಷರಾಗಿ ಕುಷ್ಟಗಿ ತಾಲ್ಲೂಕಿನ ಗುಮಗೇರ ಗ್ರಾಮದ ಶೇಖರಗೌಡ ವಿರುಪಾಕ್ಷಗೌಡ ಮಾಲಿಪಾಟೀಲ, ಜಿಲ್ಲಾ ಉಪಾಧ್ಯಕ್ಷರಾಗಿ ಕನಕಗಿರಿಯ ಸಂಗಪ್ಪ ತಂದೆ ಹಂಪಣ್ಣ, ಪ್ರಧಾನ ಕಾರ್ಯದರ್ಶಿಯಾಗಿ ಕಾರಟಗಿ ತಾಲ್ಲೂಕಿನ ಬೆನ್ನೂರು ಗ್ರಾಮದ ಎಂ.ಚಂದ್ರಶೇಖರಗೌಡ ತಂದೆ ಅಯ್ಯನಗೌಡ, ಖಜಾಂಚಿಯಾಗಿ ಗಂಗಾವತಿ ತಾಲ್ಲೂಕಿನ ಹೇರೂರು ಗ್ರಾಮದ ಅಮರೇಶಪ್ಪ ತಂದೆ ಶಿವಪ್ಪ ಗೋನಾಳ ಹಾಗೂ ರಾಜ್ಯ ಪ್ರತಿನಿಧಿಯಾಗಿ ಕುಕನೂರ ತಾಲ್ಲೂಕಿನ ತಳಕಲ್ ಗ್ರಾಮದ ಶಿವಪ್ಪ ಗೂಳರಡ್ಡಿ ಮೂಲಿಮನಿ ಇವರು ಅವಿರೋಧವಾಗಿ ಆಯ್ಕೆಯಾಗಿರುತ್ತಾರೆ ಎಂದು ಕೊಪ್ಪಳ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ ಅಧ್ಯಕ್ಷರ ಪ್ರವಾಸ

ಕಲಬುರಗಿ,ಜ.9:ಕಲಬುರಗಿ ಉತ್ತರ ಶಾಸಕರು ಹಾಗೂ ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ ಅಧ್ಯಕ್ಷರಾದ ಕನೀಜ್ ಫಾತೀಮಾ ಅವರು ಹೈದ್ರಾಬಾದ್‌ದಿಂದ ರಸ್ತೆ ಮೂಲಕ ಜನವರಿ 10 ರಂದು ಶುಕ್ರವಾರ ಮಧ್ಯಾಹ್ನ 1 ಗಂಟೆಗೆ ಕಲಬುರಗಿಗೆ ಆಗಮಿಸಿ, ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ವಾಸ್ತವ್ಯ ಮಾಡುವರು.

ಜನವರಿ 11 ರಂದು ಶನಿವಾರ ಹಾಗೂ 12 ರಂದು ಭಾನುವಾರ ಕಲಬುರಗಿಯಲ್ಲಿ ಸ್ಥಳೀಯ ಕಾರ್ಯಕ್ರಮ ಹಾಗೂ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ನಡೆಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು. ಜನವರಿ 13 ರಂದು ಸೋಮವಾರ ಬೆಳಿಗ್ಗೆ 11 ಗಂಟೆಗೆ ಸಾರ್ವಜನಿಕರ ಕುಂದುಕೊರತೆ ವಿಚಾರಣೆ ನಡೆಸಿ, ಅಂದು ಮಧ್ಯಾಹ್ನ 3 ಗಂಟೆಗೆ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು.

# ಬಡವರಿಗೆ ಶಕ್ತಿ ತುಂಬಿದ ಗ್ಯಾರಂಟಿ ಯೋಜನೆ : ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.9:ಸರಕಾರದ ಮಹಾತ್ವಾಕಾಂಕ್ಷಿ 5 ಗ್ಯಾರಂಟಿ ಯೋಜನೆಗಳು ಬಡವರಿಗೆ ಶಕ್ತಿ ತುಂಬುವ ಕೆಲಸ ಮಾಡಿವೆ ಎಂದು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್.ಪಾಟೀಲ ಹೇಳಿದರು.ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರಕಾರ ಕೆಳಹಂತದಲ್ಲಿ ಇದ್ದವರನ್ನು ಮೇಲೆತ್ತಿದಾಗ ಮಾತ್ರ ದೇಶ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ಸರಕಾರ ಬಡವರಿಗೆ ಶಕ್ತಿ ತುಂಬುವ ಉದ್ದೇಶದಿಂದ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಯೋಜನೆಗಳ ಸಮರ್ಪಕ ಅನುಷ್ಠಾನದ ಜವಾಬ್ದಾರಿ ಪ್ರಾಧಿಕಾರದ ಮೇಲೆ ಇದ್ದು, ಸರಕಾರದ ಕನಸು ನನಸು ಮಾಡುವ ಕಾರ್ಯ ಮಾಡಬೇಕಿದೆ ಎಂದರು.

ಗ್ಯಾರಂಟಿ ಯೋಜನೆಗಳ ಮೂಲಕ ಯಾರ ಮಧ್ಯಸ್ಥಿಕೆ ಇಲ್ಲದೇ ನೇರವಾಗಿ ಫಲಾನುಭವಿಗಳಿಗೆ ಮುಟ್ಟಿಸುವ ಕೆಲಸ ಸರಕಾರ ಮಾಡುತ್ತಿದೆ. ಈ ಯೋಜನೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು. ಜಿಲ್ಲೆಯಲ್ಲಿ ಈ ಐದು ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಕಾರ್ಯವಾಗಬೇಕಿದೆ. ಈ ನಿಟ್ಟಿನಲ್ಲಿ ಆಯಾ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳ ಪಾತ್ರ ಬಹಳ ಮುಖ್ಯವಾಗಿದೆ. ಪ್ರತಿ ತಿಂಗಳು ಎರಡು ಬಾರಿಯಾದರೂ ಸಭೆ ನಡೆಸಬೇಕು. ಜಿಲ್ಲಾ ಮತ್ತು ತಾಲೂಕಾ ಮಟ್ಟದ ಸಮಿತಿ ಜವಾಬ್ದಾರಿಯಿಂದ ಕೆಲಸ ಮಾಡಿದಲ್ಲಿ ಯೋಜನೆ ಶೇ.100 ರಷ್ಟು ಅನುಷ್ಠಾನಗೊಳಿಸಲು ಸಾಧ್ಯವಾಗುತ್ತದೆ. ಅಭಿವೃದ್ಧಿ ಹಾಗೂ ಆರ್ಥಿಕ ದೃಷ್ಠಿಯಿಂದ ಕರ್ನಾಟಕ ರಾಜ್ಯ ಎರಡನೇ ಸ್ಥಾನದಲ್ಲಿದೆ ಎಂದು ಅವರು



ತಿಳಿಸಿದರು.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ಪ್ರಾರಂಭದಿಂದ ಇಲ್ಲಿಯವರೆಗೆ ಒಟ್ಟು 10.34 ಲಕ್ಷ ಜನ ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣದ ಸೌಲಭ್ಯ ಪಡೆದಿದ್ದಾರೆ. ಇದರಿಂದ 321.84 ಕೋಟಿ ರೂ.ಗಳ ಆದಾಯ ಸಂಗ್ರವಾಗಿದ್ದು, ಜಿಲ್ಲೆಯಲ್ಲಿ ಪ್ರತಿದಿನ ಪ್ರಯಾಣಿಸುವ ಸಂಖ್ಯೆ ಸರಾಸರಿ 3.4 ಲಕ್ಷ ಇದೆ. ಒಟ್ಟು ಪ್ರಯಾಣಿಕರಲ್ಲಿ ಶೇ.62 ರಷ್ಟು ಮಹಿಳಾ ಪ್ರಯಾಣಿಕರು ಇದ್ದಾರೆ. ಪ್ರತಿದಿನ ಸರಾಸರಿ 1.6 ಕೋಟಿ ರೂ.ಗಳನ್ನು ಆದಾಯ ಗಳಿಸುತ್ತಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ನಿತೀಹ ಹೆಗಡೆ ಸಭೆ ತಿಳಿಸಿದಾಗ ಜಿಲ್ಲಾ ಪ್ರಾಧಿಕಾರದ ಸದಸ್ಯರು ಗ್ರಾಮೀಣ ಭಾಗದಲ್ಲಿ ಹೆಚ್ಚಿನ ಬಸ್‌ಗಳನ್ನು ಬಿಡುವ ವ್ಯವಸ್ಥೆ ಮಾಡಿದಲ್ಲಿ ವಿದ್ಯಾರ್ಥಿಗಳಿಗೆ ಹಾಗೂ ನಗರ ಪ್ರದೇಶಕ್ಕೆ ಬರುವವರಿಗೆ ಅನುಕೂಲವಾಗಲಿದೆ ಎಂದು ಪಾಟೀಲ ತಿಳಿಸಿದರು.

ಗೃಹಲಕ್ಷ್ಮೀ ಯೋಜನೆಯಡಿ 4.15 ಲಕ್ಷ ಫಲಾನುಭವಿಗಳು ನೇರವಾಗಿ ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಜಿಲ್ಲೆಯಲ್ಲಿ ಶೇ.94.81 ರಷ್ಟು ಪ್ರಗತಿ ಸಾಧಿಸಲಾಗಿದೆ. ಪ್ರತಿ ತಿಂಗಳು ಜಿಲ್ಲೆಯ ಫಲಾನುಭವಿಗಳಿಗೆ 82.45 ಕೋಟಿ ರೂ.ಗಳನ್ನು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆ ಆಗುತ್ತಿರುವುದಾಗಿ ಮಹಿಳಾ ಮತ್ತು ಮಕ್ಕಳ ಅಬಿವೃದ್ದಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ ಸಭೆಗೆ ತಿಳಿಸಿದರು.

ಗೃಹಜ್ಯೋತಿ ಯೋಜನೆಯಡಿ 419904 ಜನ ನೋಂದಣಿ ಮಾಡಿಕೊಂಡಿದ್ದು, 200 ಯುನಿಟ್‌ವರೆಗಿನ ಉಚಿತ ಸೌಲಭ್ಯಗಳನ್ನು ಪಡೆದುಕೊಳ್ಳುತ್ತಿದ್ದಾರೆ. ಜಿಲ್ಲೆಯಲ್ಲಿ ಶೇ.98.13 ರಷ್ಟು ಯೋಜನೆ ಅನುಷ್ಠಾನವಾಗಿದೆ ಎಂದು ಬಾಗಲಕೋಟೆ ಹೆಸ್ಕಾಂ ಅಧಿಕಾರಿಗಳು ಸಭೆಗೆ ತಿಳಿಸಿದರು.

ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿಯಾಗಿ ನೀಡುತ್ತಿರುವ 5 ಕೆಜಿ ಅಕ್ಕಿ ಬದಲಿಗೆ ಪ್ರತಿ ಕೆಜಿಗೆ 34 ರಂತೆ ಒಟ್ಟು 170 ರಂತೆ ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಜಮೆ ಮಾಡಲಾಗುತ್ತಿದ್ದು, ಜುಲೈ-2023 ರಿಂದ ಇಲ್ಲಿಯವರೆಗೆ 374756 ಪಡಿತರ ಚೀಟಿಗಳ 13,14,116 ಫಲಾನುಭವಿಗಳಿಗೆ ಒಟ್ಟು 229.73 ಕೋಟಿ ರೂ.ಗಳ ಜಮೆ ಮಾಡಿ, ಶೇ.96.49 ರಷ್ಟು ಪ್ರಗತಿ ಸಾಧಿಸಿದೆ ಎಂದು ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಸಭೆಗೆ ತಿಳಿಸಿದರು. ಯುವನಿಧಿ ಯೋಜನೆಯಡಿ ಪದವೀಧರರು 7637, ಡಿಪ್ಲೋಮಾ ಪದವೀಧದರು 92 ಸೇರಿ ಒಟ್ಟು 7729 ಫಲಾನುಭವಿಗಳು ಲಾಭ ಪಡೆಯುತ್ತಿದ್ದಾರೆಂದು ಜಿಲ್ಲಾ ಕೌಶಲ್ಯ ಅಧಿಕಾರಿ ಹಿರೇಮಠ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಡಾ.ಎಸ್.ಎಚ್.ತೆಕ್ಕನ್ನವರ, ಉಪಾಧ್ಯಕ್ಷರಾದ ಶಂಕರಪ್ಪ ನೇಗಲಿ, ಗುರುಪ್ರಸಾದಪ್ಪ ಜವಳಿ, ರಫೀಕ್ ಬೈರಕದಾರ್, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿ.ಪಂ ಸಿಇಓ ಶಶಿಧರ ಕು-ರೇರ, ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ ಸೇರಿದಂತೆ ಪ್ರಾಧಿಕಾರದ ಸದಸ್ಯರು, ಯೋಜನಾ ಅನುಷ್ಠಾನದ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಕೃ. ಉ. ಮಾ. ಸಮಿತಿಗೆ ನಾಮನಿರ್ದೇಶಿತ ಸದಸ್ಯರ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು.ಜ.9.–ತಾಲೂಕ ಕೃಷಿಉತ್ಪನ್ನಮಾರುಕಟ್ಟೆಸಮಿತಿಗೆ ಸರಕಾರದಿಂದನಾಮ ನಿರ್ದೇಶಿತ ಅಧ್ಯಕ್ಷ ಹಾಗೂ ಸದಸ್ಯರನ್ನು ನೇಮಕ ಮಾಡಲಾಗಿದೆ.

ಅಧ್ಯಕ್ಷರನ್ನಾಗಿ ಕೃಷಿಕ ಕ್ಷೇತ್ರದಿಂದ ಅಮರೇಶ್ ದೊಡ್ಡಪ್ಪ ಹಿರೇಹೆಸರೂರು, ಸದಸ್ಯರನ್ನಾಗಿ ವರ್ತಕರ ಕ್ಷೇತ್ರದಿಂದ ಎಂ ಶ್ರೀನಿವಾಸ್ ಹನುಮಂತಯ್ಯ ಕಂಪ್ಲಿ ಸಾ. ಮುದಗಲ್, ಕೃಷಿಕ ಕ್ಷೇತ್ರದ ಹಿಂದುಳಿದ ಪ್ರವರ್ಗ (ಅ ) ದಿಂದ ಆದಪ್ಪ ಕೊಳ್ಳಪ್ಪ ಕುರಿ ಬ್ಯಾಲಿಹಾಳ, ಕೃಷಿಕ ಕ್ಷೇತ್ರ ಸಾಮಾನ್ಯದಿಂದ ಮಹದೇವಯ್ಯ ವೀರಯ್ಯಗೌಡೂರ, ಹಿಂದುಳಿದ ಪ್ರವರ್ಗ ಏ ದಿಂದ ಸೈಯದ್ ವಾಹಿದ್ ಖಾದ್ರಿಆನೆಹೊಸೂರು, ಕೃಷಿಕ ಸಾಮಾನ್ಯ ಕ್ಷೇತ್ರದಿಂದ ರುದ್ರಗೌಡ ಅಮರೇಗೌಡ ಮಾಲಿಪಾಟೀಲ್ ಮಾವಿನಬಾವಿ, ಇವರನ್ನು ಸಹಕಾರ ಇಲಾಖೆಯ ಅಧೀನ ಕಾರ್ಯದರ್ಶಿ ಜಿ ಎನ್ ಧನಲಕ್ಷ್ಮಿ ಅವರು ಸರಕಾರದಿಂದ ನೇಮಕಾತಿ ಮಾಡಿ ಆದೇಶ ಹೊರಡಿಸಿದ್ದಾರೆ.

ಸರ್ಕಾರದಿಂದ ನೇಮಕಾತಿ ಹೊರಡಿಸಿದ ಆದೇಶದ ಪ್ರತಿಯನ್ನು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಗೋವಿಂದ ನಾಯಕ ಅವರು ಲಿಂಗಸಗೂರು ಕೃಷಿ ಉತ್ಪನ್ನಮಾರುಕಟ್ಟೆಸಮಿತಿಯ ಕಾರ್ಯದರ್ಶಿಯಾದ ಶ್ರೀಮತಿ ಸಾವಿತ್ರಮ್ಮ ಅವರಿಗೆ ಸಲ್ಲಿಸಿ ಮಾತನಾಡಿ ಮುಂಬರುವ ದಿನಗಳಲ್ಲಿ ಸರಕಾರದಿಂದ ನಾಮನಿರ್ದೇಶನಗೊಂಡ ಸದಸ್ಯರು ಅಧಿಕಾರಿಗಳೊಂದಿಗೆ ಹಾಗೂ ವರ್ತಕರೊಂದಿಗೆ ಅನ್ಯೋನ್ಯವಾಗಿ ನಡೆದುಕೊಂಡು ರೈತರ ಹಿತದೃಷ್ಟಿ ಕಾಪಾಡುತ್ತಾ ರೈತರ ಪರ ಕಾಳಜಿ ವಹಿಸಿ ರೈತರಿಗೆ ಯಾವುದೇ ರೀತಿಯಿಂದ ಅನ್ಯಾಯವಾಗದಂತೆ ಮತ್ತು ವರ್ತಕರಿಗೂ ಸಹ ಯಾವುದೇ ರೀತಿಯ ತೊಂದರೆ ಆಗದಂತೆ ನೋಡಿಕೊಳ್ಳುವ ಉದ್ದೇಶದಿಂದ ಕೆಪಿಸಿಸಿ ಉಪಾಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಡಿಎಸ್ ಹೂಲಿಗೇರಿ ಅವರು ತಮ್ಮನ್ನು ಗುರುತಿಸಿ ನಮ್ಮ ಸರಕಾರದ ಸಚಿವರ ಗಮನಕ್ಕೆ ತಂದು ರೈತರ ಪರ ಸೇವೆ ಮಾಡುವ ಅವಕಾಶ ತಮಗೆ ಒದಗಿಸಿ ಕೊಟ್ಟಿದ್ದು ಯಾವುದೇ ರೀತಿಯಿಂದ ಯಾರಿಗೂ ಸಹ ತೊಂದರೆಯಾಗದಂತೆ ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ನೇಮಕಾತಿಗೊಂಡ ಸದಸ್ಯರು ಅಧ್ಯಕ್ಷರು ಕಾರ್ಯನಿರ್ವಹಿಸುವಂತೆ ಅವರು ನೂತನವಾಗಿ ನೇಮಕಗೊಂಡ ಸದಸ್ಯ ಅಧ್ಯಕ್ಷರಿಗೆ ಕಿವಿ ಮಾತು ಹೇಳಿದರು. ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ಮೊಹಮ್ಮದ್ ರಫಿ, ಮೌನುದ್ದೀನ್, ಗಜ್ಜನಗೌಡ ಪೊಲೀಸ್ ಪಾಟೀಲ್ ನಂದಿಹಾಳ ಸೇರಿದಂತೆ ಇತರರಿದ್ದರು.

## ಮಿತಿಮೀರಿದ ಕುರಿ ಕಳ್ಳರ ಉಪಟಳ ಸಂಕಷ್ಟದಲ್ಲಿ ಕುರಿಗಾಹಿ ಕುಟುಂಬಗಳು: ರವಿಕುಮಾರ ಕಡೆಚೂರ್



ಮಲ್ಲಮ್ಮ ನುಡಿ ವಾರ್ತೆ

ಸೈದಾಪೂರ: ಜನವರಿ, 09 ಯಾದಗಿರಿ ತಾಲೂಕಿನ ಸೈದಾಪೂರ ಹೋಬಳಿಯಾದ್ಯಂತ ಕುರಿ ಕಳ್ಳರ ಉಪಟಳ ಪ್ರತಿದಿನ ಹೆಚ್ಚಾಗುತ್ತಿದ್ದು, ಕುರಿ ಕಳ್ಳತನ ಮಾಮೂಲಿಯಾಗಿದೆ. ಪೊಲೀಸರಿಂದ ಕಳ್ಳತನ ನಿಯಂತ್ರಿಸಲು ಸಾಧ್ಯವಾಗದೇ ಇರುವುದರಿಂದ ಕುರಿಗಾಯಿ ಕುಟುಂಬಗಳು ತುಂಬಾ ಸಂಕಷ್ಟದಲ್ಲಿ ನಲುಗುತ್ತಿವೆ ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಸೈದಾಪೂರ ವಲಯ ಅಧ್ಯಕ್ಷ ರವಿಕುಮಾರ ಕಡೆಚೂರ ಅವರು ನೋವು ತೋಡಿಕೊಂಡಿದ್ದಾರೆ.

ಸೈದಾಪೂರ ವ್ಯಾಪ್ತಿಯಲ್ಲಿ ಬರುವ ಕುರಿಗಾಯಿ ಕುಟುಂಬದವರು ತಮ್ಮ ಜೀವನೋಪಯಕ್ಕಾಗಿ ಸಾಕಿದ್ದ ಕುರಿಗಳನ್ನು ಕಳ್ಳರು ಹೊತ್ತೊಯ್ಯುದ್ತಿರುವುದರಿಂದ ಅಸಹಾಯಕರಾಗಿರುವ ಅವರು ನ್ಯಾಯಕ್ಕಾಗಿ ಕರ್ನಾಟಕ ಪ್ರದೇಶ ಕುರುಬರ ಸಂಘದ ಸೈದಾಪೂರ ವಲಯ ಸಂಘದಿಂದ ಸೈದಾಪೂರ ಪೊಲೀಸ್ ಠಾಣೆ ಪಿಐ ಅವರಿಗೆ ಮನವಿ ಸಲ್ಲಿಸಿ ಅವರು ಮಾಡಿ ಮಾತನಾಡಿದರು.

ಈ ಭಾಗದಲ್ಲಿ ಕುರಿ ಕಳ್ಳತನ ನಡೆದರೂ ಪ್ರಕರಣ ಬೇಧಿಸುವಲ್ಲಿ ಪೊಲೀಸ್ ಇಲಾಖೆ ಸಂಪೂರ್ಣ ವಿಫಲವಾಗಿದೆ. ವಿವಿಧ ಕಡೆಗಳಲ್ಲಿ ಕುರಿ ಕಳ್ಳತನ ನಡೆದಾಗ ಈ ಕುರಿತು ಪೋಲಿಸರಿಗೆ ಲಿಖಿತ, ಮೌಖಿಕವಾಗಿ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಜಿಲ್ಲಾಡಳಿತವು ಕುರಿ ಕಳ್ಳತನ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ಕಳ್ಳರನ್ನು ಹಿಡಿದು ಕಠಿಣ ಕ್ರಮತೆಗೆದುಕೆಣಟಿಜಜಜಿಟಿಜಜಳ್ಳಬೇಕು ಮತ್ತು *ಆದ್ಯತೆ ಮೇರೆಗೆ ಕುರಿಗಾಹಿಗರಿಗೆ ಮತ್ತು ಅವರ ಕುರಿಗಳ ರಕ್ಷಣೆಗಾಗಿ ಬಂದೂಕು ಲೈಸೆನ್ಸ್ ಒದಗಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.*

ಸಮಾಜದ ಮುಖಂಡರಾದ ಶಿವಕುಮಾರ ಮುನಗಲ್, ಸಿದ್ದು ಪೂಜಾರಿ ಬದ್ದೆಪಲ್ಲಿ, ವಿಜಯಕುಮಾರ್ ಕಂದಳ್ಳಿ, ಕುರಿಗಾಹಿಗಳಾದ ದುಪ್ಪಲ್ಲಿ ಗ್ರಾಮದ ಮಹಾದೇವ, ರಾಜಪ್ಪ, ಮಾಳಪ್ಪ, ಮಲ್ಲಪ್ಪ, ಕಡೆಚೂರಿನ ಮಲ್ಲಪ್ಪ, ಮಾರೆಪ್ಪ, ರೆಡ್ಡಿ, ಶಂಕ್ರಪ್ಪ, ಮಶೆಪ್ಪ, ಗೋವಿಂದ, ಮಲ್ಲಿಕಾರ್ಜುನ, ಯಲ್ಲಪ್ಪ ಸೈದಾಪೂರ, ಚಂದಪ್ಪ ಬಾಲಚೇಡ, ಶಿವರಾಜಪ್ಪ ಬಾಲಚೇಡ ಬೀರಪ್ಪ, ಭೀಮಪ್ಪ, ಸೇರಿದಂತೆ

## ರಾಜ್ಯ ಸಚಿವರಾದ ಡಾ.ಜಿತೇಂದ್ರ ಸಿಂಗ್ ಅವರು ಇಸ್ರೋದ ಹಿರಿಯ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ: ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ; ಭೂ ವಿಜ್ಞಾನ (ಸ್ವತಂತ್ರ ಉಸ್ತುವಾರಿ), ಬಾಹ್ಯಾಕಾಶ ಇಲಾಖೆಯ ರಾಜ್ಯ ಸಚಿವರಾದ ಡಾ.ಜಿತೇಂದ್ರ ಸಿಂಗ್ ಅವರು ಇಂದು ಬೆಂಗಳೂರಿನಲ್ಲಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೋ) ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಗೌರವಾನ್ವಿತ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಈ ಪರಿಶೀಲನಾ ಸಭೆಯಲ್ಲಿ ಇಸ್ರೋದ ನಿರ್ಗಮಿತ ಅಧ್ಯಕ್ಷ ಡಾ.ಎಸ್.ಸೋಮನಾಥ್, ನೂತನ ಅಧ್ಯಕ್ಷ ಡಾ.ವಿ.ನಾರಾಯಣನ್, ಇಸ್ರೋ ಮಿಷನ್ ನಿರ್ದೇಶಕರು ಉಪಸ್ಥಿತರಿದ್ದರು.

ಜಿತೇಂದ್ರ ಸಿಂಗ್ ಅವರಿಗೆ ಹಿರಿಯ ಅಧಿಕಾರಿಗಳು ಇಸ್ರೋದ ಮುಂಬರುವ ಪ್ರಮುಖ ಬಾಹ್ಯಾಕಾಶ ಕಾರ್ಯಾಚರಣೆಗಳ ಕುರಿತು ಮಾಹಿತಿ ನೀಡಿದರು. ಇಸ್ರೋ 2025 ರ ಮೊದಲಾರ್ಧದಲ್ಲಿ ಎರಡು ಜಿ ಎಸ್ ಎಲ್ ವಿ ಮಿಷನ್, ಜಾಗತಿಕ ಗ್ರಾಹಕರಿಗಾಗಿ ಎಲ್ ವಿ ಎಂ 3 ನ ಒಂದು ವಾಣಿಜ್ಯ ಮಿಷನ್ ಸೇರಿದಂತೆ ಪ್ರಮುಖ ಬಾಹ್ಯಾಕಾಶ ಮಿಷನ್ ಗಳನ್ನು ಹೊಂದಿದೆ. ಇದರೊಂದಿಗೆ ಗಗನಯಾನ್ ನ ಮೊದಲ ಮಾನವರಹಿತ ಆರ್ಬಿಟಲ್ ಮಿಷನ್ ಸಹ ಇರುತ್ತದೆ.

ವರ್ಷದ ಮೊದಲ ಮಿಷನ್, GSLಗಿ–F15/NVS–02 ಎನ್ ವಿ ಎಸ್ ಸರಣಿಯ ಎರಡನೇ ನ್ಯಾವಿಗೇಷನ್ ಉಪಗ್ರಹ ಓಗಿಖ–02 ಅನ್ನು ಉಡಾವಣೆ ಮಾಡುತ್ತದೆ. ಈ ಉಪಗ್ರಹವು ಸ್ಥಾನೀಕರಣ, ನ್ಯಾವಿಗೇಷನ್ ಮತ್ತು ಸಮಯ ಸೇವೆಗಳನ್ನು ಒದಗಿಸುವಲ್ಲಿ NavIC ಸಮೂಹವನ್ನು ಹೆಚ್ಚಿಸುತ್ತದೆ. ದೇಶೀಯವಾಗಿ ಅಭಿವೃದ್ಧಿಪಡಿಸಿದ ಪರಮಾಣು ಗಡಿಯಾರದ ಸಂಯೋಜನೆಯ ಹೊರತಾಗಿ, ಎನ್ ವಿ ಎಸ್ ಸರಣಿಯು ಎಲ್1 ಬ್ಯಾಂಡ್ ನಲ್ಲಿ ಸಂಕೇತಗಳನ್ನು ಸಹ ಒಳಗೊಂಡಿದೆ. ಶ್ರೀಹರಿಕೋಟಾದ ಉಡಾವಣಾ ಸಂಕೀರ್ಣದಲ್ಲಿ ಉಡಾವಣಾ ವಾಹನದ ಜೋಡಣೆಯು ಮುಂದುವರಿದ ಹಂತದಲ್ಲಿದೆ ಮತ್ತು ಉಡಾವಣೆಯನ್ನು ಜನವರಿ 2025 ರ ಕೊನೆಯ ವಾರದಲ್ಲಿ ನಿಗದಿಪಡಿಸಲಾಗಿದೆ.

ಇಸ್ರೋ–ನಾಸಾ ಜಂಟಿ ಕಾರ್ಯಾಚರಣೆಯ ಉಡಾವಣೆ, NISAR (ನಾಸಾ–ಇಸ್ರೋ ಸಿಂಥೆಟಿಕ್ ಅಪರ್ಚರ್ ರಾಡಾರ್) ಅನ್ನು ಜಿ ಎಸ್ ಎಲ್ ವಿ ಎಫ್ 16 ಮಿಷನ್ ನಲ್ಲಿ ಯೋಜಿಸಲಾಗಿದೆ. NISAR ಒಂದು ಸುಧಾರಿತ ಮೈಕ್ರೋವೇವ್ ರಿಮೋಟ್ ಸೆನ್ಸಿಂಗ್ ಉಪಗ್ರಹವಾಗಿದ್ದು, ಡ್ಯುಯಲ್ ಬ್ಯಾಂಡ್ ಸಿಂಥೆ–ಟಿಕ್ ಅಪರ್ಚರ್ ರೇಡಾರ್ ಜೊತೆಗೆ ಸ್ವೀಪ್–ಎಸ್ ಎ ಆರ್ ತಂತ್ರಜ್ಞಾನವನ್ನು ಹೊಂದಿದೆ. ಈ ಉಪಗ್ರಹವು 12 ದಿನಗಳಲ್ಲಿ ಇಡೀ ಜಗತ್ತನ್ನು ನಕ್ಷೆ ಮಾಡುತ್ತದೆ. NISAR ಸುಧಾರಿತ ರಾಡಾರ್ ಚಿತ್ರಣವನ್ನು ಹೊಂದಿದ್ದು, ಇದು ಕೃಷಿಗೆ ಸಂಬಂಧಿಸಿದ ಭೂಮಿಯ ಚಿತ್ರಣಗಳು, ಭೂಕಂಪಗಳು, ಭೂಕುಸಿತಗಳು ಇತ್ಯಾದಿಗಳಿಗೆ ಸಂಬಂಧಿಸಿದಂತೆ ವಿಶಿಷ್ಟ ಡೇಟಾವನ್ನು ಒದಗಿಸುತ್ತದೆ, ಶ್ರೀಹರಿಕೋಟಾದಲ್ಲಿ ಜಿ ಎಸ್ ಎಲ್ ವಿ ವಾಹನಗಳ ವ್ಯವಸ್ಥೆಗಳು ಅಂತಿಮ ಜೋಡಣೆಗೆ ಸಿದ್ಧವಾಗುತ್ತಿವೆ ಮತ್ತು NISAR ಉಪಗ್ರಹವು ಅಂತಿಮ ಹಂತದ ಪರೀಕ್ಷೆಗೆ ಒಳಗಾಗುತ್ತಿದೆ.

ಎಲ್ ವಿ ಎಂ 3–ಎಂ5 ಉಡಾವಣೆಯು ನ್ಯೂ ಸ್ಪೇಸ್ ಇಂಡಿಯಾ ಲಿಮಿಟೆಡ್ (NSIL) ಮತ್ತು ಅಮೆರಿಕಾದ ಎಸ್ ಎಸ್ ಟಿ ಸ್ಪೇಸ್ ಮೊಬೈಲ್ ಇಂಕ್ ನಡುವಿನ ವಾಣಿಜ್ಯ ಒಪ್ಪಂದದ ಅಡಿಯಲ್ಲಿ ಬ್ಲೂಬರ್ಡ್ ಬ್ಲಾಕ್–2 ಉಪಗ್ರಹಗಳನ್ನು ಉಡಾವಣೆ ಮಾಡಲು ಮೀಸಲಾದ ವಾಣಿಜ್ಯ ಮಿಷನ್ ಆಗಿದೆ. ಎಲ್ ವಿ ಎಂ 3 ವಾಹನ ವ್ಯವಸ್ಥೆಗಳು ಶ್ರೀಹರಿಕೋಟಾದಲ್ಲಿ ಲಭ್ಯವಿವೆ ಮತ್ತು ಮಾರ್ಚ್ 2025 ರಲ್ಲಿ ಉದ್ದೇಶಿತ ಉಡಾವಣೆಗಾಗಿ ವಾಹನ ಜೋಡಣೆಯನ್ನು ಪ್ರಾರಂಭಿಸಲಾಗಿದೆ.

ಈ ವರ್ಷವು ಗಗನಯಾನ್ ಕಾರ್ಯಕ್ರಮದ ಅಡಿಯಲ್ಲಿ ಮೊದಲ ಮಾನವರಹಿತ ಆರ್ಬಿಟ್ ಮಿಷನ್ ಗೆ ಸಾಕ್ಷಿಯಾಗಲಿದೆ. ಇದರಲ್ಲಿ ಹ್ಯೂಮನ್–ರೇಟೆಡ್ ಎಲ್ ವಿ ಎಂ 3 ವಾಹನವು (ಊಖಗಿಒ3) ಕಕ್ಷೆಯ ಮಾಡ್ಯೂಲ್ ಅನ್ನು ಭೂಮಿಯ ಕಕ್ಷೆಗೆ ಇಳಿಸಲು ಮಾನವ ಬಾಹ್ಯಾಕಾಶ ಹಾರಾಟದ ಕಾರ್ಯಾಚರಣೆಯನ್ನು ಮೌಲ್ಯೀಕರಿಸುತ್ತದೆ. ಕ್ರ್ಯೂಮಾಡ್ಯೂಲ್ ಆರ್ಬಿಟಲ್ ಮಾಡ್ಯೂಲ್ ನಿಂದ ಬೇರ್ಪಡುತ್ತದೆ, ಭೂಮಿಯ ವಾತಾವರಣವನ್ನು ಮರು–ಪ್ರವೇಶಿಸುತ್ತದೆ. ನಿಯಂತ್ರಿತ ಅವರೋಹಣದೊಂದಿಗೆ ಸಮುದ್ರದಲ್ಲಿ ನಿಗದಿಪಡಿಸಿದ ಸ್ಥಳದಲ್ಲಿ ಇಳಿಯುತ್ತದೆ. ನಂತರ ಅದನ್ನು ಅಲ್ಲಿಂದ ತೆಗೆದುಕೊಳ್ಳಲಾಗುತ್ತದೆ. ಈ ಕಾರ್ಯಾಚರಣೆಗಾಗಿ, ಉಡಾವಣಾ ವಾಹನ ಜೋಡಣೆಯನ್ನು ಶ್ರೀಹರಿಕೋಟಾದಲ್ಲಿ ಪ್ರಾರಂಭಿಸಲಾಗಿದೆ ಮತ್ತು ಆರ್ಬಿಟಲ್ ಮಾಡ್ಯೂಲ್ ಅಂತಿಮ ಹಂತದ ಸಿದ್ಧತೆಯಲ್ಲಿದೆ.

## 7 ಜನ ಕಲಾವಿದರಿಗೆ ಕಲ್ಯಾಣ ಕರ್ನಾಟಕ ಕಲಾರತ್ನ ಪ್ರಶಸ್ತಿ
















ಮಲ್ಲಮ್ಮ ನುಡಿ ವಾರ್ತೆ

ಬೀದರ್ ಜ. 09– ಕಲ್ಯಾಣ ಕರ್ನಾಟಕ ಕಲಾವಿದರ ಒಕ್ಕೂಟದ ದ್ವಿತೀಯ ವರ್ಷದ ವಾರ್ಷಿಕೋತ್ಸವ ಸಂಭ್ರಮದ ಅಂಗವಾಗಿ ಜನವರಿ 11 ಮತ್ತು 12 ರಂದು ಬೀದರ ನಗರದ ಪರಮ ಪೂಜ್ಯ ಚನ್ನಬಸವಪಟ್ಟದೇವರ ಜಿಲ್ಲಾ ರಂಗಮಂದಿರದಲ್ಲಿ ಏರ್ಪಡಿಸಿರುವ ಕಲ್ಯಾಣ ಕರ್ನಾಟಕ ವಿಭಾಗ ಮಟ್ಟದ ತತ್ವಪದಕಾರರ ಸಮಾವೇಶ ಹಾಗೂ ಭಜನಾ ಸ್ಪರ್ದೇ ಕಾರ್ಯಕ್ರಮದಲ್ಲಿ 7 ಜನ ಕಲಾವಿದರುಗಳಿಗೆ ಕಲ್ಯಾಣ ಕರ್ನಾಟಕ ಕಲಾರತ್ನ ಪ್ರಶಸ್ತಿ ನೀಡಲಾಗುತ್ತಿದೆ.

ಕಲಾರತ್ನ ಪ್ರಶಸ್ತಿ ಪುರಸ್ಕೃತರಾದ ವಿಜಯನಗರದ ಸಂಗೀತ ನಿರ್ದೇಶಕರು ಮತ್ತು ರಂಗಭೂಮಿ ಕಲಾವಿದ ಎ.ತಿಂದಪ್ಪ, ಬಳ್ಳಾರಿಯ ರಂಗಭೂಮಿ ಕಲಾವಿದ ಅಂಬರೀಷ ಹಚ್ಚೋಳ್ಳಿ, ಕೊಪ್ಪಳದ ದೇವೆಂದ್ರ ಗೌಡ ಎಸ್.ಪೂಜಾರ್, ಕಲಬುರಗಿಯ ಜಾನಪದ ಕಲಾವಿದೆ ಶ್ರೀಮತಿ ಮಾಹಾದೇವಿ ಹೊಸಮನಿ, ಬೀದರಿನ ಕಲಾವಿದ ನವಲಿಂಗ ಪಾಟೀಲ್, ಯಾದಗೀರಿಯ ಡೋಳ್ಳು ಕುಣಿತ ಕಲಾವಿದ ಪರಮಣ್ಣ ಹೆಬ್ಬಾಳ್, ರಾಯಚೂರಿನ ತತ್ವಪದ ಜಾನಪದ ಬಯಲಾಟ ಹಿರಿಯ ಕಲಾವಿದ ರಂಗಪ್ಪ ಮಾಸ್ಟರ ತಡಕಲ್ ಇವರುಗಳನ್ನು ಕಲ್ಯಾಣ ಕರ್ನಾಟಕ ಕಲಾರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಕಲ್ಯಾಣ ಕರ್ನಾಟಕ ಕಲಾವಿದರ ಒಕ್ಕೂಟದ ಸಂಸ್ಥಾಪಕ ಅಧ್ಯಕ್ಷರಾದ ವಿಜಯಕುಮಾರ' ಸೋನಾರೆ, ಪ್ರ–ಕಾರ್ಯದರ್ಶಿ ಪ್ರಕಾಶ ಅಂಗಡಿ, ಕಾರ್ಯಕ್ರಮದ ಸ್ವಾಗತ ಸಮಿತಿ ಅಧ್ಯಕ್ಷರಾದ ಬಸವರಾಜ ಧನ್ನೂರ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳ ವಿಕಾಸಕ್ಕೆ ಕ್ರೀಡೆ ಸಹಕಾರಿ– ಗುರುಬಸವ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಪ್ರಾಥಮಿಕ ಶಿಕ್ಷಣ ಪಡೆಯುತ್ತಿರುವ ಮಕ್ಕಳ ಮಾನಸಿಕ ಮತ್ತು ದೈಹಿಕ ಬೆಳವಣಿಗೆಗೆ ಕ್ರೀಡಾಕೂಟಗಳು ಸಹಕಾರಿಯಾಗಿವೆ. ಕಲಿಕೆಯ ಹಂತದಲ್ಲಿ ಮಕ್ಕಳ ವ್ಯಕ್ತಿತ್ವ ವಿಕಾಸಗೊಳಿಸಲು ಪಾಠದಷ್ಟೇ ಕ್ರೀಡೆಯ ಅಗತ್ಯವಿದೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲ ಅನುಭವ ಮಂಟಪದಲ್ಲಿ ಬುಧವಾರ ಆಯೋಜಿಸಿದ್ದ ವಾರ್ಷಿಕ ಕ್ರೀಡಾ–ಕೂಟ ವಿಜೇತರ ಪ್ರಶಸ್ತಿ ಪತ್ರ ವಿತರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಶಿಕ್ಷಣ ಮಕ್ಕಳ ಭವಿಷ್ಯವನ್ನು ರೂಪಿಸುತ್ತದೆ. ಕ್ರೀಡೆಗಳು ದೈಹಿಕ, ಶಾರೀರಿಕವಾಗಿ ಬೆಳವಣಿಗೆ ಸಾಧಿಸಲು ಸಹಕಾರಿಯುತ್ತದೆ. ಹಾಗಾಗಿ ವಿದ್ಯಾರ್ಥಿಗಳು ಓದಿನೊಂದಿಗೆ ಕ್ರೀಡೆಯಲ್ಲಿ ಭಾಗವಹಿಸಬೇಕು. ಸೋಲಿಗೆ ಕುಗ್ಗದೆ, ಗೆಲುವಿಗೆ ಹಿಗ್ಗದೆ ಕ್ರೀಡಾ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು. ಮುಂದಿನ ದಿನಗಳಲ್ಲಿ ಜಿಲ್ಲಾ, ವಿಭಾಗ, ರಾಜ್ಯ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಲು ವಿದ್ಯಾರ್ಥಿಗಳು ಈಗಿನಿಂದಲೇ ಅಭ್ಯಾಸ ನಡೆಸಬೇಕು ಎಂದು ಕಿವಿಮಾತು ಹೇಳಿದರು.

> ಕ್ರೀಡೆಯಲ್ಲಿ ಮಕ್ಕಳು ಭಾಗವಹಿಸುವುದರಿಂದ ಮನಸ್ಸು ಮತ್ತು ದೇಹ ಶುದ್ಧವಾಗಿರುತ್ತದೆ. ಶರೀರ ಶುದ್ಧವಿದ್ದರೆ ಸಮಾಜಕ್ಕೆ ಏನಾದರೂ ಕೊಡುಗೆ ನೀಡಲು ಸಾಧ್ಯವಾಗುತ್ತದೆ. ಮಕ್ಕಳು ದಿನಾಲು ಮೊಬೈಲ್ ಆಟ ಕಡಿಮೆ ಮಾಡಿ ಕ್ರೀಡೆಗಳಲ್ಲಿ ಹೆಚ್ಚಿಗೆ ಭಾಗವಹಿಸಬೇಕು.
>
> **–ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

ಶಿವಬಸವ ಸ್ವಾಮೀಜಿ ನೇತೃತ್ವ ವಹಿಸಿದರು. ಈ ಸಂದರ್ಭದಲ್ಲಿ ಡಾ.ಚನ್ನಬಸವ ಧನರಾಜ ಬಂಬುಳಗೆ, ಪ್ರಾಥಮಿಕ ಶಾಲೆಯ ಮುಖ್ಯಗುರು ಮಹೇಶ ಕುಲಕರ್ಣಿ, ಸುಜಾತಾ ಸೇರಿದಂತೆ ಹಲವರು ಇದ್ದರು. ಶ್ರೀದೇವಿ ಕುಲಕರ್ಣಿ ನಿರೂಪಿಸಿದರು. ದೈಹಿಕ ನಿರ್ದೇಶಕ ಅನಿಲಕುಮಾರ ಪಾಟೀಲ್ ವಂದಿಸಿದರು.

## ಬೋರಬಂಡ ಲಕ್ಷ್ಮಿ ತಿಮ್ಮಪ್ಪ ದೇವಸ್ಥಾನದಲ್ಲಿ ವೈಭವದ ವೈಕುಂಠ ಏಕಾದಶಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್: ವೈಭವಯುತವಾಗಿ ವೈಕುಂಠ ಏಕಾದಶಿ ಹಿನ್ನೆಲೆ ಬೋರಬಂಡ ಲಕ್ಷ್ಮಿ ತಿಮ್ಮಪ್ಪ ದೇವಸ್ಥಾನದಲ್ಲಿ ಆಯೋಜಿಸಲಾಗಿದೆ ಎಂದು ದೇವಸ್ಥಾನ ವ್ಯವಸ್ಥಾಪಕ ನರೇಂದ್ರ ರಾಠೋಡ ಹೇಳಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದುಗಳಿಗೆ ಏಕಾದಶಿ ಪ್ರವಿತ್ರ ದಿನವಾಗಿದ್ದು, ಇದರ ಮಹತ್ವವನ್ನು ಜನರಿಗೆ ಸಾರುವ ಉದ್ದೇಶದಿಂದ ಹಲವು ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದರು.

ದೇವಸ್ಥಾನದಲ್ಲಿ ವೈಕುಂಠ ಏಕಾದಶಿ ನಿಮಿತ್ತ ವೈಕುಂಠದ್ವಾರವನ್ನು ಯಾದಗಿರಿ ಅಪಾರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

ಜ.10ರಂದು ಬೆಳಿಗ್ಗೆ 5;30 ಸುಪ್ರಭಾತ ಸೇವೆ ನಂತರ 9ಗಂ–ಟೆಗೆ ವೈಕುಂಠದ್ವಾರ ಉದ್ಘಾಟನೆ. ಸಂಜೆ 6ಗಂಟೆಯಿಂದ ವಿಷ್ಣು ಸಹಸ್ರನಾಮ ಪಾರಾಯಣ, ಶ್ರೀ ಲಕ್ಷ್ಮೀ ತಿಮ್ಮಪ್ಪ ದೇವರಿಗೆ ಪಲ್ಲಕಿ ಸೇವೆ ಬಳಿಕ ಮಹಾಮಂಗಳ ಆರತಿ ನೆರವೇರಲಿದೆ ಎಂದು ವಿವರಿಸಿದರು. ಹಿಂದುಗಳ ಪವಿತ್ರ ದಿನವಾದ ಏಕಾದಶಿಯಂದು ಗುರುಮಠಕಲ್, ಯಾದಗಿರಿ, ರಾಯಚೂರ, ಬೀದರ ಸೇರಿದಂತೆ ನೆರೆಯ ತೆಲಂಗಾಣದಿಂದಲೂ ಭಕ್ತರು ಆಗಮಿಸಿ ದೇವರ ದರ್ಶನ ಪಡೆದು ಪುನಿತರಾಗಬೇಕು ಎಂದು ತಿಳಿಸಿದರು.

## ಜನವರಿ 30 ರಂದು ದಿನಪತ್ರಿಕೆಗಳ ಸಂಪಾದಕರ ಸಂಘದ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾ ಘಟಕದ ಸಭೆಯನ್ನು ಗುರುವಾರ ಕರೆಯಲಾಗಿತ್ತು.

ಈ ಸಭೆಯಲ್ಲಿ ಸ್ಥಳೀಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳ ಅಭಿವೃದ್ಧಿ, ಪತ್ರಿಕೆಗಳು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು. ಜನವರಿ 30ನೇ ತಾರೀಖು ಜಿಲ್ಲಾ ಘಟಕದ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ತೀರ್ಮಾನಿಸಲಾಯಿತು. ಗದಗದಲ್ಲಿ ನಡೆಯುವ ರಾಜ್ಯ ಮಟ್ಟದ ಪ್ರಪ್ರಥಮ ಸಮ್ಮೇಳನದಲ್ಲಿ ಕೊಪ್ಪಳ ಜಿಲ್ಲೆಯ ಸಂಪಾದಕರು ಭಾಗವಹಿಸುವ ಮತ್ತು ಸಮ್ಮೇಳನ ಯಶಸ್ವಿ ಗೊಳಿಸುವ ಬಗ್ಗೆ ಹಾಗೂ ಮತ್ತಿತರ ಮಹತ್ವದ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್.ಎಸ್.ಹರೀಶ್, ರಾಜ್ಯ ಸಮಿತಿ ಸದಸ್ಯ ವಿಶ್ವನಾಥ, ಜಿಲ್ಲಾಧ್ಯಕ್ಷ ಎಂ.ಜೆ. ಶ್ರೀನಿವಾಸ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹಮ್ಮದ್ ಖಲೀಲ್ ಉಡೇವು, ಜಿಲ್ಲಾ ಉಪಾಧ್ಯಕ್ಷ ಈರಣ್ಣ ಕಳ್ಳಿಮನಿ, ಜಿಲ್ಲಾ ಖಜಾಂಚಿ ನಾಗರಾಜ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಮೊಹಮ್ಮದ್ ಅಖೀಲ್ ಉಡೇವು, ಸಂಪಾದಕರಾದ ರಾಜಬಕ್ಷಿ ಹೆಚ್.ವಿ, ನಿಂಗಪ್ಪ ದೊಡ್ಡಮನಿ, ಸದಸ್ಯ ಅಕ್ಷಯ್ ಇರಕಲ್, ಸೇರಿದಂತೆ ಹಲವು ಪತ್ರಕರ್ತರು ಭಾಗವಹಿಸಿದ್ದರು.

## ವಳಖಿಂಡಿ; ಪಿಕೆಪಿಎಸ್ ಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ತಾಲೂಕಿನ ವಳಖಿಂಡಿ ಗ್ರಾಮದ ಪಿಕೆಪಿಎಸ್ ಆಡಳಿತ ಮಂಡಳಿಯ ನಿರ್ದೇಶಕರ ಆಯ್ಕೆಗೆ ರವಿವಾರ ನಡೆದ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಅಭ್ಯರ್ಥಿಗಳಿಗೆ ಮಂಗಳವಾರ ಪ್ರಮಾಣ ಪತ್ರ ವಿತರಿಸಲಾಯಿತು. ಸಾಮಾನ್ಯ ಸ್ಥಾನದಿಂದ ಗೆಲುವು ಸಾಧಿಸಿದ, ರಾಮಚಂದ್ರ ಸುಭಾಷಚಂದ್ರ, ಬಸವರಾಜ ಮಚೇಂದ್ರ, ಗುಣವಂತ ಚಂದ್ರಪ್ಪ, ಜಗನಾಥ ತುಕ್ಕಾರೆಡ್ಡಿ, ತೀರ್ಥಯ್ಯಾ ಬಸ್ತಿರ್ಥಯ್ಯಾ, ಮಹಿಳಾ ಸ್ಥಾನದಿಂದ, ಭೋಟಿಬೀ ದಸ್ತಗೀರ್, ಇಂದುಬಾಯಿ ನಾಗಶೆಟ್ಟಿ, ಪರಿಶಿಷ್ಟ ಜಾತಿ ಸ್ಥಾನದಿಂದ, ಈಶ್ವರ ಹಣಮಂತ, ಪರಿಶಿಷ್ಟ ಪಂಗಡ ಸ್ಥಾನದಿಂದ, ರಾಜಪ್ಪ ಗುಂಡಪ್ಪ, ಹಿಂದುಳಿದ ವರ್ಗ (ಎ) ಸ್ಥಾನದಿಂದ, ಚಾಂದಪಾಶ ವಜೀಮ ಸಾಬ್, ಹಿಂದುಳಿದ ವರ್ಗ (ಬಿ) ಸ್ಥಾನದಿಂದ ಶಾಂತಕುಮಾರ್ ಬಸವಂತರಾವ, ಸಾಲಗರರಲ್ಲದ ಸ್ಥಾನದಿಂದ, ಈರಪ್ಪ ಪುಂಡಲೀಕ ಆಯ್ಕೆಯಾಗಿದ್ದಾರೆ, ಒಟ್ಟು 12 ಅಭ್ಯರ್ಥಿಗಳಿಗೆ ಚುನಾವಣಾಧಿಕಾರಿ ಜ್ಯೋತಿ ರುಗಾನ್ ಅವರು ಮಂಗಳವಾರ ಚುನಾವಣಾ ಪ್ರಮಾಣ ಪತ್ರ ವಿತರಿಸಿದರು. ಈ ಸಂದರ್ಭದಲ್ಲಿ ಮುಖ್ಯ ಕಾರ್ಯನಿರ್ವಾಹಕ ಜಗನಾಥ ಸಗರ್, ಸಿಬ್ಬಂದಿಗಳಾದ ಬಾಬುರಾವ ಮಾಲಿಪಾಟೀಲ್, ಮಲ್ಲಿಕಾರ್ಜುನ ಜಗನಾಥ, ಕವಿತಾ ಡಾಕುಳಗಿ, ಪೂಜಾ ವೀರಶೆಟ್ಟಿ, ಮಹೇಬೂಬ್ ಪಾಷಾ ಸೈಯದ್ ಸಾಬ್, ಮಲ್ಲಿಕಾರ್ಜುನ ಚನ್ನಬಸಪ್ಪ, ಪ್ರಮುಖರಾದ ಬಾಬುರಾವ್ ರಾಜೇಶ್ವರ್, ರಾಚಯ್ಯ ಸ್ವಾಮಿ ಮಠಪತಿ, ಮಚ್ಚೇಂದ್ರ ಬ್ಯಾಲಳ್ಳಿಕರ್, ಸಿದ್ದರೆಡ್ಡಿ, ಶ್ರೀನಿವಾಸ್ ರೆಡ್ಡಿ, ಶಿವರಾಜ್ ಶೇರಿಕಾರ್, ವಿಜಯಕುಮಾರ್ ಶೇರಿಕಾರ್, ಮಹದೇವಪ್ಪ ಘರ್ಜಿ ಪಾಟೀಲ್, ಉಮಾಕಾಂತ ಪೊಲೀಸ್ ಪಾಟೀಲ್, ಸೋಮಶೇಖರ್ ಮಾಲಿಪಾಟೀಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಎನ್ಎಸ್ಎಸ್ ವಿಶೇಷ ಶಿಬಿರದ ಐದನೇ ದಿನದ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಪಟ್ಟಣದ ಸರ್ಕಾರಿ ಪದವಿ ಪೂರ್ವ ಬಾಲಕರ ಕಾಲೇಜಿನ ಆವರಣದಲ್ಲಿ ಎನ್ಎಸ್ಎಸ್ ವಿಶೇಷ ಶಿಬಿರದ ಐದನೇ ದಿನದ ಕಾರ್ಯಕ್ರಮದ ಅಂಗವಾಗಿ ವಿಶೇಷ ಉಪನ್ಯಾಸವನ್ನು ಮಕ್ಕಳ ಹಕ್ಕುಗಳ ರಕ್ಷಣಾಧಿಕಾರಿಗಳಾದ ಶ್ರೀ ರವಿರಾಜ್ ಬೊಮ್ಮ ಶೆಟ್ಟಿ ವಿಶೇಷ ಉಪನ್ಯಾಸವನ್ನು ನೀಡಿದರು ಅವರು ತಮ್ಮ ಉಪನ್ಯಾಸದಲ್ಲಿ ಮಕ್ಕಳಿಗಾಗಿ ಇರುವ ಕಾಯ್ದೆಗಳು ಮಕ್ಕಳ ಇರುವ ಕಾಯ್ದೆಗಳು ಮತ್ತು ಅವರ ರಕ್ಷಣೆಗಾಗಿ ಕಚೇರಿಗಳ ಕುರಿತು ಮಾಹಿತಿ ನೀಡಿದರು ಅದೇ ರೀತಿಯಾಗಿ ಪೋಕ್ಸೋ ಕಾಯ್ದೆ, 1042, ಕುರಿತು ಸಮಗ್ರವಾದ ಮಾಹಿತಿಯನ್ನು ಮಕ್ಕಳಿಗೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷ ಸ್ಥಾನವನ್ನು ಕಾಲೇಜಿನ ಹಿಂದಿ ಉಪನ್ಯಾಸಕರಾದ ಶ್ರೀ ಸೈಯದ್ ನಬಿ ರವರು ವಹಿಸಿ ಮಾತನಾಡುತ್ತಾ ಬಾಲ್ಯ ವಿವಾಹದಿಂದ ಆಗುವ ದುಷ್ಪರಿಣಾಮಗಳನ್ನು ಕುರಿತು ಮಾಹಿತಿ ನೀಡಿದರು 18 ವರ್ಷದ ಒಳಗೆ ವಿವಾಹವಾದಲ್ಲಿ ಸ್ತ್ರೀಯು ದೈಹಿಕವಾಗಿ ಪ್ರಬುದ್ಧ ವಾಗಿರುವುದಿಲ್ಲ ಎಂದು ಹೇಳಿದರು. ಶಿಬಿರಾಧಿಕಾರಿಗಳಾದ ಶ್ರೀ ಕೆ ಆರ್ ಗೋರಕ್ನಾಥ್ ಶ್ರೀ ಪಪ್ಪು ಮೇತ್ರಿ, ರಮೇಶ್ ವೈರಾಗಿ, ಭಾಸ್ಕರ್ ಹಾಗೂ ಕುಮಾರಿ ವನಿತಾ ಉಪಸ್ಥಿತರಿದ್ದರು ಕಾಲೇಜಿನ ಪ್ರಾಚಾರ್ಯರಾದ ತುಳಜಾ ರಾಮ್ ಗಾಯದನ್ಕರ್ ಹಾಜರಿದ್ದರು, ಕಾರ್ಯಕ್ರಮದ ನಿರೂಪಣೆಯನ್ನು ಶಿಬಿರಾರ್ಥಿಯಾದ ಕುಮಾರಿ ಜ್ಯೋತಿ ನಿರ್ವಹಿಸಿದರು, ಶಿಬಿರಾರ್ಥಿ ದೇವದಾಸ ಸ್ವಾಗತ ಕೋರಿದರು, ವಂದನಾರ್ಪಣೆಯನ್ನು ಕುಮಾರಿ ಪ್ರೇಮ ನೆರವೇರಿಸಿದರು, ಕುಮಾರಿ ಭಾಗ್ಯಶ್ರೀ ಕಾರ್ಯಕ್ರಮದ ಪ್ರಾರ್ಥನೆ ಗೀತೆಯನ್ನು ಹಾಡಿದರು.

# ಜನವರಿ 14 ರಂದು ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.9-ಕಲಬುರಗಿ ಜಿಲ್ಲಾಡಳಿತ,ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಇವುಗಳ ಸಂಯುಕ್ತಾಶ್ರಯದಲ್ಲಿ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಆಚರಣೆ ಕಾರ್ಯಕ್ರಮವನ್ನು ಜನವರಿ 14 ರಂದು ಮಂಗಳವಾರ ಮಧ್ಯಾಹ್ನ 12 ಗಂಟೆಗೆ ಕಲಬುರಗಿ ನಗರದ ಡಾ. ಎಸ್.ಎಂ. ಪಂಡಿತ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಚಿಣಮಗೇರಾ ಮಹಾಂತೇಶ್ವರ ಮಠದ ಶ್ರೀ ಷ.ಬ್ರ. ವೀರಮಹಾಂತ ಶಿವಾಚಾರ್ಯರು ದಿವ್ಯ ಸಾನಿಧ್ಯ ವಹಿಸುವರು. ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ ಹಾಗೂ ಆಳಂದ ಶಾಸಕ ಹಾಗೂ ಮುಖ್ಯಮಂತ್ರಿಯವರ ಸಲಹೆಗಾರ (ನೀತಿ ಮತ್ತು ಕಾರ್ಯಕ್ರಮ) ರಾದ ಬಿ.ಆರ್. ಪಾಟೀಲ ಅವರು ಗೌರವ ಉಪಸ್ಥಿತಿ ವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ.ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ಸಾಬಣ್ಣ ತಳವಾರ, ತಿಮ್ಮಣ್ಣಪ್ಪ ಕಮಕನೂರ, ಜಗದೇವ ಗುತೆದಾರ್, ಮಹಾನಗರಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಮಹಾನಿರೀಕ್ಷಕ ಅಜಯ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು, ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಆಕಾಶ ಎಸ್, ಕಲಬುರಗಿ ಜಿಲ್ಲಾ ಭೋವಿ ವಡ್ಡರ ಸಮಾಜದ ಜಿಲ್ಲಾಧ್ಯಕ್ಷ ಗುಂಡಪ್ಪ ಸಾಳಂಕೆ ಅವರು ವಿಶೇಷ ಆಹ್ವಾನಿತರಾಗಿ ಆಗಮಿಸುವರು. ಕಮಲಾಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಡಾ. ಗಿರೀಶ ಕೆ. ಯಡ್ರಾಮಿ ಅವರು ವಿಶೇಷ ಉಪನ್ಯಾಸ ನೀಡುವರು.

# ಬಿಮ್ಸ್ ಆಸ್ಪತ್ರೆಯಲ್ಲಿನ ಸ್ಥಿತಿಗತಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.09-ರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದ ಟಿ.ಶ್ಯಾಮ್ ಭಟ್ ಹಾಗೂ ನ್ಯಾಯಾಂಗ ಸದಸ್ಯರಾದ ಎಸ್.ಕೆ.ವಂಟಿಗೋಡಿ ಅವರು, ಗುರುವಾರ ಬಳ್ಳಾರಿ ನಗರದ ಜಿಲ್ಲಾ ಆಸ್ಪತ್ರೆಯ 100 ಹಾಸಿಗೆಗಳ ತಾಯಿ ಮತ್ತು ನವಜಾತ ಶಿಶುಗಳ ಆಸ್ಪತ್ರೆ, ಜಿಲ್ಲಾ ಕೇಂದ್ರ ಕಾರಾಗೃಹ, ಬಿಮ್ಸ್ ಆಸ್ಪತ್ರೆ, ಸರ್ಕಾರಿ ಬುದ್ಧಿಮಾಂದ್ಯ ಬಾಲಕರ ಬಾಲಮಂದಿರ ಹಾಗೂ ನಿರಾಶ್ರಿತರ ಪರಿಹಾರ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

**ಜಿಲ್ಲಾ ಆಸ್ಪತ್ರೆ:**

ಮೊದಲಿಗೆ ಜಿಲ್ಲಾ ಆಸ್ಪತ್ರೆ ಆವರಣದ 100 ಹಾಸಿಗೆಗಳ ತಾಯಿ ಮತ್ತು ನವಜಾತ ಶಿಶುಗಳ ಆಸ್ಪತ್ರೆಗೆ ಭೇಟಿ ನೀಡಿದ ಅವರು, ಒಬಿಜಿ ವಾರ್ಡ್, ಪ್ರಸೂತಿ ವಿಭಾಗದ ಮುಂದೆ ಇದ್ದ ಗರ್ಭಿಣಿಯರು, ಬಾಣಂತಿಯರ ಆರೋಗ್ಯಕ್ಷೇಮ ವಿಚಾರಿಸಿದರು. ವೈದ್ಯರು ಸಮಯಕ್ಕೆ ಸರಿಯಾಗಿ ಬರುತ್ತಾರೆಯೇ? ಆರೋಗ್ಯ ಸೇವೆ ಒದಗಿಸುವಲ್ಲಿ ವಿಳಂಬ ತೋರುತ್ತಿದ್ದಾರೆಯೇ? ಎಂದು ವಿಚಾರಿಸಿದರು.

ಹೆರಿಗೆ ಕೋಣೆಗೆ ಭೇಟಿದ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರು, ಹೆರಿಗೆ ವಾರ್ಡ್‌ಗಳಲ್ಲಿ ಸ್ವಚ್ಛತೆ ಆದ್ಯತೆ ನೀಡುವಂತೆ ಸೂಚಿಸಿದರು. ಬಳಿಕ ಔಷಧಿ ವಿತರಣಾ ವಿಭಾಗಕ್ಕೆ ಭೇಟಿ ನೀಡಿ, ವಿವಿಧ ರೀತಿಯ ಎಲ್ಲಾ ಔಷಧಿಗಳು ಲಭ್ಯವಿದೆಯೇ? ಅವಧಿ ಮೀರಿದ ಔಷಧಿಗಳನ್ನು ವಿತರಿಸುವಂತಿಲ್ಲ ಎಂದು ಆರೋಗ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ಜಿಲ್ಲಾ ಕೇಂದ್ರ ಕಾರಾಗೃಹ:**

ನಗರದ ಎಸ್.ಪಿ ಕಚೇರಿ ಹಿಂಭಾಗದ ಜಿಲ್ಲಾ ಕೇಂದ್ರ ಕಾರಾಗೃಹಕ್ಕೆ ಭೇಟಿ ನೀಡಿ ವ್ಯವಸ್ಥೆಯ ಪರಿಶೀಲನೆ ನಡೆಸಿದ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರು, ಜೈಲಿನಲ್ಲಿರುವ ವಿಚಾರಾಣಾಧೀನ ಕೈದಿಗಳ ಮೂಲಭೂತ ಹಕ್ಕುಗಳ ಲಭ್ಯತೆ ಬಗ್ಗೆ ಮಾಹಿತಿ ಪಡೆದುಕೊಂಡರು. ನಂತರ ಕಾರಾಗೃಹದಲ್ಲಿನ ಊಟ ತಯಾರಿಕಾ ಸ್ಥಳ ಅಡುಗೆ ಕೋಣೆ ಸೇರಿದಂತೆ ಹಲವೆಡೆ ಭೇಟಿ ನೀಡಿ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ವಿಚಾರಣಾದೀನಾ ಕೈದಿಗಳಿಗೆ ನೀಡುವ ಉಪಹಾರ, ಊಟ, ಕುಡಿಯುವ ನೀರಿನ ಗುಣಮಟ್ಟದ ಕುರಿತು ಚರ್ಚಿಸಿದ ಅವರು, ವೇಳಾಪಟ್ಟಿಯಂತೆ ಆಹಾರ ವಿತರಣೆ ಮಾಡಲಾಗುತ್ತಿದೆಯೇ ಎಂದು ವಿಚಾರಿಸಿ ಮಾಹಿತಿ ಪಡೆದುಕೊಂಡರು.

ಜೈಲಿನ ಸುರಕ್ಷತೆ ಕುರಿತು ಮಾಹಿತಿ ಪಡೆದ ಅಧ್ಯಕ್ಷರು, ಜೈಲಿನಲ್ಲಿ ಸಿಸಿ ಕ್ಯಾಮೆರಾ ಸಂಖ್ಯೆ ಹೆಚ್ಚಿಸಲು ಸಲಹೆ ನೀಡಿದರು, ಅಲ್ಲದೆ ಅನಾರೋಗ್ಯಕ್ಕೆ ತುತ್ತಾಗುವ ಜೈಲುವಾಸಿಗಳು ಔಷಧಿಯನ್ನು ಸಿಬ್ಬಂದಿಗಳ ಸಮಕ್ಷಮವೇ ಸೇವಿಸಬೇಕು, ಔಷಧಿ ಸೇವಿಸದೆ, ಹಾಗೆಯೇ ಇರಿಸಿಕೊಂಡು, ಒಂದೇ ಬಾರಿ ಎಲ್ಲ ಔಷಧಿ ಸೇವಿಸಿದರೂ ಕೂಡ ಅವರ ಆರೋಗ್ಯಕ್ಕೆ ತೊಂದರೆಯಾಗುತ್ತದೆ. ಕಾರಾಗೃಹದಲ್ಲಿ ಧ್ಯಾನ ಕಾರ್ಯಕ್ರಮವನ್ನು ನಿರಂತರವಾಗಿ ಆಯೋಜಿಸಬೇಕು, ಜೈಲುವಾಸಿಗಳ ಸುರಕ್ಷತೆಗೂ ಹೆಚ್ಚಿನ ಆದ್ಯತೆ ನೀಡಲು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಜೈಲು ಅಧೀಕ್ಷಕರಾದ ಲತಾ ಅವರು ಉಪಸ್ಥಿತರಿದ್ದು, ಜೈಲಿನ ಬಗ್ಗೆ ಸಮಗ್ರ ಮಾಹಿತಿ ನೀಡಿದರು.

ಜೈಲಿನಲ್ಲಿದ್ದ ವಿವಿಧ ಪ್ರಕರಣಗಳಲ್ಲಿ ಜೈಲುವಾಸಿಗಳಾಗಿರುವ ಕೈದಿಗಳನ್ನು ಭೇಟಿಯಾಗಿ, ಕೈದಿಗಳಿಗೆ ಕಾನೂನು ನೆರವು ದೊರೆಯುತ್ತಿರುವ ಬಗ್ಗೆ, ಊಟೋಪಹಾರದ ಬಗ್ಗೆ ಜೈಲಿನ ವ್ಯವಸ್ಥೆಗಳ ಬಗ್ಗೆಯೂ ಮಾಹಿತಿ ಪಡೆದ ಆಯೋಗದ ಅಧ್ಯಕ್ಷರು ಹಾಗೂ ನ್ಯಾಯಾಂಗ ಸದಸ್ಯ ಎಸ್.ಕೆ. ವಂಟಗೋಡಿ ಅವರು, ಜೈಲಿನಲ್ಲಿ ಸೊಳ್ಳೆಗಳನ್ನು ನಿಯಂತ್ರಿಸಲು ಫಾಗಿಂಗ್ ಮಾಡಿಸುವುದು ಹಾಗೂ ಕಿಟಕಿಗಳಿಗೆ ಸೊಳ್ಳೆಗಳು ಜೈಲು ಕೋಣೆಗಳನ್ನು ಪ್ರವೇಶಿಸದಂತೆ ಪರದೆಯನ್ನು ಹಾಕಿಸಲು ಸಲಹೆ ನೀಡಿದರು.

**ಬಿಮ್ಸ್ ಆಸ್ಪತ್ರೆ:**

ಬಳಿಕ, ಬಳ್ಳಾರಿ ವೈದ್ಯಕೀಯ ಸಂಶೋಧನಾ ಮಹಾವಿದ್ಯಾಲಯ ಆಸ್ಪತ್ರೆಯ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿ, ಹೊರರೋಗಿ ಮತ್ತು ಒಳರೋಗಿಗಳ ಬಳಿ ಸಂವಾದ ನಡೆಸಿದರು. ಆರೋಗ್ಯ ಸೇವೆ ನೀಡುವಲ್ಲಿ ಹಣದ ಆಮಿಷ ಒಡ್ಡುತ್ತಿದ್ದಾರೆಯೇ? ಎಂದು ವಿಚಾರಿಸಿದರು. ಬಳಿಕ ಬಿಮ್ಸ್ ಹೆರಿಗೆ ಕೋಣೆ ಸೇರಿದಂತೆ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿದರು.

**ಬುದ್ಧಿಮಾಂದ್ಯ ಬಾಲಕರ ಸರ್ಕಾರಿ ಬಾಲಮಂದಿರ:**

ನಗರದ ಕಂಟೋನ್‌ಮೆಂಟ್‌ನ ಶಾಂತಿಧಾಮ ಆವರಣದ ಬುದ್ಧಿಮಾಂದ್ಯ ಬಾಲಕರ ಸರ್ಕಾರಿ ಬಾಲಮಂದಿರಕ್ಕೆ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದ ಟಿ.ಶ್ಯಾಮ್ ಭಟ್ ಹಾಗೂ ನ್ಯಾಯಾಂಗ ಸದಸ್ಯರಾದ ಎಸ್.ಕೆ.ವಂಟಿಗೋಡಿ ಅವರು ಭೇಟಿ ನೀಡಿದರು.

ಬಾಲಮಂದಿರದಲ್ಲಿ ದಾಖಲಾದ ಮಕ್ಕಳ ವಿವರ ಪಡೆದುಕೊಂಡರು. ಮಕ್ಕಳನ್ನು ಕಾಲಾನುಮಿತಿಯಲ್ಲಿ ಆರೋಗ್ಯ ತಪಾಸಣೆ ನಡೆಸಬೇಕು. ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು. ಬಾಲಮಂದಿರವನ್ನು ಸ್ವಚ್ಛವಾಗಿರಿಸಬೇಕು, ರಕ್ಷಣೆ ಸೇವೆಯಲ್ಲಿ ಯಾವುದೇ ರೀತಿಯಲ್ಲಿ ವ್ಯತ್ಯಯವಾಗಬಾರದು ಎಂದು ಬಾಲಮಂದಿರದ ಅಧೀಕ್ಷಕರಿಗೆ ಸೂಚಿಸಿದರು.

**ನಿರಾಶ್ರಿತರ ಪರಿಹಾರ ಕೇಂದ್ರ:**

ಬಳಿಕ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರು, ಶಾಂತಿಧಾಮ ಆವರಣದ ಸಮಾಜ ಕಲ್ಯಾಣ ಇಲಾಖೆಯ ನಿರಾಶ್ರಿತ ಪರಿಹಾರ ಕೇಂದ್ರದ ಪುರುಷರ ವಿಭಾಗ ಹಾಗೂ ಮಹಿಳಾ ವಿಭಾಗಕ್ಕೆ ಭೇಟಿ ನೀಡಿ ವೀಕ್ಷಿಸಿದರು.

ಊಟ, ವಸತಿ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳ ಬಗ್ಗೆ ವಿಚಾರಿಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಇದೇ ವೇಳೆ ಆಪ್ತ ಕಾರ್ಯದರ್ಶಿ ಅರುಣ ಪೂಜಾರ ಅವರು ಅಧ್ಯಕ್ಷರೊಂದಿಗೆ ಉಪಸ್ಥಿತರಿದ್ದು, ಹಲವಾರು ಉಪಯುಕ್ತ ಸಲಹೆ ಸೂಚನೆಗಳನ್ನು ಇಲಾಖಾಧಿಕಾರಿಗಳಿಗೆ ನೀಡಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ದಿವಾಕರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್, ತಹಶೀಲ್ದಾರ ಗುರುರಾಜ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಪೋಷಕರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.09-ವಿಜಯನಗರ ಜಿಲ್ಲೆಯ ಕೂಡ್ಲಿಗಿ ಕಾನಹೊಸಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಇಮಡಾಪುರ ಹತ್ತಿರ ಅನುಷ್ ತಂದೆ ವರುಣ್(ಅರುಣ್) ಎನ್ನುವ 08 ವರ್ಷದ ಬಾಲಕನು ಪತ್ತೆಯಾಗಿದ್ದು, ಬಳ್ಳಾರಿಯ ಸರ್ಕಾರಿ ಬಾಲಕರ ಬಾಲಮಂದಿರಕ್ಕೆ ದಾಖಲು ಮಾಡಿಕೊಳ್ಳಲಾಗಿದೆ. ಪೋಷಕರ ಪತ್ತೆಗೆ ಸಹಕರಿಸಬೇಕು ಎಂದು ಬಳ್ಳಾರಿಯ ಸರ್ಕಾರಿ ಬಾಲಕರ ಬಾಲಮಂದಿರದ ಅಧೀಕ್ಷಕರು ಮನವಿ ಮಾಡಿದ್ದಾರೆ.

ಬಾಲಕನು ಮಹಾರಾಷ್ಟ್ರದ ಮಾನ್‌ಗಾವ್‌ನ ಜವುಲಿ ಗ್ರಾಮ ಎಂದು ಹೇಳುತ್ತಾನೆ. ಕಪ್ಪು ಮೈ ಬಣ್ಣ, ಬಲ ಹೆಬ್ಬೆಟ್ಟಿನ ಉಗುರು ಕಪ್ಪಾಗಿದ್ದು, ಹಿಂದಿ ಭಾಷೆ ಮಾತನಾಡುತ್ತಾನೆ.

ಎತ್ತರ 132 ಸೆಂ.ಮೀ., ಬಾಲಕನು ದೊರೆತಾಗ ಬಿಳಿಶರ್ಟ್, ನೀಲಿ ಪ್ಯಾಂಟ್ ಧರಿಸಿರುತ್ತಾನೆ.



ಬಾಲಕನ ಪೋಷಕರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿಯ ಸರ್ಕಾರಿ ಬಾಲಕರ ಬಾಲಮಂದಿರದ ಅಧೀಕ್ಷಕರ ಮೊ.9743343138 ಅಥವಾ ಕಂಟೋನ್‌ಮೆಂಟ್‌ನ ಶಾಂತಿಧಾಮ ಆವರಣದ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ದೂ.08392-297436, ಆಪ್ತಸಮಾಲೋಚಕರ ಮೊ.8880466645 ಹಾಗೂ ಗೃಹಪಾಲಕರ ಮೊ.9538177767 ಅಥವಾ ಇ-ಮೇಲ್ boyshomebellary@gmail.com ಗೆ ಮಾಹಿತಿ ನೀಡಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.09-ಕಲಬುರಗಿ ಜಿಲ್ಲಾ ಪಂಚಾಯತ್ ಕೈಗಾರಿಕಾ ವಿಭಾಗದ ವತಿಯಿಂದ 2024-25ನೇ ಸಾಲಿಗೆ ಜಿಲ್ಲಾ ವಲಯ ಯೋಜನೆಯಡಿ ಉಚಿತವಾಗಿ ವಿದ್ಯುತ್‌ಚಾಲಿತ ಹೊಲಿಗೆಯಂತ್ರ ಪಡೆಯಲು ಕಲಬುರಗಿ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ವಾಸವಾಗಿರುವ ಪರಿಶಿಷ್ಟ ಪಂಗಡದ ಹೊಲಿಗೆ ವೃತ್ತಿನಿರತ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಪಂಚಾಯತ್ (ಗ್ರಾ.ಕೈ) ಉಪನಿರ್ದೇಶಕರು ತಿಳಿಸಿದ್ದಾರೆ. ಕಲಬುರಗಿ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ವಾಸವಿರುವ ಮಹಿಳಾ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬೇಕು. (ಅರ್ಜಿ ಸಲ್ಲಿಸುವ ಮೊದಲನೇ ದಿನವಾದ ದಿನಾಂಕ: 06-01-2025 ಕ್ಕೆ ಅಭ್ಯರ್ಥಿಗಳ ವಯೋಮಿತಿ ಕನಿಷ್ಠ 21 ವರ್ಷ ಹಾಗೂ ಗರಿಷ್ಠ 45 ವರ್ಷದೊಳಗಿರಬೇಕು. ಅರ್ಜಿದಾರರು ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿರಬೇಕು.

ಆಸಕ್ತಿಯುಳ್ಳ ಮಹಿಳಾ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯೊಂದಿಗೆ ಸಂಬಂಧಪಟ್ಟ ಪೂರಕ ದಾಖಲೆಗಳ ಸ್ವಯಂ ದೃಢೀಕೃತ ಪ್ರತಿಗಳನ್ನು ಆಯಾ ತಾಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿಗಳಿಗೆ ಅಥವಾ ಕಲಬುರಗಿ ಜಿಲ್ಲಾ ಪಂಚಾಯತ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ (ಗ್ರಾಮೀಣ ಕೈಗಾರಿಕೆ) ಉಪ ನಿರ್ದೇಶಕರ ಕಚೇರಿಯಲ್ಲಿ 2025ರ ಜನವರಿ 18 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ, ಕಮಲಾಪೂರ, ಚಿತ್ತಾಪೂರ, ಕಾಳಗಿ ಹಾಗೂ ಶಹಾಬಾದ ತಾಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿಗಳ ಮೊಬೈಲ್ ಸಂಖ್ಯೆ-8951620063, ಆಳಂದ, ಅಫಜಲಪೂರ, ಜೇವರ್ಗಿ ಹಾಗೂ ಯಡ್ರಾಮಿ ತಾಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿಗಳು-9901489919, ಸೇಡಂ ಹಾಗೂ ಚಿಂಚೋಳಿ ಕೈಗಾರಿಕಾ ವಿಸ್ತರಣಾಧಿಕಾರಿಗಳು-7259885379 ಹಾಗೂ ಕಲಬುರಗಿ ಜಿಲ್ಲಾ ಪಂಚಾಯತ (ಗ್ರಾಮೀಣ ಕೈಗಾರಿಕೆ) ಉಪ ನಿರ್ದೇಶಕರ ಕಚೇರಿಯ ದೂ.ಸಂ.-08472-221784, 295784 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಹೊಸ ಪೆನಲ್ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಪಟ್ಟಣದ ಪ್ರತಿಷ್ಠಿತ ಸಹಕಾರಿ ಕೋ ಆಪರೇಟಿವ್ ಬ್ಯಾಂಕ್ ಇದರ ಆಡಳಿತ ಮಂಡಳಿ ನಿರ್ದೇಶಕರ 13 ಸ್ಥಾನಗಳಿಗೆ ಜನವರಿ 19ರಂದು ಜರಗುವ ಚುನಾವಣೆಗೆ ಮಹಾದೇವಪ್ಪ ಕುಂಬಾರ ನೇತೃತ್ವದ ಹೊಸ ಪೆನಲ್‌ನ ಅಭ್ಯರ್ಥಿಗಳು ಗುರುವಾರ ತಮ್ಮ ನಾಮಪತ್ರಗಳನ್ನು ಸಲ್ಲಿಸಿದರು. ಪಟ್ಟಣದ ಅಡತ್ ಮಾರ್ಕೆಟ್ ಅಸೋಸಿಯೇಷನ್ ಸಭಾ ಭವನದಿಂದ ತಮ್ಮ ನೂರಾರು ಬೆಂಬಲಿಗರೊಂದಿಗೆ ಬ್ಯಾಂಕಿನವರೆಗೆ ಮೆರವಣಿಗೆಯಲ್ಲಿ ಆಗಮಿಸಿ ಸಹಾಯಕ ಚುನಾವಣಾಧಿಕಾರಿ ಆರ್.ಬಿ.ಧಮ್ಮೂರಮಠರಿಗೆ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಪೆನಲ್‌ನ ಅಭ್ಯರ್ಥಿ ಮಹಾದೇವಪ್ಪ ಕುಂಬಾರ ಅವರು ಮಾತನಾಡಿ ಸದರಿ ಬ್ಯಾಂಕನ್ನು ಇನ್ನಷ್ಟು ಅಭಿವೃದ್ಧಿಗೊಳಿಸಿ ಹೊಸ ಪಥ ದತ್ತ ಕೊಂಡೊಯ್ಯಲು ಉತ್ಸಾಹಿ, ಪ್ರಾಮಾಣಿಕ ಹಾಗೂ ಕ್ರಿಯಾಶೀಲ ವ್ಯಕ್ತಿಗಳನ್ನು ತೆಗೆದುಕೊಂಡು ಈ ಹೊಸ ಪೆನಲ್ ರಚಿಸಲಾಗಿದೆ, ಇದಕ್ಕೆ ಸೇವಾವಕಾಶ ಮಾಡಿಕೊಡಲು ಶೇರುದಾರ ಬಾಂಧವರು ಆಶೀರ್ವಾದ ಮಾಡಬೇಕು ಎಂದರು. ಈ ಸಮಯದಲ್ಲಿ ಪೆನಲ್ ಅಭ್ಯರ್ಥಿಗಳಾದ ಎಂ.ಬಿ.ಕುಂಬಾರ, ಪವಡೆಪ್ಪ ಯಾಳವಾರ, ಮಲ್ಲನಗೌಡ(ಮಲ್ಕಾಜಪ್ಪ) ನಾಗರಾಳ, ಅಶೋಕ ಬಳಗಾನೂರ, ಪ್ರಹ್ಲಾದಸಿಂಗ್ ಹಜೇರಿ, ಘನಶಾಮ ಚೌವ್ಹಾಣ, ಚನ್ನಬಸಪ್ಪಗೌಡ ಚೌಧರಿ, ಮಯೂರ ಪಾಟೀಲ, ಬಸನಗೌಡ ಪಾಟೀಲ, ದತ್ತು ನಾಯಕ್, ಭೀಮಪ್ಪ ತಳವಾರ, ಸುಮಂಗಲಾ ಕಲ್ಬುರ್ಗಿ, ಸಿದ್ದಮ್ಮ ಬಂದಾಳ, ಗಣ್ಯರಾದ ಬಸವರಾಜ ಕುಂಬಾರ, ಗಂಗಾಧರ ಕಸ್ತೂರಿ, ಬಸನಗೌಡ ಜೈನಾಪೂರ, ಪ್ರಕಾಶ ಹಜೇರಿ, ಪರಶುರಾಮ್ ತಂಗಡಗಿ, ಅಣ್ಣಪ್ಪ ಜಗತಾಪ, ಎಂ.ಎಂ.ಪಾಟೀಲ, ವಿಶ್ವನಾಥ ರೆಡ್ಡಿ ನಾಡಗೌಡ, ಪಂಚಾಕ್ಷರಿ ಹಿರೇಮಠ, ಮಾನಸಿಂಗ್ ಕೊಕಟನೂರ, ಸಂಗನಗೌಡ ಅಸ್ಕಿ, ತಿಪ್ಪಣ್ಣ ಸಜ್ಜನ, ರಾಘವೇಂದ್ರ ಚೌವ್ಹಾಣ, ಹನುಮಂತ ನಾಯಕ್, ಹರಿಸಿಂಗ್ ಮೂಲಿಮನಿ, ಈರಣ್ಣ ಕಲಬುರ್ಗಿ, ರಾಮು ಜಗತಾಪ, ರತನಸಿಂಗ್ ಕೊಕಟನೂರ, ಮುತ್ತು ಕಶೆಟ್ಟಿ, ರಿಯಾಜ ಡೋಣಿ, ಅಬ್ದುಲ್ ಅಜೀಜ ಕೆಂಭಾವಿ ಮತ್ತಿತರರು ಉಪಸ್ಥಿತರಿದ್ದರು.

# ಗ್ಯಾಸ್ ಸಂಪರ್ಕ ಪಡೆಯುವ ಗ್ರಾಹಕರು ನಿಯಮ ಅನುಸರಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜ.09-ಜಿಲ್ಲೆಯಲ್ಲಿ ಅನಿಲ ಸಂಪರ್ಕ ಸೇವೆ ಪಡೆಯುವ ಎಲ್ಲಾ ಬಳಕೆದಾರರು (ಗ್ರಾಹಕರು) ತಮ್ಮ ದಿನನಿತ್ಯ ಬಳಸುವ ಗ್ಯಾಸ್ ಸಂಪರ್ಕದ ಬಗ್ಗೆ ಎಲ್ಲಾ ನಿಯಮ ತಿಳಿದುಕೊಂಡು ನಿಯಮಾನುಸಾರ ಬುಕ್ ಮಾಡಿಕೊಂಡು ಖರೀದಿಸಬೇಕು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಗಳ ಉಪನಿರ್ದೇಶಕರಾದ ಸಕೀನಾ ಅವರು ತಿಳಿಸಿದ್ದಾರೆ.

ಗ್ರಾಹಕರು ಸಂಬಂಧಪಟ್ಟ ಗ್ಯಾಸ್ ಏಜೆನ್ಸಿಯವರಿಂದ ಮುದ್ರಿತ ರಶೀದಿ ಪಡೆಯಬೇಕು. ಮುದ್ರಿತವಾದ ರಶೀದಿಯಲ್ಲಿರುವ ಮೊತ್ತವನ್ನು ಮಾತ್ರ ಸಿಲಿಂಡರ್ ಡೆಲೆವರಿಯವರಿಗೆ ನೀಡಬೇಕು. ಯಾವುದೇ ಕಾರಣಕ್ಕೂ ಹೆಚ್ಚಿನ ಮೊತ್ತ (ಟಿಪ್ಸ್) ನೀಡುವಂತಿಲ್ಲ.

ಹೆಚ್ಚಿನ ಮಾಹಿತಿಗಾಗಿ ರಶೀದಿಯಲ್ಲಿರುವ ನಂಬರ್‌ಗೆ ಕರೆ ಮಾಡಿ ತಮ್ಮ ಎಲ್ಲಾ ಸಂಶಯಗಳನ್ನು ಬಗೆಹರಿಸಿಕೊಳ್ಳಬಹುದು. ಸಿಲಿಂಡರ್‌ನ ಪೈಪ್ ಖರೀದಿಸುವಾಗ ಅದರ ಮೇಲೆ ನಮೂದಿಸಿರುವ ಮೊತ್ತ ಮಾತ್ರ ಕೊಟ್ಟು ಖರೀದಿಸಬೇಕು.

ಗ್ಯಾಸ್ ಏಜೆನ್ಸಿಯವರ ಪ್ರಮುಖ ಕರ್ತವ್ಯಗಳು:*

ಗ್ರಾಮೀಣ ಪ್ರದೇಶದ ಗ್ರಾಹಕರಿಗೆ ಆನ್‌ಲೈನ್‌ನಲ್ಲಿ ಬುಕಿಂಗ್ ಮಾಡುವುದು ಮತ್ತು ಆನ್‌ಲೈನ್‌ನಲ್ಲಿ ಹಣ ಪಾವತಿ ಮಾಡುವ ಬಗ್ಗೆ ಜಾಗೃತಿ ಮೂಡಿಸುವುದು. ಗ್ರಾಮೀಣ ಪ್ರದೇಶಗಳಲ್ಲಿ ಸಿಲಿಂಡರ್ ಡೆಲಿವರಿ ಮಾಡುವ ಸಂದರ್ಭದಲ್ಲಿ ಡೆಲಿವರಿ ವಾಹನದ ಮೇಲೆ ಸಿಲಿಂಡರ್‌ನ ಮೊತ್ತದ ಬಗ್ಗೆ ಸಂಬಂಧಿಸಿದ ಗ್ಯಾಸ್ ಏಜೆನ್ಸಿಯವರು ಮೊತ್ತದ ಪಟ್ಟಿಯನ್ನು ಪ್ರದರ್ಶಿಸುವುದು.

ಕಾನೂನು ಮಾಪನ ಶಾಸ್ತ್ರ ಇಲಾಖೆಯಿಂದ ತೂಕದ ಯಂತ್ರವನ್ನು ಸತ್ಯಾಪನೆ ಮತ್ತು ಮುದ್ರೆ ಹಾಕಿಸುವುದು ಹಾಗೂ ಸತ್ಯಾಪನೆ ಪ್ರಮಾಣವನ್ನು ನಿಯಮಾನುಸಾರ ಪ್ರದರ್ಶಿಸುವುದು. ಪ್ರತಿ ಡೆಲಿವರಿ ವಾಹನದಲ್ಲಿ ಸಿಲಿಂಡರ್ ತೂಕ ಮಾಡುವ "ಸ್ಪ್ರಿಂಗ್ ಬ್ಯಾಲೆನ್ಸ್"ನ್ನು ಕಡ್ಡಾಯವಾಗಿ ಇಡಬೇಕು.

ಸಿಲೆಂಡರ್ ಡೆಲಿವರಿ ಮಾಡುವಾಗ ಗ್ರಾಹಕರು ಸಿಲಂಡರ್ ತೂಕ ಸರಿಯಾಗಿರುವುದನ್ನು ತೋರಿಸಲು ಕೇಳಿದಾಗ ಕಡ್ಡಾಯವಾಗಿ ಸ್ಪ್ರಿಂಗ್ ಬ್ಯಾಲೆನ್ಸ್ ಮೂಲಕ ತೂಕ ಮಾಡಿ ಸಿಲೆಂಡರ್ ಮೇಲೆ ಬರೆದಿರುವ ನಿವ್ವಳ ತೂಕ (GrossWeight) ಸರಿಯಾಗಿರುವುದನ್ನು ತೂಕ ಮಾಡಿ ಗ್ರಾಹಕರಿಗೆ ದೃಢಪಡಿಸಬೇಕು.

ಗ್ರಾಹಕರಿಂದ ಮುದ್ರಿತ ಬಿಲ್‌ನಲ್ಲಿ ನಮೂದಾಗಿರುವ ಮೊತ್ತವನ್ನು ಮಾತ್ರ ಸಿಲಿಂಡರ್ ಡೆಲಿವರಿಗಾಗಿ ಪಡೆಯುವುದು, ಮುದ್ರಿತ ಬಿಲ್ಲಿಗಿಂತ ಹೆಚ್ಚಿನ ಮೊತ್ತವನ್ನು ಪಡೆಯುವುದು ಅಥವಾ ಹೆಚ್ಚಿನ ಮೊತ್ತಕ್ಕೆ ಬೇಡಿಕೆ ಇಡುವುದು ಐಜರಚಿಟ ಒಜಣಡಿಠಟಠಿಂಥಿ ಕಅ ಖಣಟಜ-2011 ರ 18(2) ರ ಉಲ್ಲಂಘನೆಯಾಗುತ್ತದೆ.

ಗ್ಯಾಸ್ ಡೆಲೆವರಿ ಮಾಡುವ ವಾಹನಗಳನ್ನು ನೋಂದಾಯಿಸಿಕೊಳ್ಳಬೇಕು ಹಾಗೂ ಸುರಕ್ಷೆ ಕಾಪಾಡಿಕೊಳ್ಳಬೇಕು. ಯಾವುದೇ ಅನಧೀಕೃತ ವಾಹನಗಳಲ್ಲಿ ಸಿಲಿಂಡರ್ ಸರಬರಾಜು ಮಾಡುವಂತಿಲ್ಲ. ಒಂದು ವೇಳೆ ಮಾಡಿದ್ದಲ್ಲಿ ಕರ್ನಾಟಕ ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು.

ಮೇಲ್ಕಂಡ ಹಾಗೂ ನಿಯಮಾನುಸಾರ ಸಮರ್ಪಕವಾಗಿ ಗ್ರಾಹಕರಿಗೆ ಸೇವೆ ಒದಗಿಸದೆ ಇರುವ ಗ್ಯಾಸ್ ಏಜೇನ್ಸಿಗಳ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬ್ಯಾಟರಿ ಚಾಲಿತ ವ್ಹೀಲ್‌ಚೇರ್‌ಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.9-ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2024-25ನೇ ಸಾಲಿಗೆ ದೈಹಿಕ ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ನೀಡಲಾಗುತ್ತಿದ್ದು, ಇದಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಕಲಬುರಗಿ ಜಿಲ್ಲೆಯ ಅರ್ಹ ದೈಹಿಕ ವಿಕಲಚೇತನ ವ್ಯಕ್ತಿಗಳು ಢಣಣಠಿ://ಣತುಜುಚಿ.ಇಚಿಡಿ-ಟಿಚಿಣಚಿಇಚಿ.ರಠತ.ಟಿ ಪೋರ್ಟಲ್‌ನಲ್ಲಿ 2025ರ ಜನವರಿ 21 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ/ ವಿಕಲಚೇತನರ ಸಹಾಯವಾಣಿ ಸಂಖ್ಯೆ: 08472-235222 ಅಥವಾ ತಾಲೂಕು ನೋಡಲ್ ಅಧಿಕಾರಿಗಳು (ಂಅಆಕಔ) ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ತಾಲೂಕು ಕಚೇರಿ ಕಲಬುರಗಿ, ಆಳಂದ, ಅಫಜಲಪೂರ, ಚಿತ್ತಾಪೂರ, ಚಿಂಚೋಳಿ, ಜೇವರ್ಗಿ, ಸೇಡಂ. ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು (ಎಮ್.ಆರ್.ಡಬ್ಲ್ಯೂ) ಕಲಬುರಗಿ ತಾಲೂಕು ಪಂಚಾಯಿತಿ ಕಚೇರಿ ದೂರವಾಣಿ ಸಂಖ್ಯೆ: 9972079714, ಅಫಜಲಪೂರ (ಯು.ಆರ್.ಡಬ್ಲೂ)-8880023232 ಆಳಂದ-9483054495, ಜೇವರ್ಗಿ- 9741875881, ಚಿತ್ತಾಪೂರ-9845204328, ಚಿಂಚೋಳಿ-9880671171,

# ಕಾಲೇಜಿನಲ್ಲಿ 8ನೇ ತರಗತಿ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.9-ಜನವರಿ 2026ನೇ ಅಧಿವೇಶನಕ್ಕಾಗಿ ಉತ್ತರಾಖಂಡ ರಾಜ್ಯದ ಡೆಹರಾಡೂನಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜಿನಲ್ಲಿ 8ನೇ ತರಗತಿಯ ಪ್ರವೇಶ ಪರೀಕ್ಷೆಗೆ ಕರ್ನಾಟಕ ರಾಜ್ಯದ ಅರ್ಹ ಬಾಲಕ ಮತ್ತು ಬಾಲಕಿಯರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಈ ಅರ್ಹತಾ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ಕೇಂದ್ರದಲ್ಲಿ ದಿನಾಂಕ: 01-06-2025 (ಭಾನುವಾರ) ರಂದು ನಡೆಸಲಾಗುತ್ತಿದೆ. ಅಭ್ಯರ್ಥಿಗಳು ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶಾಲೆಯಲ್ಲಿ 7ನೇ ತರಗತಿಯಲ್ಲಿ ಓದುತ್ತಿರುವ ಅಥವಾ ಉತ್ತೀರ್ಣರಾಗಿರಬೇಕು. ದಿನಾಂಕ 01/01/2026 ರಂತೆ 111/2 ವರ್ಷದಿಂದ 13 ವರ್ಷದೊಳಗಿರುವ (ಅಂದರೆ ದಿನಾಂಕ 02/01/2013 ರಿಂದ 01/07/2014 ರೊಳಗೆ ಜನಿಸಿರುವ) ಬಾಲಕ ಮತ್ತು ಬಾಲಕಿಯರು ಮಾತ್ರ ಈ ಪ್ರವೇಶ ಪರೀಕ್ಷೆಗೆ ಅರ್ಹರಿರುತ್ತಾರೆ.

ಭರ್ತಿ ಮಾಡಿದ ನಿಗದಿತ ಅರ್ಜಿ ನಮೂನೆಯನ್ನು ದ್ವಿಪ್ರತಿಯಲ್ಲಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕೆ.ಎಮ್. ಕಾರ್ಯಪ್ಪ ಭವನ್, ನಂ.58 ಫೀಲ್ಡ್ ಮಾರ್ಷಲ್ ಕೆ.ಎಮ್. ಕಾರ್ಯಪ್ಪ ರಸ್ತೆ, ಬೆಂಗಳೂರ ವಿಳಾಸಕ್ಕೆ 2025ರ ಮಾರ್ಚ್ 31 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಇ-ಮೇಲ್ dirdswrblr@gmail.com ವಿಳಾಸವನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ: 080-25589459 ಕರೆ ಮಾಡಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಬೇಲೂರಿನಲ್ಲಿ 12 ರಂದು ಪೂರ್ವ ಸಿದ್ದತಾ ಸಭೆ.

ಮಲ್ಲಮ್ಮ ನುಡಿ ವಾರ್ತೆ.

(ಬಸವಕಲ್ಯಾಣ:-ಹುಲಸೂರು) : ತಾಲೂಕಿನ ಬೇಲೂರಿನ ಉರಿಲಿಂಗಪೆದ್ದಿ ಮಠದಲ್ಲಿ ಶರಣ ಉರಿಲಿಂಗಪೆದ್ದಿ ಉತ್ಸವ,ಲಿಂ.ಪೂಜ್ಯ ಶ್ರೀ ಶಿವ ಲಿಂಗೇಶ್ವರ ಶಿವಯೋಗಿಗಳವರ 56 ನೆಯ ಪುಣ್ಯ ಸ್ಮರಣೋತ್ಸವ ಅಂಗವಾಗಿ ಜರುಗುವ ಪ್ರಥಮ ಸಮ್ಮೇಳನದ ಪೂರ್ವಭಾವಿ ಸಭೆಯನ್ನು ದಿನಾಂಕ: 12-01-2025 ರಂದು ರವಿವಾರ



ಮುಂಜಾನೆ 9-30 ಕ್ಕೆ ಬೇಲೂರು ಮಠದಲ್ಲಿ ಜರುಗುವುದು. ಸಾಹಿತಿ,ಕವಿ,ಕಲಾವಿದರು,ಶಿಕ್ಷಕ-ಉಪನ್ಯಾಸಕರು,ಆಡಳಿತಗಾರರು,ವಿವಿಧ ಇಲಾಖೆಯವರು,ಸರ್ವ ಸದ್ಭಕ್ತರು, ಅಭಿಮಾನಿಗಳು ಬೇಲೂರ ಗ್ರಾಮಸ್ಥರು ಆಗಮಿಸಿ ಸಲಹೆ ಸೂಚನೆ ನೀಡಿ ಪೂರ್ವ ಸಭೆಯಲ್ಲಿ ಚರ್ಚಿಸಲು ಆಹ್ವಾನಿಸಲಾಗಿದೆ. ಪೂಜ್ಯ ಶ್ರೀ ಪಂಚಾಕ್ಷರಿ ಸ್ವಾಮೀಜಿಗಳು ನೇತೃತ್ವದಲ್ಲಿ,ಸಂಯೋಜಕರಾದ ಡಾ.ಗವಿಸಿದ್ಧಪ್ಪ ಪಾಟೀಲರ ಅಧ್ಯಕ್ಷತೆಯಲ್ಲಿ ಜರುಗಲಿದೆ ಎಂದು ಶಾಖಾಮಠದ ಮಹಾಲಿಂಗ ದೇವರು ಪತ್ರಿಕಾ ಹೇಳಿಕೆ ಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9632899236

# ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಜಗತ್ತು ಎದುರಿಸುವ ಉತ್ಸಾಹವಿರಲಿ: ಸರುಬಾಯಿ ಪವಾರ್



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಆಧುನಿಕ ಯುಗದಲ್ಲಿ ಪ್ರತಿಯೊಂದು ಕ್ಷೇತ್ರದಲ್ಲಿಯೂ ತೀವ್ರ ಪೈಪೋಟಿಯಿದೆ. ಎಲ್ಲರೂ ಸ್ಪರ್ಧಾತ್ಮಕ ಜಗತ್ತನ್ನು ಎದುರಿಸುವ ಉತ್ಸಾಹ ಹೊಂದಬೇಕು ಎಂದು ಸರುಬಾಯಿ ಪವಾರ್ ಹೇಳಿದರು. ತಾಲೂಕಿನ ನಿರ್ಣಾ ಗ್ರಾಮದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ದೇವಸ್ಥಾನದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ವತಿಯಿಂದ ರಾಷ್ಟ್ರೀಯ ಸೇವಾ ಯೋಜನೆ ಶಿಬಿರದಲ್ಲಿ ಮಾತನಾಡಿದ ಅವರು, ಪಠ್ಯಪುಸ್ತಕಗಳನ್ನು ಅಭ್ಯಾಸ ಮಾಡಿ, ಗರಿಷ್ಠ ಅಂಕ ಗಳನ್ನು ಪಡೆಯುವುದರ ಜತೆಗೆ ನಾನಾ ವಲಯದ ವಿದ್ಯಮಾನಗಳ ಬಗ್ಗೆ ಸಮಗ್ರ ಅಧ್ಯಯನ ಅಗತ್ಯವಾಗಿದೆ. ಅಲ್ಲದೆ ವಿದ್ಯಾರ್ಥಿ ದಿಸೆಯಲ್ಲಿಯೇ ಸಮಾಜಕ್ಕೆ ಮಾದರಿಯಾಗುವಂತಹ ಚಟುವಟಿಕೆಗಳಲ್ಲಿ ತಮ್ಮನ್ನು ತಾವು ತೆಣಟಿಜಜಜಿಟಿಜಜಡಗಿಸಿಕೆಣಟಿಜ ಜಜಿಟಿಜಜಳ್ಳಬೇಕು. ವಿದ್ಯಾರ್ಥಿಗಳು ಸದಾ ಕ್ರಿಯಾಶೀಲರಾಗಿ ಪಠ್ಯವಸ್ತುಗಳ ಅಧ್ಯಯನದಲ್ಲಿ ಮಗ್ನರಾಗಬೇಕು. ಆಗ ಮಾತ್ರ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿ ಇತರರಿಗೆ ಮಾದರಿಯಾಗಬಹುದು ಎಂದು ಹೇಳಿದರು. ಹಣಮಂತರಾವ ಗೌಡಗಾಂವಕರ್ ಮಾತನಾಡಿ, ರೈತರಿಲ್ಲದ ಜಗತ್ತನ್ನು ಕಲ್ಪಿಸಿಕೊಳ್ಳುವುದು ಅಸಾಧ್ಯ. ನಮ್ಮ ನಿತ್ಯದ ಊಟದ ಹಿಂದೆ ರೈತನ ಶ್ರಮವಿದೆ. ಇಡೀ ಜಗತ್ತು ಬೆಳಗುವ ರೈತ ಯಾವಾಗಲೂ ತೆರೆಮರೆಯಲ್ಲೆ ಇರುತ್ತಾನೆ. ಆತನ ಸಂಕಟ, ನೋವು, ದುಮ್ಮಾನಗಳಿಗೆ ಎಣೆಯೇ ಇಲ್ಲ. ಆದರೂ, ನೇಗಿಲು ಹೊತ್ತ ಯೋಗಿ ತನ್ನ ಕಾಯಕ ಮಾಡುತ್ತಲೇ ಇರುತ್ತಾನೆ. ಅಂಥ ನಿಸ್ವಾರ್ಥಿಯ ರೈತನನ್ನು ನೆನೆಯಲು ಡಿ.23ನ್ನು ರಾಷ್ಟ್ರೀಯ ರೈತ ದಿನವಾಗಿ ಆಚರಿಸಲಾಗುತ್ತಿದೆ. ನಾವಿಗ ಆಧುನಿಕ ಯುಗದಲ್ಲಿದ್ದೆವೆ. ಸಹಜವಾಗಿಯೇ ನಮ್ಮೆಲ್ಲ ಚಟುವಟಿಕೆಯಲ್ಲೂ ವಿಜ್ಞಾನ ತಂತ್ರಜ್ಞಾನಗಳ ಬಳಕೆ ದಿನೇ ದಿನೇ ಹೆಚ್ಚುತ್ತಲೇ ಇದೆ. ಆದರೆ, ತಂತ್ರಜ್ಞಾನಗಳ ಲಾಭದಿಂದ ಅತ್ಯಂತ ವಂಚಿರಾದವರು ಭಾರತದ ರೈತರೇ. ಹಳ್ಳಿಯಿಂದ ದಿಲ್ಲಿಯವರೆಗೂ ಹಾಗೂ ಎಲ್ಲ ಕ್ಷೇತ್ರದ ಜನರು ವಿಜ್ಞಾ ತಂತ್ರಜ್ಞಾನದ ಪ್ರಯೋಜನ ಪಡೆಯುತ್ತಿರುವುದರಲ್ಲಿ ನಿಸ್ಸಿಮರೇ ಆಗಿದ್ದು, ಮುಂಚೂಣಿಯಲ್ಲಿದ್ದಾರೆ. ಆದರೆ, ಇದಾವುದನ್ನೂ ಅಷ್ಟಾಗಿ ತಿಳಿಯದ ರೈತ ಕೇವಲ ನ್ಯಾಯಯುತ ಬೆಲೆಯೊಂದನ್ನು ಬೇಡುತ್ತಲೇ ಇದ್ದಾನೆ ಎಂದರು. ಉಪನ್ಯಾಸಕಿ ಜಯಶ್ರೀ ಮಾತನಾಡಿ, ಆತ್ಮ ಎಂಬ ಪದವು ಸಾಮಾನ್ಯವಾಗಿ ವೈಯಕ್ತಿಕ ಆತ್ಮವನ್ನು ಸೂಚಿಸುತ್ತದೆ, ಆದರೆ ಪರಮಾತ್ಮ ಎಂಬ ಪದವು ಮಿತಿಯಿಲ್ಲದ ಜೀವನ, ಮಿತಿಯಿಲ್ಲದ ಪ್ರಜ್ಞೆ, ಮಿತಿಯಿಲ್ಲದ ಜಾಗದಲ್ಲಿ ಮಿತಿಯಿಲ್ಲದ ವಸ್ತುವನ್ನು ವ್ಯಕ್ತಪಡಿಸುತ್ತದೆ, ಇದು ಎಲ್ಲಾ ಆತ್ಮಗಳ ಆತ್ಮ ಅಥವಾ ಪರಮಾತ್ಮ ಅಥವಾ ಸಾರ್ವತ್ರಿಕ ಸ್ವಯಂ ಎಂದು ಅರ್ಥೈಸುತ್ತದೆ. ಬದುಕಿನಲ್ಲಿ ಸಮಯಕ್ಕಿರುವ ಮಹತ್ವ ಇನ್ಯಾವುದಕ್ಕೂ ಇಲ್ಲ

ಗಮನಿಸಿ ನೋಡಿ ಕಳೆದುಹೋದ ಸಂಪತ್ತು, ಘನತೆ ಇತ್ಯಾದಿಗಳನ್ನು ಮರಳಿ ಪಡೆದುಕೊಳ್ಳುವ ಅವಕಾಶವಿದೆ. ಆದರೆ ವೇಳೆಯನ್ನು ಒಮ್ಮೆ ಕಳೆದುಕೊಂಡರೆ ಎಂದಿಗೂ ಮರಳಿ ಪಡೆಯಲು ಸಾಧ್ಯವಿಲ್ಲ. ಹೀಗಾಗಿ ಜಗತ್ತಿನಲ್ಲಿ ಅತಿಹೆಚ್ಚು ಬೆಲೆಬಾಳುವ ಕರೆನ್ಸಿ ಯಾವುದು ಎಂದರೆ ಅದು ಡಾಲರ್, ಯೆನ್, ಯುರೋ ಅಥವಾ ಪೌಂಡ್ ಅಲ್ಲವೇ ಅಲ್ಲ; ಅದು ನಮ್ಮ ಸಮಯ ಎಂದು ಹೇಳಿದರು. ಸರಿತಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಸುನೀಲಕುಮಾರ್, ಕಾಲೇಜಿನ ಪ್ರಾಂಶುಪಾಲರು ಹಾಗೂ ಶಿಬಿರದ ನಿರ್ದೇಶಕ ಶಿವರಾಜ ಬಿರಾದಾರ್, ಎನ್‌ಎಸ್‌ಎಸ್ ಅಧಿಕಾರಿ ಸಂತೋಷ, ಉಪನ್ಯಾಸಕರಾದ ಓಂಕಾರ ರೆಡ್ಡಿ ಸಲಗರ್, ರೇಣುಕಾ, ಹಾಗೂ ಶಿಬಿರಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ವಿದ್ಯಾರ್ಥಿನಿ ಪಲ್ಲವಿ ಸ್ವಾಗತಿಸಿದರು. ದುರ್ಗಾ ನಿರೋಪಿಸಿದರು. ಅಮೂಲ್ಯ ವಂದಿಸಿದರು.

# ಶಾಲೆಯಲ್ಲಿ ಶಿಕ್ಷಣದ ಜೊತೆಗೆ ಮಕ್ಕಳ ರಕ್ಷಣೆ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ವಿದ್ಯಾಶ್ರೀ ಸಂಸ್ಥೆ ಕುಕನೂರು ತಾಲೂಕಿನ 8 ಕ್ಲಸ್ಟರಗಳ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರ ಸಭೆಯನ್ನು ಮಾಡಲಾಯಿತು.

ಸಭೆಯ ಅಧ್ಯಕ್ಷತೆಯನ್ನು ಯಲಬುರ್ಗಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸೋಮಶೇಖರ ಗೌಡ ಪಾಟೀಲ್ ವಹಿಸಿದ್ದರು, ಮುಖ್ಯ ಅತಿಥಿಗಳಾಗಿ ಅಶೋಕ್ ಗೌಡರ ಕ್ಷೇತ್ರ ಸಮನ್ವಯಾಧಿಕಾರಿಗಳು,

ಖಿ ಎ ದಾನಿ ಸಹಾಯಕ ನಿರ್ದೇಶಕರು ಅಕ್ಷರ ದಾಸೋಹ, ಕುಕನೂರು ತಾಲೂಕಿನ ನೌಕರ ಸಂಘದ ಅಧ್ಯಕ್ಷರಾದ ಮಹೇಶ ಸಬರದ , ಗಿ ಖ ಬೆಣಕಲ್ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷರು ಕುಕನೂರು.

ಪೀರಸಾಬ ದಫೇದಾರ ಅಖಕ ಕುಕನೂರ ನಗರ ಇವರು ನಿರೂಪಿಸಿದರು,

ಮಾನ್ಯ ಉಪನಿರ್ದೇಶಕರಾದ ಶ್ರೀಶೈಲ್ ಬಿರಾದಾರ್ ಕೊಪ್ಪಳ ಇವರು ಎಲ್ಲಾ ಮುಖ್ಯೋಪಾಧ್ಯಾಯರನ್ನು ಉದ್ದೇಶಿಸಿ ಮಾತನಾಡಿ, ಶಾಲೆಗಳಲ್ಲಿ ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ವಿಶೇಷ ಚಟುವಟಿಕೆಗಳ ಮೂಲಕ ಕಲಿಕಾ ವ್ಯಾಪ್ತಿಗೆ ತರುವುದು, ಶಾಲೆಯಲ್ಲಿ ಮಕ್ಕಳ ರಕ್ಷಣೆ ಮಾಡುವದು, ಅಪಾರ ಐಡಿ ಜನರೇಟ್ ಮಾಡುವುದು, ಖಖಐಅ ಫಲಿತಾಂಶ ಸುಧಾರಣೆ, ಕಲಿಕಾಸರೆ ಪುಸ್ತಕಗಳ ಬಳಕೆ, ಮುಖ್ಯವಾಗಿ ಮಕ್ಕಳ ಕಲಿಕೆ ಬಗ್ಗೆ ಎಲ್ಲಾ ಶಿಕ್ಷಕರು ಶ್ರಮವಹಿಸಿ ಕೆಲಸ ಮಾಡುವಂತೆ ತಿಳಿಸಿದರು.

ಮಾನ್ಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ತಾಲೂಕ ಮಟ್ಟದ ಮುಖ್ಯೋಪಾಧ್ಯಾಯರ ಸಭೆಯಲ್ಲಿ ಶಾಲೆಗಳ ಶೈಕ್ಷಣಿಕ ಗುಣಮಟ್ಟ ಎಸ್ ಎಸ್ ಎಲ್ ಸಿ ಫಲಿತಾಂಶ ಸುಧಾರಣೆ ಮಕ್ಕಳ ರಕ್ಷಣೆ ಆಧಾರ್ ವೆರಿಫಿಕೇಶನ್ ಅಪಾರ್ ಐಡಿ ಹೀಗೆ ಸಾಕಷ್ಟು ವಿಷಯಗಳ ಬಗ್ಗೆ ಮಾನ್ಯ ಕ್ಷೇತ್ರಾಧಿಕಾರಿಗಳು ಮಾರ್ಗದರ್ಶನ ನಿಡಿದರು.

ದಿನಾಂಕ 07.01.2025 ರಂದು ಮಾನ್ಯ ಜಿಲ್ಲಾಧಿಕಾರಿಗಳ ಕಾರ್ಯಾಲಯ ಕೊಪ್ಪಳದಲ್ಲಿ ನಡೆದ ಯುನುಸ್ಕೋ ಸಂಸ್ಥೆಯ ಅಡಿಯಲ್ಲಿ ನಡೆದ ಶಾಲೆಯಲ್ಲಿದೆ ಮಕ್ಕಳ ಶಿಕ್ಷಣದ ಜಚೊತೆಗೆ ರಕ್ಷಣೆ ಎಂಬ ಘೋಷವಾಕ್ಯದಲ್ಲಿ ಶಾಲೆಯಲ್ಲಿ ಓದುತ್ತಿರುವ ಎಲ್ಲಾ ಮಕ್ಕಳ ಮಾನಸಿಕ ದೈಹಿಕ ರಕ್ಷಣೆ ಜೊತೆಗೆ ಲೈಂಗಿಕ ಕಿರುಕುಳದಿಂದ ಮಕ್ಕಳ ಮನಸ್ಸಿನ ಮೇಲಾಗುವ ದುಷ್ಪರಿಣಾಮಗಳ ಬಗ್ಗೆ ಮತ್ತು ಅಂತಹ ಪ್ರಕರಣಗಳು ನೆಡಿಯಬಾರದು ಎಂಬ ಆದೇಶವನ್ನು ಎಲ್ಲಾ ಮುಖ್ಯೋಪಾಧ್ಯಾಯರಿಗೂ ತಿಳುವಳಿಕೆ ನೀಡಿದರು.

ಬಸವರಾಜ ಅಂಗಡಿ ಃಖಕ ಗಳು ಪರೀಕ್ಷಾ ಪೇ ಚರ್ಚಾ ಮಾನ್ಯ ಪ್ರಧಾನಮಂತ್ರಿಗಳ ಪರೀಕ್ಷೆಗೆ ಸಂಬಂಧಿಸಿದ ಕಾರ್ಯಕ್ರಮ, ಇದರ ನೋಂದಣಿಯನ್ನು ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಮಾಡಿಕೊಳ್ಳುವ ವಿಧಾನವನ್ನು ಪ್ರತ್ಯಕ್ಷಿಕೆ ಮೂಲಕ ತೋರಿಸಿ 70 ಶಿಕ್ಷಕರ ನೋಂದಣಿ ಕಾರ್ಯವನ್ನು ಮಾಡಿಸಿದರು.

ಮಂಜುನಾಥಯ್ಯ ತೆಗ್ಗಿನಮನಿ ಅಖಕ ಯಡಿಯಾಪುರ ಇವರ ಶಾಲೆಯಲ್ಲಿದೆ ಶಿಕ್ಷಣದ ಜೊತೆಗೆ ಮಕ್ಕಳ ರಕ್ಷಣೆ ಎಂಬ ವಿಷಯವನ್ನು ಸಿಬ್ಬಂದಿ ಭದ್ರತಾ ಪ್ರಮಾಣ ಪತ್ರ, ಮಕ್ಕಳ ಬದ್ಧತಾ ಪ್ರಮಾಣ ಪತ್ರ, 1098 ಶಾಲಾ ಗೋಡೆ ಬರಹ, ಮಕ್ಕಳ ರಕ್ಷಣಾ ನೀತಿ ಕುರಿತು ಪ್ರಾತ್ಯಕ್ಷಿಕೆ ಮೂಲಕ ವಿವರಿಸಿದರು.

ಮಂಜುನಾಥ ಮಟ್ಟಿ ಅಖಕ ತಳಕಲ್ ಇವರು ಆಧಾರ ವೆರಿಫಿಕೇಶನ್, ಅಪಾರ್ ಐಡಿ ಜನರೇಟ್ ಮಾಡುವ ವಿಧಾನವನ್ನು ಪ್ರತ್ಯಕ್ಷಿಕೆ ಮೂಲಕ ಹಾಗೂ ಮುಖ್ಯೋಪಾಧ್ಯಾಯರು ಎದುರಿಸುವ ಸಮಸ್ಯೆಗಳ ಬಗ್ಗೆ ಚರ್ಚಿಸಿ ಮಾಹಿತಿ ತಿಳಿಸಿದರು.

ಈ ಸಭೆಯಲ್ಲಿ ಃಖಕ ಗಳಾದ ಮಹೇಶ ಅಸೂಟಿ, ಶಿವಪ್ಪ ಉಪ್ಪಾರ, ಅಖಕ ಗಳಾದ ಪೀರಸಾಬ ದಫೇದಾರ, ದೇವೇಂದ್ರಪ್ಪ ಭಗನಾಳ, ರವಿ ಮಳಗಿ,

ಖಾದರಭಾಷಾ ಸೋಂಪೂರ, ಮಂಜುನಾಥ ಮಟ್ಟಿ, ಕುಕನೂರು ತಾಲೂಕಿನ ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಉಪಸ್ಥಿತರಿದ್ದರು.

ಶಿರೂರ ಪಪಂ ಬಜೆಟ್ ತಯಾರಿ ಸಭೆ

# ಪಟ್ಟಣದ ಅಭಿವೃದ್ಧಿಗೆ ಸಾರ್ವಜನಿಕರ ಸಹಕಾರ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.9–ಕೇಂದ್ರ ಹಾಗೂ ರಾಜ್ಯ ಸರಕಾರಗಳ ಅನುದಾನ ಹಾಗೂ 15 ನೇ ಹಣಕಾಸಿನ ಯೋಜನೆಯಡಿ ಪಟ್ಟಣದ ಅಭಿವೃದ್ಧಿಗೆ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು. ಇದಕ್ಕೆ ಸಾರ್ವಜನಿಕರ ಸಹಕಾರವೂ ಅಗತ್ಯವಾಗಿದೆ ಎಂದು ಶಿರೂರ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಶಿವಾನಂದ ಆಲೂರ ಹೇಳಿದ್ದಾರೆ.

ಪಟ್ಟಣ ಪಂಚಾಯತಿ ಸಭಾಭವನದಲ್ಲಿ ಮಂಗಳವಾರ ನಡೆದ 2025–26 ನೇ ಸಾಲಿನ ಬಜೆಟ್ ತಯಾರಿಸುವ ಕುರಿತು ಸಾರ್ವಜನಿಕರ ಸಲಹೆ, ಅಭಿಪ್ರಾಯ ಸಂಗ್ರಹದ ಸಭೆಯಲ್ಲಿ ಮಾತನಾಡಿದ ಅವರು, ಸರಕಾರದ ಅನುದಾನದಲ್ಲಿಯೇ ಇಡೀ ಪಟ್ಟಣದ ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಆಗುವುದಿಲ್ಲ. ಜೊತೆಗೆ ಸಾರ್ವಜನಿಕರ ಸಹಕಾರವೂ ಬಹಳಷ್ಟು ಅಗತ್ಯವಾಗಿದೆ ಎಂದರು.

ನೀರು, ಮನೆ ಕರ, ಕಟ್ಟಡ ಪರವಾನಿಗೆ ಸೇರಿ ಎಲ್ಲ ಆದಾಯ ಕರಗಳನ್ನು ಪಟ್ಟಣದ ಸಾರ್ವಜನಿಕರು ಸ್ವಯಂ ಪ್ರೇರಿತರಾಗಿ ಸಂದಾಯ ಮಾಡಬೇಕು. ಆ ಮೂಲಕ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಮುಖ್ಯಾಧಿಕಾರಿ ಶಿವಾನಂದ ಆಲೂರ ತಿಳಿಸಿದರು.

ಸರಕಾರದ ಯೋಜನೆಗಳನ್ನು ಜನರಿಗೆ ಸರ್ಮಪಕವಾಗಿ ತಲುಪಿಸುವ ಕೆಲಸ ಮಾಡಲಾಗುತ್ತಿದೆ. ಬರುವ ಬೇಸಿಗೆ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಾರದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಅವಶ್ಯವಿರುವ ಕಡೆ ಟ್ಯಾಂಕರ್ ಮೂಲಕ ಕುಡಿವ ನೀರು ಪೂರೈಸುವ ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದ ಆಲೂರ, ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಪಟ್ಟಣ ಪಂಚಾಯತಿಯಿಂದ 30 ಸಾವಿರ ರೂ. ಸಹಾಯಧನ ನೀಡಲಾಗುವುದು ಎಂದರು.

ಪಟ್ಟಣ ಪಂಚಾಯತಿ ವ್ಯವಸ್ಥಾಪಕಾಧಿಕಾರಿ ಯು.ಜಿ.ವರದಪ್ಪನವರ ಕಳೆದ ವರ್ಷದ ಬಜೆಟ್ ಮಾಹಿತಿಯನ್ನು ತಿಳಿಸಿದರು. ಕುಡಿಯುವ, ನೀರು, ಬೀದಿ ದೀಪ, ರಸ್ತೆ ಅಭಿವೃದ್ಧಿ, ಚರಂಡಿ ಹಾಗೂ ಸಶ್ಮಾನ ಹಾಗೂ ಕೆರೆಗಳ ಅಭಿವೃದ್ಧಿ ಕುರಿತಾಗಿ ಮತ್ತು ಮುಕ್ತಿವಾಹನ ಖರೀದಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ನಾಮ ನಿರ್ದೇಶಿತ ಸದಸ್ಯರಾದ ಜಗದೀಶ ದೇಸಾನಿ, ಹನಮಂತ ಆಡಿನ, ಸಿದ್ದಪ್ಪ ಗಾಳಿ ಹಾಗೂ ಹನಮಂತ ಹಳ್ಳಿಯವರ, ಹನಮಂತ ಚನ್ನದಾಸರ, ಗ್ರಾಮ ಲೆಕ್ಕಾಧಿಕಾರಿ, ಗ್ರಾ.ಪಂ ಮಾಜಿ ಅಧಕ್ಷ ರಂಗಪ್ಪ ಮಳ್ಳಿ, ರಾಮಣ್ಣ ಕೋಟಿಕಲ್, ಸಂಗಪ್ಪ ಕಟಗಿ, ರಾಮನಗೌಡ ಮಾಚಾ, ಅಣ್ಣದಾನಯ್ಯ ಎಮ್ಮಿಮಠ, ಸುರೇಶ ರಾಜೂರ, ಮುತ್ತಣ್ಣ ಬಿಲ್ಲಾರ, ಕಲ್ಲಪ್ಪ ಭಗವತಿ, ಬಂದಗಿಸಾಬ ಜನ್ನತಖಾನ್ ಸೇರಿ ಅನೇಕ ಜನ ಸಾರ್ವಜನಿಕರು ಸಭೆಯಲ್ಲಿ ಇದ್ದರು.

# ಯುವನಿಧಿ ವಿಶೇಷ ನೋಂದಣಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.9–ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ಜನವರಿ 20 ವರೆಗೆ ಜಿಲ್ಲೆಯ ಪದವಿ ಕಾಲೇಜ ಹಾಗೂ ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಮಹಾವಿದ್ಯಾಲಯಗಳಲ್ಲಿ ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

2024ರ ಸಾಲಿನಲ್ಲಿ ತೇರ್ಗಡೆ ಹೊಂದಿರುವ ಪದವಿ, ತಾಂತ್ರಿಕ ಪದವಿ, ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಪದವೀಧರರಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ರೂ.135 ಜಿಲ್ಲಾಡಳಿತ ಭವನ, ನವನಗರ ಬಾಗಲಕೋಟೆ ಇಲ್ಲಿ ಅರ್ಹ ಅಭ್ಯರ್ಥಿಗಳಿಗೆ ಉಚಿತವಾಗಿ ಯುವನಿಧಿ ಅರ್ಜಿಗಳನ್ನು ಹಾಕಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354–235337 ಹಾಗೂ ಮೊಬೈಲ್ ನಂ. 7676692029ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ರೀಡಾಪಟುಗಳಿಗೆ ಪ್ರಯಾಣ ಭತ್ಯೆಗಾಗಿ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.9–ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಪ್ರಸಕ್ತ ಸಾಲಿನಲ್ಲಿ ಭಾರತ ಸರಕಾರದಿಂದ ಮಾನ್ಯತೆ ಪಡೆದ ಅಧಿಕೃತ ಕ್ರೀಡಾ ಫೆಡರೇಶನ್‌ಗಳು ಆಯೋಜಿಸಿರುವ ಕ್ರೀಡಾಕೂಟಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿ ಭಾಗವಹಿಸಿದ ಜಿಲ್ಲೆಯ ಕ್ರೀಡಾಪಟುಗಳಿಗೆ ನಿಯಮಾನುಸಾರ ಒಬ್ಬರಿಗೆ ಗರಿಷ್ಟ 5 ಸಾವಿರ ರೂ. ಗಳಂತೆ ಪ್ರಯಾಣ ಭತ್ಯೆ ಪಾವತಿಸಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಸಹಾಯಕ ನಿರ್ದೇಶಕರ ಕಚೇರಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಜಿ ನಮೂನೆ ಪಡೆದುಕೊಂಡು ಭರ್ತಿ ಮಾಡಿದ ಅರ್ಜಿಯೊಂದಿಗೆ ಬ್ಯಾಂಕ್ ಪಾಸ್ ಬುಕ್ ಝರಾಕ್ಸ್ ಪ್ರತಿ, ರಾಷ್ಟ್ರ ಅಥವಾ ಅಂತರರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಪ್ರಯಾಣ ಬೆಳೆಸಿದ ಮೂಲ ಟಿಕೆಟ್‌ಗಳು, ಆಧಾರ ಕಾರ್ಡ ಹಾಗೂ ಕ್ರೀಡಾಕೂಟಗಳಲ್ಲಿ ಭಾಗವಹಿಸಿದ ಪ್ರಮಾಣ ಪತ್ರ ಹಾಗೂ ಪದಕ ಪಡೆದ ಪ್ರಮಾಣ ಪತ್ರದೊಂದಿಗೆ ಫೆಬ್ರವರಿ 1ರೊಳಗಾಗಿ ಸಲ್ಲಿಸುವಂತೆ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354–235896 ಹಾಗೂ ಮೊಬೈಲ್ ನಂ. 9945284771ಗೆ ಸಂಪರ್ಕಿಸಬಹುದಾಗಿದೆ.

# ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕ್ಯಾಲೆಂಡರ್ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜ.09–ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ರಾಯಚೂರು ಜಿಲ್ಲಾ ಶಾಖೆಯಿಂದ ಹೊರ ತಂದಿರುವ 2025ನೇ ವರ್ಷದ ಕ್ಯಾಲೆಂಡರನ್ನು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಬಿಡುಗಡೆ ಮಾಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಭಾಂಗಣದಲ್ಲಿ ಜನವರಿ 9ರಂದು ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಕ್ಯಾಲೆಂಡರ್‌ಗಳಿಂದ ಹಬ್ಬಗಳು, ವಿಶೇಷ ದಿನಗಳು, ಮಹಾನ್ ವ್ಯಕ್ತಿಗಳ ಜಯಂತಿ ಸೇರಿದಂತೆ ಹಲವಾರು ಉಪಯುಕ್ತ ಮಾಹಿತಿಗಳು ಸಿಗುತ್ತದೆ.


ಆದ್ದರಿಂದ ಪ್ರತಿಯೊಬ್ಬರು ಕ್ಯಾಲೆಂಡರ್‌ಗಳನ್ನು ಬಳಕೆ ಮಾಡಬೇಕು ಎಂದರು.

ಜಿಲ್ಲಾ, ತಾಲೂಕು ಹಾಗೂ ಗ್ರಾಮೀಣ ಭಾಗದ ಎಲ್ಲ ಸರ್ಕಾರಿ ನೌಕರರು ಸರ್ಕಾರಿ ಯೋಜನೆಗಳ ಕುರಿತು ಜನಸಾಮಾನ್ಯರಿಗೆ ಮಾಹಿತಿ ನೀಡುವ ಮೂಲಕ ಜನಸಾಮಾನ್ಯರಿಗೆ ಆಸರೆಯಾಗಬೇಕೆಂದರು.

# ಕಲಾದಗಿ ಪ್ರವಾಸಿ ಮಂದಿರ: ಕೊಠಡಿ ನಿರ್ಮಾಣಕ್ಕೆ 3ಕೋಟಿ ರೂ.–ಪಾಟೀಲ

ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಜ.9–ತಾಲೂಕಿನ ಕಲಾದಗಿ ಗ್ರಾಮದ ಪ್ರವಾಸಿ ಮಂದಿರದ ಆವರಣದಲ್ಲಿ ಹೆಚ್ಚುವರಿ ಎರಡು ಕೊಠಡಿಗಳನ್ನು ನಿರ್ಮಾಣ ಮಾಡಲು 3 ಕೋಟಿ ರೂ.ಗಳ ಲೋಕೋಪಯೋಗಿ ಇಲಾಖೆ ಮಂಜೂರು ಮಾಡಿದೆ ಎಂದು ಶಾಸಕ ಜೆ.ಟಿ.ಪಾಟೀಲ ತಿಳಿಸಿದ್ದಾರೆ.



ಆಧುನಿಕ ಶೈಲಿಯಲ್ಲಿ ಆಕರ್ಷಕ ಶೈಲಿಯ ಕೊಠಡಿ ನಿರ್ಮಾಣಗೊಳಿಸಲಾಗುತ್ತಿದ್ದು, ಟೆಂಡರ್ ಸೇರಿದಂತೆ ಇನ್ನಿತರ ಪ್ರಕ್ರಿಯೆಗಳನ್ನು ಶೀಘ್ರಪೂರ್ಣಗೊಳಿಸಿ ಕಾಮಗಾರಿ ಆರಂಭಿಸಲು ಸೂಚಿಸಲಾಗಿದೆ ಎಂದರು.

ಈಗಿರುವ ಕಟ್ಟಡ ಪಾರಂಪರಿಕವಾಗಿರುವುದರಿಂದ ಅದನ್ನು ಇದ್ದ ರೀತಿಯಲ್ಲಿಯೇ ಉಳಿಸಿಕೊಳ್ಳಲಾಗುವುದು ಜೊತೆ–ಗೆ ವಿಶಾಲವಾಗಿರುವ ಪ್ರವಾಸಿ ಮಂದಿರದ ಆವರಣದಲ್ಲಿ ಉದ್ಯಾನ ನಿರ್ಮಿಸಲಾಗುವುದು ಎಂದು ಪಾಟೀಲ ತಿಳಿಸಿದರು.

# ಜ.11 ಸಂವಿಧಾನ ಸನ್ಮಾನ, ಪುಸ್ತಕ ಲೋಕಾರ್ಪಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.9–ಸಿಟಿಜಿನ್ಸ್ ಫಾರ್ ಸೋಷಿಯಲ್ ಜಸ್ಟೀಸ್ ವತಿಯಿಂದ ಸಂವಿಧಾನ ಸನ್ಮಾನ ಮತ್ತು ಪುಸ್ತಕ ಲೋಕಾರ್ಪಣೆ ಕಾರ್ಯಕ್ರಮ ಜ.11ರಂದು ನಗರದ ಬಸವೇಶ್ವರ ಆಡಿಟೋರಿಯಂನಲ್ಲಿ ಆಯೋಜಿಸಲಾಗಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ ಹೇಳಿದರು.

ಗುರುವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದಿನ ಸಮಾರಂಭದ ಸಾನ್ನಿಧ್ಯವನ್ನು ಗುಳೇದಗುಡ್ಡದ ಅಭಿನವ ಕಾಡಸಿದ್ದೇಶ್ವರ ಮಹಾಸ್ವಾಮಿಗಳು ವಹಿಸುವರು. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕಾರ್ಯಕ್ರಮ ಉದ್ಘಾಟಿಸುವರು. ಚಿತ್ರದುರ್ಗದ ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವ ಎನ್.ಮಹೇಶ, ಪುಸ್ತಕದ ಲೇಖಕರಾದ ವಿಕಾಸಕುಮಾರ ಪಿ. ಅತಿಥಿಗಳಾಗಿ ಆಗಮಿಸುವರು. ಕಾರ್ಯಕ್ರಮದಲ್ಲಿ ಪಕ್ಷದ ಜಿಲ್ಲೆಯ ಜನಪ್ರತಿನಿಧಿಗಳು ಭಾಗವಹಿಸುವರು ಎಂದು ತಿಳಿಸಿದರು.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜು ನಾಯ್ಕರ, ಉಪಾಧ್ಯಕ್ಷ ಮಲ್ಲಯ್ಯ ಮೂಗನೂರಮಠ, ಶಿವಾನಂದ ಟವಳಿ, ಮುತ್ತಣ್ಣ ಬೆಣ್ಣೂರ, ಯಲ್ಲಪ್ಪ ಬೆಂಡಿಗೇರಿ, ಯಲ್ಲಪ್ಪ ನಾರಾಯಣಿ, ಶಿವಾನಂದ ಸುರಪುರ ಉಪಸ್ಥಿತರಿದ್ದರು.

# ವಸತಿ ನಿಲಯಗಳಿಗೆ ಕ್ರೀಡಾಪಟುಗಳ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.9–ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ 2025–26ನೇ ಸಾಲಿಗಾಗಿ ಜಿಲ್ಲಾ ಕ್ರೀಡಾ ವಸತಿ ನಿಲಯಕ್ಕೆ ಕಿರಿಯರ ವಿಭಾಗದಲ್ಲಿ ಹಾಕಿ, ಕುಸ್ತಿ ಮತ್ತು ಸೈಕ್ಲಿಂಗ್ ಕ್ರೀಡೆಗಳಲ್ಲಿ ಹಾಗೂ ರಾಜ್ಯದ ಕ್ರೀಡಾ ಶಾಲೆ ಮತ್ತು ವಸತಿ ನಿಲಯಗಳಿಗೆ ಕಿರಿಯರ ಮತ್ತು ಹಿರಿಯರ ವಿಭಾಗದಲ್ಲಿ ಅಥ್ಲೆಟಿಕ್ಸ್, ಹಾಕಿ, ಬಾಸ್ಕೆಟ್‌ಬಾಲ್, ಜಿಮ್ನಾಸ್ಟಿಕ್, ವಾಲಿಬಾಲ್, ಫುಟ್‌ಬಾಲ್, ಜುಡೋ, ಕುಸ್ತಿ, ಫೈನ್ಸಿಂಗ್ ಆರ್ಚರಿ ಮತ್ತು ಸೈಕ್ಲಿಂಗ್ ಕ್ರೀಡೆಗಳಲ್ಲಿ ಅಭ್ಯರ್ಥಿಗಳ ಆಯ್ಕೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ಹಾಗೂ ವೈಜ್ಞಾನಿಕವಾಗಿ ನಡೆಸಲು ತೀರ್ಮಾನಿಸಲಾಗಿದೆ.

ಜನವರಿ 13ರಂದು ಬನಹಟ್ಟಿಯ ಎಸ್.ಆರ್.ಎ ಕಾಲೇಜ, ಜಮಖಂಡಿ ತಾಲೂಕಾ ಕ್ರೀಡಾಂಗಣ, 15ರಂದು ಮುಧೋಳ ರನ್ನ ಕ್ರೀಡಾಂಗಣ, ಬೀಳಗಿ ತಾಲೂಕಾ ಕ್ರೀಡಾಂಗಣ, 16ರಂದು ಗುಳೇದಗುಡ್ಡ ಸರಕಾರಿ ಪದವಿ ಪೂರ್ವ ಕಾಲೇಜ, ಬಾದಾಮಿ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಅಕಾಡಮಿ, 17ರಂದು ಹುನಗುಂದ ತಾಲೂಕಾ ಕ್ರೀಡಾಂಗಣ, ಇಳಕಲ್ಲ ವಿಜಯ ಮಹಾಂತೇಶ ಕಾಲೇಜ ಮೈದಾನ, 18ರಂದು ಬಾಗಲಕೋಟೆ ಜಿಲ್ಲಾ ಕ್ರೀಡಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ.

ಅಲ್ಲದೇ ಜಿಲ್ಲಾ ಕ್ರೀಡಾ ವಸತಿ ನಿಲಯದ ಕಿರಿಯ, ಹಿರಿಯರ ವಿಭಾಗದಲ್ಲಿ ಬಾಲಕ, ಬಾಲಕಿಯರ ಜಿಲ್ಲಾ ಮಟ್ಟದ ದೈಹಿಕ ಪರೀಕ್ಷೆಯನ್ನು ಜನವರಿ 21 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಸೈಕ್ಲಿಂಗ್ ತರಬೇತುದಾರ ಅನಿತಾ ನಿಂಬರಗಿ (9449959064), ಕುಸ್ತಿ ತರಬೇತುದಾರ ಕಾಡೇಶ ನ್ಯಾಮಗೌಡ (8792507012), ಹಾಕಿ ತರಬೇತುದಾರ ರಾಹುಲ ಕಟ್ಟೆ (8277347448), ಸೈಕ್ಲಿಂಗ್ ತರಬೇತುದಾರ ಶ್ರೀಶೈಲ ಲಾಯನವರ (9480210536)ಗೆ ಸಂಪರ್ಕಿಸಬಹುದಾಗಿದೆ.

# ಭೂ ದಾಖಲೆಗಳ ಗಣಕೀಕರಣ ಕಾರ್ಯ ಜಿಲ್ಲೆಯಲ್ಲಿ ಸರಿಯಾಗಿ ಮಾಡಿ – ಶಿವರಾಜ ತಂಗಡಗಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಭೂ ದಾಖಲೆಗಳ ಗಣಕೀಕರಣ ಕಾರ್ಯ ಕೊಪ್ಪಳ ಜಿಲ್ಲೆಯಲ್ಲಿ ಸರಿಯಾಗಿ ಮಾಡಿ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು.

ಅವರು ಬುಧವಾರ ಬೆಂಗಳೂರಿನ ತಮ್ಮ ಕಛೇರಿಯಿಂದ ಗೂಗಲ್ ಮೀಟ್ ಮೂಲಕ ಭೂ ಸುರಕ್ಷಾ ಯೋಜನೆ ಅಡಿ ಕೊಪ್ಪಳ ಜಿಲ್ಲೆಯ ಎಲ್ಲಾ ತಾಲೂಕಿನ ಭೂ ದಾಖಲೆಗಳ ಗಣಕೀಕರಣ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು.

ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿ ಭೂ ದಾಖಲೆಗಳ ಗಣಕೀಕರಣ ಸರಿಯಾಗಿ ನಡೆಯಬೇಕು. ವಿಶೇಷವಾಗಿ ನೀರಾವರಿ ಭಾಗದಲ್ಲಿ ಇವುಗಳ ಸಮಸ್ಯೆಗಳು ಹೆಚ್ಚಾಗಿ ಕಂಡು ಬರುತ್ತವೆ. ಕೊಪ್ಪಳ ತಹಶಿಲ್ದಾರ ಕಛೇರಿಯಿಂದ ತಾಲ್ಲೂಕು ಕಛೇರಿ. ಸರ್ವೆ ಮತ್ತು ನೊಂದಣಿ ಇಲಾಖೆಗಳ ಎಲ್ಲಾ ಭೂ ದಾಖಲೆಗಳ ಡಿಜಿಟಲೀಕರಣದಿಂದ ಹಳೆಯ ದಾಖಲಾತಿಗಳ ಸಂರಕ್ಷಣೆ ಮಾಡಲು ಅನುಕೂಲವಾಗುತ್ತದೆ ಎಂದರು.

ಇದರಿಂದ ಹಳೆಯ ದಾಖಲೆಗಳ ಸಂರಕ್ಷಣೆ ಹಾಗೂ ಕಳುವಾಗಲು. ತಿದ್ದಲು ಅಸಾಧ್ಯ. ನೇರವಾಗಿ ಡಿಜಿಟಲ್ ಮಾಧ್ಯಮ ಮೂಲಕ ಭೂ ದಾಖಲೆ ಪಡೆದುಕೊಳ್ಳುವ ಸೌಲಭ್ಯ ಜನರಿಗೆ ಇರಲಿದೆ. ವಿಳಂಬ. ಅಡೆ ತಡೆಗಳನ್ನು ಆಲಿಸಿ. ತ್ವರಿತ ಆಡಳಿತ ಸೇವೆಯನ್ನು ಜನರಿಗೆ ಒದಗಿಸುವುದು ಇದರ ಉದ್ದೇಶವಾಗಿದೆ. ಕೊಪ್ಪಳ ಕಾರಟಗಿಯಲ್ಲಿ ಮೊದಲಿಗೆ ಪಾಯಲೇಟ ಬೇಸ ಮಾಡಿರುವುದು ಯಶಸ್ವಿಯಾಗಿದೆ ಅಲ್ಲಿ ಚೆನ್ನಾಗಿ ಮಾಡುತ್ತಿದ್ದಾರೆ ಅದರಂತೆ ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿ ಈ ಕೆಲಸ ನಡೆಯಬೇಕೆಂದು ಹೇಳಿದರು.

ಭೂ ದಾಖಲೆಗಳ ಗಣಕೀಕರಣ–ಕ್ಕೆ ಥಂಬ್ ನೀಡಿದ ನಂತರ ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿ ಭೂ ದಾಖಲೆಗಳ ಗಣಕೀಕರಣ ನಡೆಯುತ್ತಿದೆ. 3 ಲಕ್ಷಕಿಂತ ಹೆಚ್ಚಿನ ಫೈಲುಗಳು ಆಗುತ್ತವೆ. ಆನಲೈನ ಮೂಲಕ ಭೂ ದಾಖಲೆಗಳ ಡಿಜಿಟಲೀಕರಣ ಮಾಡಲಾಗುತ್ತಿದೆ. ಭೂ ದಾಖಲೆಗಳ ಗಣಕೀಕರಣಕ್ಕೆ ಸಮಸ್ಯೆಗಳಾಗದಂತೆ ಪ್ರತಿ ತಾಲೂಕಿನಲ್ಲಿ 6 ಜನ ಆಪರೇಟರ. 3 ಸ್ಕ್ಯಾನರ. ಯುಪಿಎಸ್ ಸೇರಿದಂತೆ ಇತರೆ ಗಣಕೀಕರಣಕ್ಕೆ ಬೇಕಾಗುವ ಎಲ್ಲಾ ಉಪಕರಣಗಳನ್ನು ನೀಡಲಾಗಿದೆ. ಈ ಕಾರ್ಯ ರಾಜ್ಯದ ಎಲ್ಲಾ ಕಡೆಯು ನಡೆಯುತ್ತಿದೆ ಎಂದು ಜಿಲ್ಲಾಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ. ಕೊಪ್ಪಳ ತಹಶಿಲ್ದಾರ ವಿಠಲ ಚೌಗಲಾ. ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯ ಕೃಷ್ಣಮೂರ್ತಿ ದೇಸಾಯಿ. ಜಿಲ್ಲಾ ಎಲ್ಲಾ ತಾಲೂಕಿನ ತಹಶಿಲ್ದಾರರು. ಉಪ ತಹಶಿಲ್ದಾರರು. ಭೂ ದಾಖಲೆಗಳ ಗಣಕೀಕರಣ ಸಿಬ್ಬಂದಿಗಳು ಸೇರಿದಂತೆ ಇತರರು ಗೂಗಲ್ ಮೀಟ್ ಮೂಲಕ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಶಹಪೂರ ಗ್ರಾಮದಲ್ಲಿ 24X7 ಕುಡಿಯುವ ನೀರು ಸರಬರಾಜು

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.9: ಜಲಜೀವನ್ ಮಿಷನ್ ಯೋಜನೆಯಡಿ ಕೊಪ್ಪಳ ಜಿಲ್ಲೆಯ ಬೇವಿನಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಶಹಪೂರ ಗ್ರಾಮವನ್ನು 24*7 ಕುಡಿಯುವ ನೀರು ಸರಬರಾಜು ಗ್ರಾಮವೆಂದು ಬುಧವಾರ ಘೋಷಣೆ ಮಾಡಲಾಯಿತು.

ಕೊಪ್ಪಳ ಸಂಸದರಾದ ಕೆ.ರಾಜಶೇಖರ್ ಹಿಟ್ನಾಳ ಅವರು ಕಾರ್ಯಕ್ರಮ ಉದ್ಘಾಟಿಸಿ, ಶಹಾಪುರ ಗ್ರಾಮವು ದಿನದ 24ಗಂಟೆ ನೀರು ಸರಬರಾಜು ವ್ಯವಸ್ಥೆಯನ್ನು ಹೊಂದಿದೆ ಎಂದು ಘೋಷಿಸಿದರು. ಬಳಿಕ ಮಾತನಾಡಿ, ಜಿಲ್ಲೆಯಲ್ಲಿ ಸುಮಾರು 700 ಗ್ರಾಮಗಳಲ್ಲಿ ಜೆ.ಜೆ.ಎಂ. ಕಾಮಗಾರಿ ಅನುಷ್ಠಾನಗೊಳಿಸಲಾಗಿದೆ.ಎಲ್ಲಾ ಕಾಮಗಾರಿಗಳು ಸರಿಯಾದ ಕ್ರಮದಲ್ಲಿ ಅನುಷ್ಠಾನವಾಗುತ್ತಿಲ್ಲ ಎಂಬ ಕೂಗುಗಳು ಕೇಳಿ ಬರುತ್ತಿದ್ದವು. ಈ ಸಮಸ್ಯೆಗಳನ್ನು ಹೋಗಲಾಡಿಸಲು ವಿಶೇಷಕ್ರಮ ಕೈಗೊಂಡು ಪ್ರತಿ ಗ್ರಾಮದಲ್ಲಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಸಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ಮೊದಲ ಬಾರಿಗೆ ಕೋಳೂರು ಗ್ರಾಮವನ್ನು 24*7 ನೀರು ಸರಬರಾಜು ಗ್ರಾಮ ಎಂದು ಘೋಷಣೆ ಮಾಡಲಾಗಿದೆ. ಇದರ ಭಾಗವಾಗಿ ಶಹಾಪುರನ್ನು ಎರಡನೆಯ ಗ್ರಾಮವಾಗಿ ಘೋಷಿಸಿರುವುದಕ್ಕೆ ಅತ್ಯಂತ ಸಂತೋಷವಾಗುತ್ತಿದೆ. ಎಲ್ಲಾ ಗ್ರಾಮಗಳಲ್ಲಿ ದಿನದ 24ಗಂಟೆ ನೀರು ಸರಬರಾಜು ಮಾಡಬೇಕಾಗಿದ್ದು,



ಸಂಬಂಧಿಸಿದ ಅಧಿಕಾರಿಗಳು ಜೆಜೆಎಂ ಕಾಮಗಾರಿಗಳನ್ನು ಗುಣಮಟ್ಟದ ಜೊತೆಗೆ ತ್ವರಿತವಾಗಿ ಪೂರ್ಣಗೊಳಿಸಲು ಮೊದಲ ಆದ್ಯತೆ ನೀಡಬೇಕು. ಈ ಹಿನ್ನೆಲೆಯಲ್ಲಿ ಪ್ರತಿ ವಾರದಲ್ಲಿ ಒಂದು ಗ್ರಾಮವನ್ನು 24*7 ಗ್ರಾಮ ಎಂದು ಘೋಷಣೆ ಮಾಡಲು ಕ್ರಮ ವಹಿಸಬೇಕು. ನೀರು ಮಿತವಾಗಿ ಬಳಸಬೇಕು ಹಾಗೂ ಈ ವ್ಯವಸ್ಥೆಯನ್ನು ನಿರಂತರವಾಗಿ ನಡೆಸಿಕೊಂಡು ಹೋಗುವಂತೆ ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಸಂಸದರು ಸೂಚನೆ ನೀಡಿದರು.

ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ಮಾತನಾಡಿ, 24*7 ನೀರು ಸರಬರಾಜು ಗ್ರಾಮ ಎಂದು ಘೋಷಣೆ ಮಾಡಲಾದ ಶಹಾಪುರ ಗ್ರಾಮದ ಗ್ರಾಮಸ್ಥರು ನೀರು ಪೋಲಾಗದಂತೆ ನೋಡಿಕೊಳ್ಳಬೇಕು. ಮಾನವ ದೈನಂದಿನ ಜೀವನಕ್ಕೆ ನೀರು ಅವಶ್ಯಕವಾಗಿರುವ ಸಂಪನ್ಮೂಲವಾಗಿದ್ದು, ನೀರನ್ನು ಮಿತವಗಿ ಬಳಕೆ ಮಾಡಿಕೊಳ್ಳಬೇಕು. ಪ್ರತಿ ಮನೆಗೆ ಕಡ್ಡಾಯವಾಗಿ ಶೌಚಾಲಯ ನಿರ್ಮಾಣ ಮಾಡಿಕೊಳ್ಳಬೇಕು. ಗ್ರಾಮದ ಸ್ವಚ್ಛತೆಗೂ ಹೆಚ್ಚಿನ ಗಮನ ನೀಡಬೇಕು ಎಂದರು.

ಜಿ.ಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಅವರು ಮಾತನಾಡಿ, ಗ್ರಾಮದ ನೀರು ಸರಬರಾಜು ಕಾರ್ಯಾಚರಣೆ ಮತ್ತು ನಿರ್ವಹಣೆಯನ್ನು ಸ್ವಸಹಾಯ ಸಂಘಗಳ ಬಳಕೆ ಮಾಡಿಕೊಂಡು ನಿರ್ವಹಿಸಬೇಕು. ನೀರಿನ ಕರ ವಸೂಲತಿಯ ಮೇಲೆ ಶೇ.10ರಷ್ಟು ಕಮಿಷನ್ ನೀಡಬೇಕು ಎಂದು ಸಲಹೆ ನೀಡಿದರು.

ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರರಾದ ಮಹೇಶ್ ಶಾಸ್ತ್ರಿ ಅವರು ಮಾತನಾಡಿ, ದಿನದ 24 ಗಂಟೆ ನೀರು ಸರಬರಾಜು ಯೋಜನೆಯಿಂದ ಪ್ರತಿ ಮನೆಗೆ ಮೀಟರ್ ಅಳವಡಿಸಲಾಗಿದ್ದು, ದಿನನಿತ್ಯ ಪ್ರತಿ ವ್ಯಕ್ತಿಗೆ 55 ಲೀಟರ್ ಶುದ್ಧ ಕುಡಿಯುವ ನೀರು ಪೂರೈಸಲಾಗುವುದು. ನೀರು ಪೂರೈಕೆ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಸ್ವಸಹಾಯ ಸಂಘಗಳ ಬಳಕೆ ಮಾಡಿಕೊಳ್ಳಲಾಗುವುದು. ಸುಸ್ಥಿರ ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿಗಳಿಗೆ ತರಬೇತಿ ನೀಡಿ ಬಲಪಡಿಸಲಾಗಿದೆ ಹಾಗೂ ಪ್ರತಿ ನಲ್ಲಿಯಿಂದ ಒಂದು ನಿಮಿಷಕ್ಕೆ 10 ಲೀಟರ್ ನೀರು ಪೂರೈಸಲಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ವಿಲಾಸ್‌ರಾವ್ ಬೋಸ್ಲೆ, ಗ್ರಾಮ ಪಂಚಾಯತ ಅಧ್ಯಕ್ಷರಾದ ತಿಪ್ಪವ್ವ ಶಿವಪ್ಪ ನಾಯಕ, ಉಪಾಧ್ಯಕ್ಷರಾದ ಮುರಳಿಧರ ಬಸಿರಾಳ, ಪಿ.ಡಿ.ಓ ಗೀತಾಕುಮಾರಿ ಧುತ್ತರಗಿ, ಬಿಲ್ ಕಲೆಕ್ಟರ್ ಬಸವರಾಜ್, ಡಿಪಿಎಂ ಶರಣು, ಬೆಂಗಳೂರ ಫೀಡ್ ಬ್ಯಾಕ್ ಫೌಂಡೇಶನ್ ರಾಜ್ಯ ಸಂಯೋಜಕ ಡಾ.ನಂದಕುಮಾರ, ಸಿಬ್ಬಂದಿ ಓಂಕಾರ, ರವಿಚಂದ್ರ ಹಾಗೂ ಶಶಿಕುಮಾರ ಸೇರಿದಂತೆ ಗ್ರಾಮ ಸದಸ್ಯರು, ಜಲಜೀವನ್ ಮಷಿನ್ ತಂಡದವರು, ಶಾಲಾ ಮಕ್ಕಳು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಬಗರ್ ಹುಕುಂ ಸಾಗುವಳಿ ಅರ್ಜಿ ಇತ್ಯರ್ಥಕ್ಕಾಗಿ ಸಭೆ



ಮಲ್ಲಮ ನುಡಿ ವಾರ್ತೆ

ಕಲಬುರಗಿ : ಜ.9:ತಾಲೂಕಿನ ಕಡಣಿ ಗ್ರಾಮದ ಬಗರ ಹುಕುಂ ಸಾಗುವಳಿ ಅರ್ಜಿಗಳನ್ನು ಇತ್ಯರ್ಥ ಕುರಿತು ಶಾಸಕ ಅಲ್ಲಮಪ್ರಭು ಪಾಟೀಲ್ ಅವರ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಸಲಾಯಿತು. ನಗರದ ತಹಶಿಲ್ದಾರರ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಸಭೆಯಲ್ಲಿ ಬಗರ ಹುಕುಂ ಸಾಗುವಳಿ ರೈತರು, ತಹಶಿಲ್ದಾರರು ಸೇರಿದಂತೆ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳು ಭಾಗವಹಿಸಿ ರೈತರಿಗೆ ಸಂಭಂದಿಸಿದ ದಾಖಲಾತಿ ನೀಡುವಂತೆ ಸೂಚಿಸಿದರು. ಈ ವೇಳೆ ಮಾತನಾಡಿದ 11ಜನ ಬಗರ ಹುಕುಂ ಅರ್ಜಿದಾರರನ್ನು ಕರೆದು ವಿಚಾರಣೆ ಮಾಡಲಾಗಿದ್ದು, ಸಂಬಂಧಿಸಿದ ಮಾಹಿತಿ ಹಾಗೂ ದಾಖಲಾತಿಗಳನ್ನು ತೆಗೆದು-ಕೊಂಡು ಜನೆವರಿ 24ನೇ ಬರಲು ತಿಳಿಸಲಾಗಿದ್ದು, ಸುಮಾರು 35ವರ್ಷಗಳ ಹಿಂದೆ ಇದ್ದವರು ಯಾರು ಬದುಕುಳಿದಿಲ್ಲದ ಕಾರಣ ಅವರ ಸಂಬಂಧಿಕರಿಗೆ ಸೂಕ್ತ ದಾಖಲಾತಿಗಳೊಂದಿ ಬರಲು ತಿಳಿಸಲಾಗಿದೆ. ಸೂಕ್ತ ದಾಖಲಾತಿ ದೊರೆತ ನಂತರ ಅರ್ಜಿಗಳ ಇತ್ಯರ್ಥ ಮಾಡಲಾಗುವುದು ಎಂದು ತಿಳಿಸಿದರು. ಬಳಿಕ ಮಾತನಾಡಿದ ತಹಶಿಲ್ದಾರ ಆನಂದ ಶೀಲ್ ಅವರು, ಸರ್ಕಾರದ ಆದೇಶದಂತೆ ಶಾಸಕರ ಅಧ್ಯಕ್ಷತೆಯಲ್ಲಿ ಪ್ರಥಮ ಸಭೆ ನಡೆಸಲಾಗಿದ್ದು, ದಾಖಲಾತಿ ಬಂದ ನಂತರ ಸಮಿತಿ ಪರಿಶೀಲನೆ ಮಾಡಿ ಜನೆವರಿ 24ರಂದು ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು. ಸಭೆಯಲ್ಲಿ ಸಮಿತಿಯ ಸದಸ್ಯರಾದ ಅರ್ಜುನ್ ಗೊಬ್ಬೂರಕರ್, ಸಾಹೇರಾಬಾನು, ಭೀಮಾಶಂಕರ ಪೂಜಾರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಅಯ್ಯಪ್ಪ ಮಾಲಾಧಾರಿಗಳಿಂದ ಇರುಮುಡಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.9: ತಾಲೂಕಿನ ಖಟಕ ಚಿಂಚೋಳಿಯ ಶಾಂತಲಿಂಗೇಶ್ವರ ದೇವಾಲಯದ ಹುಲಕುಂಟಿ ಮಠದ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳಿಂದ ಇರುಮುಡಿ ಮತ್ತು ಮಹಾಪಡಿ ಪೂಜಾ ಮಹೋತ್ಸವ ಭಕ್ತಿ ಭಾವದಿಂದ ಜರುಗಿತು.

ಅಯ್ಯಪ್ಪ ಸ್ವಾಮಿ ಪೂಜೆಗಾಗಿ ಸುಂದರ ಮಂಟಪ ನಿರ್ಮಿಸಲಾಗಿತ್ತು .ಮಂಟಪದ ಎಡ ಬದಿಯಲ್ಲಿ ಸಂಕಷ್ಟ ನಿವಾರಕ ಗಣೇಶ, ಅಯ್ಯಪ್ಪ ಸ್ವಾಮಿ, ಕಾರ್ತಿ-ಕೇಯ ಸ್ಥಾಪಿಸಿ ಪೂಜೆ ಸಲ್ಲಿಸಲಾಯಿತು ಇರುಮುಡಿ ಹೊತ್ತಾಗ 18 ಮೆಟ್ಟಿಲು ಸಾಗಬೇಕು ಹೀಗಾಗಿ ಅಯ್ಯಪ್ಪ ಸ್ವಾಮಿ ಮುಂಭಾಗದಲ್ಲಿ 18 ನಂದಾದೀಪ ಬೆಳಗಿಸಿ ಹೂ, ಹಣ್ಣು, ಕರ್ಪೂರಗಳಿಂದ ವಿಶೇಷವಾದ ಪೂಜೆ ಸಲ್ಲಿಸಲಾಯಿತು.

ಖಟಕ ಚಿಂಚೋಳಿಯಿಂದ ಪ್ರತಿ ವರ್ಷ ಅನೇಕ ಭಕ್ತರು ಹರಕೆ ಹೊತ್ತು ಅಯ್ಯಪ್ಪ ಸ್ವಾಮಿ ದರ್ಶನಕ್ಕೆ ತೆರಳುತ್ತಾರೆ . ಕೆಲ ಭಕ್ತರಿಂದ ತುಪ್ಪದ ಕಾಯಿಯನ್ನು ತುಂಬಿಸಿ ಅಯ್ಯಪ್ಪ ಸ್ವಾಮಿಗಳ ಜೊತೆಗೆ ಕಳುಹಿಸಲಾಗುತ್ತದೆ . ಭಜನೆ ಮತ್ತು ಅಯ್ಯಪ್ಪ ಸ್ವಾಮಿಗಳ ಹಾಡುಗಳ ಮೂಲಕ ವಿಶೇಷ ಪೂಜೆ ಸಲ್ಲಿಸಿದರು. ಅಯ್ಯಪ್ಪನ ಭಜನೆ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು. ಪ್ರಸಾದ ವಿತರಣೆ ಸಂಗಮೇಶ್ ಕುರುಬಕೇಳಗಿ ಅವರಿಂದ ನಡ'ಯಿತು.

ಅಯ್ಯಪ್ಪ ಸ್ವಾಮಿ ಸೇವಾ ಸನ್ನಿಧಾನ ಟ್ರಸ್ಟ್ ವತಿಯಿಂದ ನಡೆದ ಮಹಾಪಡಿ ಪೂಜೆಯಲ್ಲಿ ಹಿರಿಯ ಮಾಲಾಧಾರಿಗಳಾದ ನಾಗರಾಜ ಸಜ್ಜನಶೆಟ್ಟಿ, ಗುಂಡು ಸ್ವಾಮಿ, ನಾಗರಾಜ ಚಿಲಶೆಟ್ಟಿ, ಸಂತೋಷ್ ರೆಡ್ಡಿ, ಸತೀಶ್ ಸಂಗೊಳಗಿ ಹಾಗೆಯೇ ಡಾ. ಶೈಲೇಶ್ ಅಷ್ಟುರೆ, ಲೋಕೇಶ್ ಪವಾರ್, ಸೋಮಶೇಖರ ಕೋರಿ ,ಸ್ವಾಮಿ ಭದ್ರೇಶ್, ಕಾಶಿನಾಥ್, ಮೃತುಂಜಯ್, ರಾಹುಲ್ ಸುಂಟೆ, ಸಂಗಮೇಶ್, ಅಭಿಷೇಕ್ ಇನ್ನಿತರ ಮಾಲಾಧಾರಿಗಳು ಉಪಸ್ಥಿತರಿದ್ದರು.

# ಭವಿಷ್ಯದಲ್ಲಿ ಆಹಾರ ಪೌಷ್ಟಿಕಾಂಶದ ಭದ್ರತೆ ಸಾಧಿಸಲು ಸ್ಮಾರ್ಟ್ ಕೃಷಿಗೆ ಬದಲಾಗಬೇಕು: ಡಾ.ಎಸ್.ವಿ.ಸುರೇಶ



ಮಲ್ಲಮ ನುಡಿ ವಾರ್ತೆ

ರಾಯಚೂರು ಜ.09:ದೇಶದಲ್ಲಿ ಹೆಚ್ಚುತ್ತಿರುವ ಜನಸಂಖ್ಯೆಗೆ ಭವಿಷ್ಯದಲ್ಲಿ ಆಹಾರ ಮತ್ತು ಪೌಷ್ಟಿಕಾಂಶದ ಭದ್ರತೆಯನ್ನು ಸಾಧಿಸಲು ನಾವು ಸ್ಮಾರ್ಟ್ ಕೃಷಿಗೆ ಬದಲಾಗಬೇಕಾಗಿದೆ ಎಂದು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಗೌರವಾನ್ವಿತ ಕುಲಪತಿಗಳಾದ ಡಾ. ಎಸ್. ವಿ. ಸುರೇಶ ಅವರು ಹೇಳಿದರು.

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು ಬೆಂಗಳೂರಿನ ಕೃಷಿ ವಿಶ್ವವಿದ್ಯಾನಿಲಯ, ದಕ್ಷಿಣ ವಲಯ ಭಾರತೀಯ ವಿಸ್ತರಣಾ, ಶಿಕ್ಷಣ ಸಂಘ, ಬೆಂಗಳೂರು ಹಾಗೂ ಹೈದರಾಬಾದ ಮತ್ತು ಬೆಂಗಳೂರುಗಳಲ್ಲಿ ಸ್ಥಿತ ಭಾರತೀಯ ಕೃಷಿ ಅನುಸಂಧಾನ ಪರಿಷತ್ತಿನ ಕೃಷಿ ತಾಂತ್ರಿಕ ವರ್ಗಾವಣೆ ಸಂಸ್ಥೆಗಳ ಸಹಯೋಗದೊಂದಿಗೆ ಏರ್ಪಡಿಸಿದ್ದ ಕೃಷಿ ಮತ್ತು ಕೃಷಿ ಅವಲಂಬಿತ ವಿಸ್ತರಣಾ ಚಟುವಟಿಕೆಗಳಲ್ಲಿ ಕೃತಕ ಬುದ್ಧಿಮತ್ತೆಯ ಬಳಕೆಯ ಕುರಿತು ಜನವರಿ 9ರಂದು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಶ್ರೀ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ಆರಂಭವಾದ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಕೃತಕ ಬುದ್ಧಿಮತ್ತೆಯು ಸ್ಮಾರ್ಟ್ ಕೃಷಿಗಳಲ್ಲಿ ಒಂದಾಗಿದ್ದು, ಇದು ನೈಜ ಸಮಯದಲ್ಲಿ ಪರಿಹಾರಗಳನ್ನು ರೈತರಿಗೆ ತಲುಪಿಸಲು ಸಹಾಯ ಮಾಡುತ್ತದೆ. ಆದಾಗ್ಯೂ, ಸಣ್ಣ ಮತ್ತು ಅತಿಸಣ್ಣ ರೈತರಿಗೆ ಈ ಕೃತಕ ಬುದ್ಧಿಮತ್ತೆಯು ಹೊಂದಾಣಿಕೆಯಾಗುತ್ತದೆಯೇ ಎಂಬ ಪ್ರಶ್ನೆಗಳು ಹುಟ್ಟುತ್ತಿವೆ ಹಾಗೂ ಈ ಸಮಸ್ಯೆಗಳನ್ನು ನಾವೆಲ್ಲರೂ ಸೇರಿ ಸಂಶೋಧನೆ ಕೈಗೊಂಡು ಪರಿಹಾರಿಸಬೇಕಾಗಿದೆ. ಕೃತಕ ಬುದ್ಧಿಮತ್ತೆ ಪರಿಕಲ್ಪನೆಯ ಬಳಕೆಯ ಬಗ್ಗೆ ರೈತರನ್ನು ಸಬಲೀಕರಣಗೊಳಿಸಲು ವಿಸ್ತರಣಾ ವೃತ್ತಿಪರರು ಇದರ ಬಗ್ಗೆ ಜ್ಞಾನ ಮತ್ತು ಕೌಶಲ್ಯವನ್ನು ಹೊಂದಿದಾಗ ಮಾತ್ರ ರೈತರನ್ನು ಪ್ರೇರೇಪಿಸಬಹುದಾಗಿದೆ. ಈ ನಿಟ್ಟಿನಲ್ಲಿ ನಾವುಗಳು ಇನ್ನೂ ಮುಂದೆ ಸಾಗಬೇಕಾಗಿದೆ ಎಂದು ತಿಳಿಸಿದರು.

ಬದಲಾವಣೆಯೊಂದಿಗೆ ನಮ್ಮನ್ನು ನಾವು ಬದಲಾಯಿಸಿಕೊಂಡಗ ಮಾತ್ರ ಹೆಚ್ಚಿನ ದಕ್ಷತೆಯನ್ನು ಸಾಧಿಸಬಹುದು ಹಾಗೂ ಸವಾಲುಗಳಿಗೆ ತಕ್ಕ ಪರಿಹಾರಗಳನ್ನು ಕಂಡುಕೊಳ್ಳಬಹುದು ಎಂದ ಅವರು, ಈ ಸಂದರ್ಭದಲ್ಲಿ 1965ರಲ್ಲಿ ಹಸಿರು ಕ್ರಾಂತಿಯ ಪ್ರಾರಂಭ ನಂತರದ ಪರಿಣಾಮದ ಉದಾಹರಣೆಯನ್ನು ಅವರು ಉಲ್ಲೇಖಿಸಿದರು.

ಅಧ್ಯಕ್ಷತೆ ವಹಿಸಿದ್ದ ಗೌರವಾನ್ವಿತ ಕುಲಪತಿಗಳಾದ ಡಾ.ಎಂ. ಹನುಮಂತಪ್ಪ ಅವರು ಮಾತನಾಡಿ, ಕೃಷಿ ವಿಸ್ತರಣೆ ಕೆಲಸವು ಸಂಕೀರಣ ಹಾಗೂ ಕಠಿಣವಾಗಿದ್ದು ಇವುಗಳನ್ನು ಕೋವಿಡ್-19ರ ಸಮಯದಲ್ಲಿ ನಾವೆಲ್ಲರೂ ಕಲಿತದ್ದಾಗಿದೆ ಎಂದರು. ರೈತರ ಅಗತ್ಯವನ್ನು ಆಧರಿಸಿ ರಾಯಚೂರು ಕೃಷಿ ವಿಶ್ವವಿದ್ಯಾಲಯವು ಕೃತಕ ಬುದ್ಧಿಮತ್ತೆ ಸಂಬಂಧಿತ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸಿದೆ ಮತ್ತು ಅವುಗಳಲ್ಲಿ ಇ-ಸ್ಯಾಪ್ ತಂತ್ರಜ್ಞಾನವು ಹೆಸರುವಾಸಿಯಾಗಿದ್ದು ಸದ್ಯಕ್ಕೆ ಇದನ್ನು ಕರ್ನಾಟಕ ಮತ್ತು ನೆರೆ-ಹೊರೆಯ ರಾಜ್ಯಗಳು ಅಳವಡಿಸಿವೆ. ಭವಿಷ್ಯದಲ್ಲಿ ಕೃಷಿಯಲ್ಲಿ ದಕ್ಷತೆ ಮತ್ತು ಹೆಚ್ಚಿನ ಉತ್ಪಾದಕತೆಯನ್ನು ಸಾಧಿಸುವಲ್ಲಿ ಕೃತಕ ಬುದ್ಧಿಮತ್ತೆಯ ಬೆಳವಣಿಗೆಗೆ ಸಾಕಷ್ಟು ಅವಕಾಶಗಳಿವೆ ಎಂದು ತಿಳಿಸಿದರು.

ಮುಖ್ಯ ಅತಿಥಿ, ಭಾರತೀಯ ಕೃಷಿ ಅನುಸಂಧಾನ ಪರಿಷತ್ತಿನ ವಿಸ್ತರಣಾ ವಿಭಾಗದ ಸಹಾಯಕ ಮಹಾನಿರ್ದೇಶಕರಾದ ಡಾ. ಆರ್. ರಾಯ್, ರ್ಮನ್ ಅವರು ಮಾತನಾಡಿ, ಕೃಷಿ ವ್ಯವಸ್ಥೆಯಲ್ಲಿ ಬ್ಲಾಕ್ ಚೈನ್ ತಂತ್ರಜ್ಞಾನ, ದತ್ತಾಂಶಗಳನ್ನು ಆಧಾರಿಸಿ ಅಭಿವೃದ್ಧಿಗೊಂಡ ಕೃತಕ ಬುದ್ಧಿಮತ್ತೆಯ ಬಳಕೆಯ ಬಗ್ಗೆ ತಿಳಿಸಿದರು. ಇದು ಕೃಷಿ ವಲಯವನ್ನು ಉತ್ತಮ ರೀತಿಯಲ್ಲಿ ನಿರ್ವಹಿಸಲು ಸಹಾಯ ಮಾಡುತ್ತದೆ. ಆದ್ದ-ರಿಂದ, ರೈತರಿಗೆ ಇದರ ಬಗ್ಗೆ ಜ್ಞಾನ ಮತ್ತು ಕೌಶಲ್ಯವನ್ನು ನೀಡುವುದು ಅತ್ಯವಶ್ಯವಾಗಿದೆ ಎಂದರು. ರಾಯಚೂರು ಕೃಷಿ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಗೌರವಾನ್ವಿತ ಸದಸ್ಯರಾದ ತಿಮ್ಮಪ್ಪ ಸೋಮಪ್ಪ ಚವಡಿ ಅವರು ಕೃಷಿ ಉತ್ಪನ್ನಗಳ ಉತ್ತಮ ಬೆಲೆ ನಿಗದಿಯಾಗಬೇಕು ಎಂದು ಇದೆ ವೇಳೆ ಒತ್ತಾಸೆ ಮಾಡಿದರು. ಭವಿಷ್ಯದಲ್ಲಿ ಕೃತಕ ಬುದ್ಧಿಮತ್ತೆ ಈ ನಿಟ್ಟಿನಲ್ಲಿಯೂ ಸಹ ಸಹಾಯ ಮಾಡುತ್ತದೆ ಎಂದು ತಿಳಿಸಿದರು.

ರಾಯಚೂರು ಕೃಷಿ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಸದಸ್ಯರಾದ ಡಿ.ಮಲ್ಲಿಕಾರ್ಜುನ ಅವರು ಕೃಷಿಯಲ್ಲಿ ನಿಖರತೆಯನ್ನು ಸುಧಾರಿಸಲು ಕೃತಕ ಬುದ್ಧಿಮತ್ತೆ ಖಂಡಿತವಾಗಿ ಸಹಾಯ ಮಾಡುತ್ತದೆ ಮತ್ತು ಎಲ್ಲಾ ವರ್ಗದ ರೈತರು ಈ ಹೊಸ ತಂತ್ರಜ್ಞಾನದ ಬಗ್ಗೆ ಗಮನಹರಿಸಬೇಕಾಗಿದೆ ಎಂದು ಹೇಳಿದರು.

ಸಮ್ಮೇಳನದ ಸಂಘಟನಾ ಕಾರ್ಯದರ್ಶಿ ಡಾ. ಎಸ್. ಬಿ. ಗೌಡಪ್ಪ ಸ್ವಾಗತಿಸಿದರು ಮತ್ತು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಡಾ. ಸಿ. ನಾರಾಯಣ ಸ್ವಾಮಿ ವಂದಿಸಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಗೌರವಾನ್ವಿತ ಸದಸ್ಯರು, ಅಧಿಕಾರಿಗಳು, ದೇಶದಾದ್ಯಂತ ಆಗಮಿಸಿದ ಪ್ರತಿನಿಧಿಗಳು ಮತ್ತು ವಿದ್ಯಾರ್ಥಿಗಳನ್ನೊಳಗೊಂಡಂತೆ 300 ಕ್ಕೂ ಹೆಚ್ಚು ಗಣ್ಯರು ಮತ್ತು ಪ್ರತಿನಿಧಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ಚಿಟಗುಪ್ಪ; ತಾಲೂಕ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್ ಅವರಿಗೆ ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆಯ ಕ್ಯಾಲೆಂಡರ್ ನೀಡಲಾಯಿತು.



ಯಾದಗಿರಿ ಜಿಲ್ಲಾಧಿಕಾರಿಗಳಾದ ಡಾ. ಸುಶೀಲಾ ಬಿ ಇವರಿಗೆ ಮಲ್ಲಮ್ಮ ನುಡಿ ದಿನಪತ್ರಿಕೆಯ ಕ್ಯಾಲೆಂಡರ್ ಅನ್ನು ನೀಡಲಾಯಿತು

## ಅಪ್ರಾಪ್ತ ವಿದ್ಯಾರ್ಥಿನಿಯ ಅತ್ಯಾಚಾರ

ಚಿಂಚೋಳಿ,ಜ.9:ಹನ್ನೆರಡು ವರ್ಷ ವಯಸ್ಸಿನ ಅಪ್ರಾಪ್ತ ಬಾಲಕಿಯ ಮೇಲೆ ವ್ಯಕ್ತಿಯೊಬ್ಬ ಅತ್ಯಾಚಾರ ನಡೆಸಿರುವ ಘಟನೆ ಚಿಂಚೋಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಆರೋಪಿಯು ಬಾಲಕಿಯ ಶಾಲೆಗೆ ಹೋಗಿ ದ್ವಿಚಕ್ರ ವಾಹನದ ಮೇಲೆ ಅಪಹರಣ ಮಾಡಿ ಲೈಂಗಿಕ ಕಿರುಕುಳ ನೀಡಿದ್ದಲ್ಲದೆ, ಕಳೆದ ಒಂದು ತಿಂಗಳಿನಿಂದ ಬಾಲಕಿ ಮೇಲೆ ಅತ್ಯಾಚಾರವೆಸಗಿದ್ದಾನೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಕರ್ನಾಟಕ ಸರ್ಕಾರ

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ, ಬೀದರ.**

ದೂರವಾಣಿ: 08482-233126/27. ಫಾಕ್ಸ್ :08482-233127. ಇ-ಮೇಲ್: dhobidar@gmail.com

ಸಂಖ್ಯೆ:ಕೆಕೆಆರ್‌ಡಿಬಿ/ಆರೋಗ್ಯ/ಸಿಆರ್-01/2024-25. ದಿನಾಂಕ:06.01.2025

**:: ಟೆಂಡರ್ ಪ್ರಕಟಣೆ ::**

2024-25 ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ಮ್ಯಾಕ್ರೋ ಕ್ರಿಯಾ ಯೋಜನೆ ಅಡಿಯಲ್ಲಿ ಒಟ್ಟು 01 ಕಾಮಗಾರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೀದರ, ಅಧೀನದಲ್ಲಿ ಈ ಕೇಳಕಂಡ ಕಾಮಗಾರಿಗಳಲ್ಲಿ ಉಪಕರಣಗಳು ಹಾಗೂ ಆಂಬ್ಯುಲೇನ್ಸ ವಾಹನಗಳ ಖರೀದಿಗಾಗಿ ಟೆಂಡರ ದ್ವಿಲಕೋಟೆ ಪದ್ದತಿ ಅಡಿಯಲ್ಲಿ ಕೆ.ಪಿ.ಪಿ.ಪಿ ಪೋರ್ಟಲ್ ವೇದಿಕೆಯ ಮೂಲಕ ಟೆಂಡರ ಅಹ್ವಾನಿಸಲಾಗಿದೆ. ಇಚ್ಛೆ ಉಳ್ಳುವ ಗುತ್ತಿಗೆಗಾರರು ದಿನಾಂಕ:04.01.2025 ರಿಂದ 23.01.2025 ಸಾಯಂಕಾಲ 5:00 ಗಂಟೆಯವರಗೆ ಟೆಂಡರ ಭರಿಸಲು ಅವಕಾಶ ನೀಡಲಾಗಿರುತ್ತದೆ, ದಿನಾಂಕ:24.01.2025 ಸಾಯಂಕಾಲ 5:15 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ, ಬೀದರ ತಾಂತ್ರಿಕ ಲಕೋಟೆಯನ್ನು ತೆರೆಯಲಾಗುತ್ತದೆ, ಪ್ರತಿ ಟೆಂಡರಿನ ಅನುಗೂಣವಾಗಿ ಇ.ಎಂ.ಡಿ. ಮೊತ್ತ 2.5%. ಟೆಂಡರಿನ ಸಂಪೂರ್ಣ ವಿವರಗಳನ್ನು ಕೆಪಿಪಿಪಿ ಪೋರ್ಟಲ್ ವೆಬ್‌ಸೈಟಿನ ವಿಳಾಸ: kppp Portal (karnataka.gov.in) ನಲ್ಲಿ ದಿನಾಂಕ:04.01.2025. ರಿಂದ ಪಡೆಯಬಹುದು.

1) ಸಂಸ್ಥೆಯ ಹೆಸರು : **Supply of Medical Equipments To CHC Hulsoor**,2) ಕಡತ ಸಂಖ್ಯೆ : **DHFWS/2024-25/IND1233,** 3) ಮೊತ್ತ (ಲಕ್ಷಗಳಲ್ಲಿ) : **25.00,** 4) ಷರಾ : -

ಟೆಂಡರ್ ಯಾವುದೇ ಕಾರಣ ನೀಡದೇ ತಿರಸ್ಕರಿಸುವ ಹಕ್ಕನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಬೀದರ ಅವರಿಗೆ ಕಾಯ್ದಿರಿಸಲಾಗಿದೆ. ಹೆಚ್ಚಿನ ವಿವರಗಳನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿರುತ್ತದೆ.

ಸಹಿ/- ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಬೀದರ

ವಾ.ಸಾ.ಸಂ.ಇ/ಬೀದರ/345/ಕೆ.ಎಸ್.ಎಂ.ಸಿ.&ಎ/2024-25

Printed, Published and Owned by : Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad - 585330.
Editor: Ramesh Reddy, Office Ph. No: +91 9449732000.